ಸಂಪುಟ: 13 Volume ಸಂಚಿಕೆ: 315 Issue ಪುಟಗಳು 08 Pages ಬುಧವಾರ 04 ಫೆಬ್ರವರಿ 2026 ₹6 PRGINO.120927 (RNINO: KARKAN/2011/48371) BDR/054/2026-2027 www.mallammanudi.in mallammanudi@gmail.com 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ಪ್ರೀತಿ ಇದ್ದಲ್ಲಿ ನಂಬಿಕೆ ಇರಲೇ ಬೇಕೆಂದಿಲ್ಲ ಆದರೆ ನಂಬಿಕೆ ಇದ್ದಲ್ಲ ಪ್ರೀತಿ ಇದ್ದೇ ಇರುವುದು.

–ಸಂತ ಕಬೀರ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ ಕನ್ನಡ ಕಿರಣ

ಸಂಪಾದಕರು: ರಮೇಶ ರೆಡ್ಡಿ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಫೆ.12ರಂದು ಮುಷ್ಕರಕ್ಕೆ ಕರೆ 6

ಕಾಮಗಾರಿಯಲ್ಲಿ ಲೋಪ ಕಂಡಲ್ಲಿ ಕ್ರಮ: ಸಿಇಓ 7

ನರಸಿಂಹರಾವ್‌ರಿಂದ ಕುಂದುಕೊರತೆ ವಿಚಾರಣೆ 8



ಬಸವಕಲ್ಯಾಣದ ಶ್ರೀ ಬಸವೇಶ್ವರ ದೇವಸ್ಥಾನ ಪಂಚಕಮಿಟಿ ಹಾಗೂ ವಿಶ್ವಸ್ಥ ಸಮಿತಿ ವತಿಯಿಂದ, ಅಖಿಲ ಭಾರತ ವೀರಶೈವ ಮಹಾಸಭಾ ರಾಷ್ಟ್ರಿಯ 24ನೇ ಅಧ್ಯಕ್ಷರಾಗಿ ಆಯ್ಕೆಯಾದ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರಾದ ಈಶ್ವರ ಖಂಡ್ರೆ ಅವರನ್ನು ಗೌರವಪೂರ್ವಕವಾಗಿ ಅಭಿನಂದಿಸಲಾಯಿತು.

## ಎಂಟು ಜನ ಕಾಂಗ್ರೆಸ್ ಸಂಸದರ ಸಸ್ಪೆಂಡ್

• ಮಲ್ಲಮ್ಮ ನುಡಿ ವಾರ್ತೆ ನವದೆಹಲಿ

ಮಾಜಿ ಸೇನಾ ಮುಖ್ಯಸ್ಥ ಎಂ.ಎಂ. ನರವಾಣೆ ಅವರ ಅಪ್ರಕಟಿತ ಪುಸ್ತಕದಲ್ಲಿನ ಅಂಶಗಳನ್ನು ಉಲ್ಲೇಖಿಸಲು ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ಅವಕಾಶ ನಿರಾಕರಿಸಿದ್ದಕ್ಕಾಗಿ ಲೋಕಸಭೆಯಲ್ಲಿ ತೀವ್ರ ಕೋಲಾಹಲಕ್ಕೆ ಕಾರಣವಾಗಿದೆ. ಎಂಟು ಕಾಂಗ್ರೆಸ್ ಸಂಸದರನ್ನು ಲೋಕಸಭೆ ಸ್ಪೀಕರ್ ಅಮಾನತುಗೊಳಿಸಿದ್ದಾರೆ. ಸಂಸದರಾದ ಹಿಬಿ ಈಡನ್, ಸಿ. ಕಿರಣ್ ಕುಮಾರ್ ರೆಡ್ಡಿ, ಗುರ್ಜೀತ್ ಸಿಂಗ್ ಔಜ್ಲಾ, ಅಮರಿಂದರ್ ಸಿಂಗ್ ರಾಜಾ ವಾರಿಂಗ್, ಮಾಣಿಕ್ಕಮ್ ಟ್ಯಾಗೋರ್, ಪ್ರಶಾಂತ್ ಪಡೋಲ್ ಮತ್ತು ಡೀನ್ ಕುರಿಯಾಕೋಸ್ ಅವರನ್ನು



ಸ್ಪೀಕರ್ ಪೀಠದ ಕಡೆಗೆ ಕಾಗದಗಳನ್ನು ಎಸೆದ ಆರೋಪದ ಮೇಲೆ ಅಮಾನತುಗೊಳಿಸಲಾಗಿದೆ. ತೀವ್ರಗದ್ದಲದ ನಡುವೆ ಲೋಕಸಭೆಯ ಕಲಾಪವನ್ನು ನಾಳೆಗೆ ಮುಂದೂಡಲಾಗಿದೆ. ಅಮಾನತು ಖಂಡಿಸಿ ರಾಹುಲ್ ಗಾಂಧಿ ನೇತೃತ್ವದಲ್ಲಿ ಸಂಸತ್ತಿನ ಹೊರಗೆ ಪ್ರತಿಭಟಿಸಿದ್ದಾರೆ.

## ಶೇ.18 ಸುಂಕ ಕಡಿತ

• ಮಲ್ಲಮ್ಮ ನುಡಿ ವಾರ್ತೆ ನವದೆಹಲಿ



ಭಾರತೀಯ ಸರಕುಗಳ ಮೇಲಿನ ಸುಂಕವನ್ನು ಶೇ 25 ರಿಂದ ಶೇ 18ಕ್ಕೆ ಇಳಿಸಿದ್ದಕ್ಕಾಗಿ ಭಾರತದ 1.4 ಬಿಲಿಯನ್ ಜನರ ಪರವಾಗಿ ಪ್ರಧಾನಿ ನರೇಂದ್ರ ಮೋದಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಗೆ ಧನ್ಯವಾದ ಅರ್ಪಿಸಿದ್ದಾರೆ.

ಟ್ರಂಪ್ ಸುಂಕ ಕಡಿತವನ್ನು ಘೋಷಿಸಿದ ಕೆಲವೇ ನಿಮಿಷಗಳ ನಂತರ ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ ನರೇಂದ್ರ ಮೋದಿ, ಭಾರತದಲ್ಲಿ ತಯಾರಾದ ಉತ್ಪನ್ನಗಳು ಈಗ ಶೇ 18ರಷ್ಟು ಕಡಿಮೆ ಸುಂಕವನ್ನು ಹೊಂದಿರುವುದು ಸಂತೋಷ ತಂದಿದೆ ಎಂದು ವಿವರಿಸಿದ್ದಾರೆ.

## ಮಕ್ಕಳ ಸಾಂಸ್ಕೃತಿಕ ಸಂಭ್ರಮ




**ಕೊಪ್ಪಳ:** ನಗರದ ಗೌರಿ ಅಂಗಳದಲ್ಲಿರುವ ಶ್ರೀ ವಿನಾಯಕ ಪಬ್ಲಿಕ್ ಸ್ಕೂಲ್‌ನ 19ನೇ ಶಾಲಾ ವಾರ್ಷಿಕೋತ್ಸವ ಸಮಾರಂಭ ನಡೆಯಿತು. ಇದೇ ವೇಳೆ ಮಾತನಾಡಿದ ಮಹಾಲಕ್ಷ್ಮಿ ಕಂದಾರಿ, ಮಕ್ಕಳು ಓದಿನ ಜೊತೆಗೆ ಮಾನವೀಯ ಮೌಲ್ಯಗಳನ್ನು ರೂಢಿಸಿಕೊಳ್ಳಬೇಕುಎಂದರು. ಪ್ರತಿಭಾನ್ವಿತ ಮಕ್ಕಳಿಗೆ ಮತ್ತು ವಿಶೇಷ ಆಹ್ವಾನಿತರಿಗೆ ಸನ್ಮಾನಿಸಿ ಗೌರವಿಸಲಾಯಿತು. ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳಾದ ನೃತ್ಯ,ನಾಟಕ,ಹಾಸ್ಯ ಗಮನ ಸೆಳೆದವು.ಬಸವರಾಜ ಶಹಾಪೂರ,ವಿರುಪಾಕ್ಷ ಗಂಗನಾಳ,ವಿಜಯಕುಮಾರ ಗುದಗಿ, ವಿರುಪಾಕ್ಷ ಗೌಡ್ರು ಪೊಲೀಸ್ ಪಾಟೀಲ, ವಿರುಪಾಕ್ಷಪ್ಪ ಕೊಪ್ಪಳ, ಪೊಲೀಸ್ ಪಾಟೀಲ, ಶೈಲಜಾ. ಅನಿತಾ, ಕವಿತಾ, ಚಾಂದಿನಿ ಇದ್ದರು.

# ಸದನ ಕಲಕಿದ ಕಲಹ

## ವಿಧಾನ ಪರಿಷತ್ತಿನಲ್ಲಿ ಎಂಎಲ್ಸಿ ಹೇಳಿಕೆಯಿಂದ ಕೋಲಾಹಲ | ಸಸ್ಪೆಂಡ್ ಮಾಡಲು ಪ್ರತಿಪಕ್ಷ ಪಟ್ಟು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕರ್ನಾಟಕ ವಿಧಾನ ಪರಿಷತ್ತಿನಲ್ಲಿ ಎಂಎಲ್ಸಿ ಹೇಳಿಕೆಯಿಂದ ಕೋಲಾಹಲದ ವಾತಾವರಣ ನಿರ್ಮಾಣವಾಗಿದೆ. ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಕಾಂಗ್ರೆಸ್ ಎಂಎಲ್ಸಿ ನಜೀರ್ ಅಹ್ಮದ್ ನೀಡಿದ ಅವಹೇಳನಕಾರಿ ಹೇಳಿಕೆಗಳ ಹಿನ್ನೆಲೆಯಲಿ ಗದ್ದಲ ಸೃಷ್ಟಿಯಾಗಿದ್ದು, ಪರಸ್ಪರ ವಾಕ್ಸಮರಕ್ಕೆ ಸದನ ಸಾಕ್ಷಿಯಾಗಿದೆ.

**ಹೊರ ಹಾಕಿದ ಆಕ್ರೋಶ:** ಕಾಂಗ್ರೆಸ್ ಪರಿಷತ್ ಸದಸ್ಯ ನಜೀರ್ ಅಹ್ಮದ್ ಅವರು ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡಿದ್ದರಿಂದ ಕೆರಳಿದ ಬಿಜೆಪಿ ಸದಸ್ಯರು, ಸದನದ ಬಾವಿಗಿಳಿದು ಪ್ರತಿಭಟನೆ ನಡೆಸಿ, ಆಕ್ರೋಶ ಹೊರಹಾಕಿದ್ದಾರೆ. ನಜೀರ್ ಬೇಷರತ್ ಕ್ಷಮೆಯಾಚಿಸಬೇಕು ಎಂದು ಪಟ್ಟು ಹಿಡಿದಿದ್ದಾರೆ.

**ಬಾವಿಗಿಳಿದು ಘೋಷಣೆ:** ಬಿಜೆಪಿ ಸದಸ್ಯರು ಸದನದ ಬಾವಿಗೆ ಇಳಿದು ನಜೀರ್ ಅಹ್ಮದ್ ವಿರುದ್ಧ ಘೋಷಣೆಗಳನ್ನು ಕೂಗಿದರು. ಸಭಾಪತಿ ಬಸವರಾಜ ಹೊರಟ್ಟಿ ಕೂಡ ನಜೀರ್ ಅಹ್ಮದ್ ಬೇಷರತ್ ಕ್ಷಮೆಯಾಚಿಸಬೇಕು ಎಂದು ಒತ್ತಾಯಿಸಿದ್ದಾರೆ.



### ಶಾಸಕಾಂಗದಿಂದ ಸಸ್ಪೆಂಡ್‌ಗೂ ಸಿದ್ಧ..!

ಮಹಾತ್ಮ ಗಾಂಧಿ ನಿಜವಾದ 'ವಿಶ್ವ ಗುರು' ಎಂದು ನಂಬುವುದರಿಂದ ಪ್ರಧಾನಿ ಅವರನ್ನು 'ವಿಶ್ವ ಗುರು' ಎಂದು ಕರೆಯುವುದನ್ನು ವಿರೋಧಿಸಿರುವುದಾಗಿ ಕಾಂಗ್ರೆಸ್ ಎಂಎಲ್ಸಿ ವಿವರಿಸಿದ್ದಾರೆ. ನನ್ನ ಹೇಳಿಕೆಗಳಿಗಾಗಿ ಶಾಸಕಾಂಗದಿಂದ ಸಸ್ಪೆಂಡ್‌ಗೆ ಸಿದ್ಧವಾಗಿದ್ದು, ಕ್ಷಮೆ ಕೇಳುವ ಪ್ರಶ್ನೆಯೇ ಇಲ್ಲ ಎಂದಿದ್ದಾರೆ. ಇದರಿಂದ ಗದ್ದಲ ಹೆಚ್ಚಾದಾಗ, ಸಭಾಪತಿ ಬಸವರಾಜ ಹೊರಟ್ಟಿ ಕಲಾಪವನ್ನು ಮುಂದೂಡಿದರು.

### ಅಸಲು ಹೇಳಿದ್ದೇನು..?

ರಾಜ್ಯಪಾಲರ ಭಾಷಣದ ಮೇಲಿನ ಚರ್ಚೆಗೆ ಸಿಎಂ ಉತ್ತರಿಸುತ್ತಿದ್ದ ವೇಳೆ ಕಾಂಗ್ರೆಸ್ ಪರಿಷತ್ ಸದಸ್ಯ ನಜೀರ್ ಅಹ್ಮದ್ ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ದೇಶದ್ರೋಹಿ ಎಂದಿದ್ದರು. ಕೆರಳಿದ ಬಿಜೆಪಿ ಸದಸ್ಯರು, ಸದನದ ಬಾವಿಗಿಳಿದು ಪ್ರತಿಭಟಿಸಿದ್ದು, ಕಾಂಗ್ರೆಸ್ ವಿರುದ್ಧ ಘೋಷಣೆ ಕೂಗಿ ಆಕ್ರೋಶ ಹೊರಹಾಕಿದ್ದಾರೆ. ಸದಸ್ಯರ ವಾಗ್ವಾದ ಕೈ ಕೈ ಮಿಲಾಯಿಸುವ ಹಂತಕ್ಕೆ ತಲುಪಿತ್ತು.

### ಖಂಡನೀಯ ಕೃತ್ಯ: ಎಚ್ಡಿ ಕುಮಾರಸ್ವಾಮಿ

ವಿಧಾನ ಪರಿಷತ್ತಿನ ಸದಸ್ಯ ನಸೀರ್‌ಅಹ್ಮದ್ ಸದನದ ಘನತೆ ಮತ್ತು ಸಂಸದೀಯ ಮೌಲ್ಯ ಗಾಳಿಗೆ ತೂರಿದ್ದಾರೆ. ಮುಖ್ಯಮಂತ್ರಿಗಳ ಸಮ್ಮುಖದಲ್ಲಿಯೇ ದೇಶದ ಹೆಮ್ಮೆಯ ಪ್ರಧಾನ ಮಂತ್ರಿಗಳಾದ ಶ್ರೀ ನರೇಂದ್ರ ಮೋದಿ ಅವರನ್ನು ದೇಶದ್ರೋಹಿ ಎಂದು ಹೇಳಿರುವುದು ಅಮಾನವೀಯ, ಖಂಡ ನೀಯ ಕೃತ್ಯವಾಗಿದೆ ಎಂದು ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ತಿಳಿಸಿದ್ದಾರೆ.

ಗೌರವಾನ್ವಿತ ಪ್ರಧಾನಿ ಮೋದಿಯವರ ವಿರುದ್ಧ ಕಾಂಗ್ರೆಸ್ ಎಂಎಲ್ಸಿ ನಜೀರ್ ಅಹ್ಮದ್ ಅವರು ಅವಹೇಳನಕಾರಿ ಪದಗಳನ್ನು ಬಳಸಿರುವುದು ಕೀಳು ಮಟ್ಟದ ರಾಜಕೀಯಕ್ಕೆ ಉದಾಹರಣೆಯಾಗಿದೆ

–ಛಲವಾದಿ ನಾರಾಯಣಸ್ವಾಮಿ, ಬಿಜೆಪಿ ಧುರೀಣ

### ಪರಿಷತ್ ಅಧ್ಯಕ್ಷರಿಗೆ ದೂರು

ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ ಆರೋಪದ ಮೇಲೆ ಕಾಂಗ್ರೆಸ್ ಎಂಎಲ್ಸಿ ನಜೀರ್ ಅಹ್ಮದ್ ಅವರನ್ನು ತಕ್ಷಣವೇ ಸದನದಿಂದ ಅಮಾನತುಗೊಳಿಸಬೇಕೆಂದು ಒತ್ತಾಯಿಸಿ ಪ್ರತಿ ಪಕ್ಷ ಬಿಜೆಪಿ ಕರ್ನಾಟಕ ವಿಧಾನ ಪರಿಷತ್ತಿನ ಅಧ್ಯಕ್ಷ ಬಸವರಾಜ ಹೊರಟ್ಟಿ ಅವರಿಗೆ ದೂರು ನೀಡಿದೆ. ನಜೀರ್ ಅಹ್ಮದ್ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಯೂ ಆಗಿದ್ದಾರೆ.



ಸಂಸತ್ ಭವನದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವಲ್ಲಿ ನಡೆದ ಎನ್.ಡಿ.ಎ ಮೈತ್ರಿಕೂಟದ ಸಂಸದರ ಸಭೆಯಲ್ಲಿ ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ ಪಾಲ್ಗೊಂಡಿದ್ದು ಹೀಗೆ.

## ಮಾರ್ಚ್ ಅಂತ್ಯಕ್ಕೆ ಗ್ರಾ.ಪಂ. ಎಲೆಕ್ಷನ್

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಮಾರ್ಚ್ ಅಂತ್ಯದೊಳಗೆ ಎಲ್ಲಾ ಗ್ರಾ.ಪಂ. ಸದಸ್ಯರ ಅಧಿಕಾರ ಅವಧಿ ಮುಕ್ತಾಯವಾಗಲಿದೆ. ಇದರಿಂದ ಗ್ರಾಮ ಪಂಚಾಯಿತಿ ಚುನಾವಣೆಗೆ ಸಿದ್ಧತೆ ಮಾಡಿಕೊಳ್ಳುವಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಈಗಾಗಲೇ ಆದೇಶ ಹೊರಡಿಸಲಾಗಿದೆ ಎಂದು



ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ ಖರ್ಗೆ ತಿಳಿಸಿದ್ದಾರೆ. ವಿಧಾನಸಭೆಯಲ್ಲಿ ಗಮನ ಸೆಳೆಯುವ ಸೂಚನೆಯಡಿ ಶಾಸಕ ದೊಡ್ಡನಗೌಡ ಹನುಮಗೌಡ ಪಾಟೀಲ್ ಅವರು ರಾಜ್ಯ ವ್ಯಾಪ್ತಿಯಲ್ಲಿ ಗ್ರಾ.ಪಂ. ಸದಸ್ಯರ ಅವಧಿಯು ಮುಕ್ತಾಯಗೊಳ್ಳುತ್ತಿರುವುದರಿಂದ ಮುಂದಿನ ಚುನಾವಣೆ ವರೆಗೂ ಆಡಳಿತಾಧಿಕಾರಿಯನ್ನು ನೇಮಿಸುವ ಬದಲು ಈಗಿರುವ ಗ್ರಾ.ಪಂ. ಸದಸ್ಯರನ್ನೇ ಮುಂದುವರೆಸಬೇಕೆಂದು ಕೋರಿದ್ದಾರೆ. ಉತ್ತರಿಸಿದ ಸಚಿವ, ಚುನಾವಣೆ ನಡೆಸುವುದು ತುಂಬಾ ತಡವಾಗುವುದಾದರೆ ಮಾತ್ರ ಕಾನೂನಿನಡಿ ಗ್ರಾಮ ಪಂಚಾಯಿತಿ ಸದಸ್ಯರನ್ನೇ ಮುಂದುವರೆಸಲು ಅವಕಾಶವಿರುತ್ತದೆ ಎಂದು ಪ್ರತಿಕ್ರಿಯಿಸಿದ್ದಾರೆ.

## ತಿಮ್ಮಾಪುರ ರಾಜಿನಾಮೆಗೆ ಅಶೋಕ್ ಅಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಅಬಕಾರಿ ಇಲಾಖೆಯಲ್ಲಿ ನಡೆದಿದೆ ಎನ್ನಲಾದ ಹಗರಣದ ವಿಧಾನಸಭೆಯಲ್ಲಿ ಚರ್ಚೆಯ ಮತ್ತೇರಿಸಿದೆ. ನಿಯಮ 69 ಅಡಿಯಲ್ಲಿ ನಡೆದ ಚರ್ಚೆಯಲ್ಲಿ ಪ್ರತಿಪಕ್ಷಗಳು ಅಬಕಾರಿ ಸಚಿವ ಆರ್‌ಬಿ ತಿಮ್ಮಾಪೂರ ರಾಜೀನಾಮೆಗೆ ಬಿಗಿಪಟ್ಟು ಹಿಡಿದಿವೆ. ಪರಿಣಾಮ ಆಡಳಿತ– ಪ್ರತಿಪಕ್ಷಗಳ ನಡುವೆ ತೀವ್ರ ವಾಕ್ಸಮರ ನಡೆಯಿತು. ತನಿಖಾ ವರದಿ ಬರುವವರೆಗೂ ಸಚಿವ ಆರ್ ಬಿ ತಿಮ್ಮಾಪೂರ



ರಾಜೀನಾಮೆ ಕೊಡಬೇಕು ಎಂದು ವಿಪಕ್ಷ ನಾಯಕ ಆರ್ ಅಶೋಕ್ ಆಗ್ರಹಿಸಿದ್ದಾರೆ. ಅಶೋಕ್ ಭಾಷಣ ಮುಗಿಯುವಾಗ ಬಂದ ಸಿಎಂ ಸಿದ್ದರಾಮಯ್ಯ ಸದನಕ್ಕೆ ಆಗಮಿಸಿದರು. ಈ ವೇಳೆ ಸಿದ್ದರಾಮಯ್ಯ ಕಾಲೆಳೆದ ಅಶೋಕ್, ಸಿನಿಮಾದಲ್ಲಿ ಪೊಲೀಸರು ಕೊನೆಗೆ ಬರ್ತಾರೆ, ಹಾಗೆ ಸಿದ್ದರಾಮಯ್ಯ ಅವರು ಬಂದಿದ್ದಾರೆ. ಕೊನೆಗೆ ಬಂದು ಕಳ್ಳರ ಬಂಧನ ಮಾಡ್ತಾರೆ.. ಹಾಗೆ ಸಚಿವರ ಬಂಧನ ಮಾಡ್ತಾರಾ ನೋಡೋಣ ಎಂದು ಕಾಲೆಳೆದಿದ್ದಾರೆ.

## ಆಂಧ್ರದಲ್ಲಿ ಮಿಂಚಿದ ಬೀದರ್ ಕ್ರಿಕೆಟಿಗ





• ಮಲ್ಲಮ್ಮ ನುಡಿ ವಾರ್ತೆ ಬೀದರ್

ಬೀದರ್ ಮೂಲದ ಅಭಿಷೇಕ್ ರೆಡ್ಡಿ ಅವರು ಆಂಧ್ರಪ್ರದೇಶ ರಣಜಿ ಟೀಮ್ ಅನ್ನು ಕ್ವಾರ್ಟರ್ ಫೈನಲ್ ವರೆಗೆ ತಲುಪಿಸಲು ಅವರ ಕೊಡುಗೆ ಸಾಕಷ್ಟಿದೆ. ಈ ಸೀಜನ್ ನಲ್ಲಿ 582 ರನ್ ಗಳಿಸಿ (ಸರಾಸರಿ 64.67) ಆಂಧ್ರದ ಪರವಾಗಿ ಅತೀ ಹೆಚ್ಚು ರನ್ ಗಳಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. ರಣಜಿ ಕ್ರಿಕೆಟ್ ಪಂದ್ಯದಲ್ಲಿ ದೇಶದಲ್ಲಿಯೇ ಅತೀ ಹೆಚ್ಚು ರನ್ ಗಳಿಸಿದವರ ಸಾಲಿನಲ್ಲಿ ಅಭಿಷೇಕ್‌ರೆಡ್ಡಿ 14ನೇ ಸ್ಥಾನದಲ್ಲಿ ಇದ್ದಾರೆ. ಆಂಧ್ರ ಪ್ರದೇಶ ಟೀಮ್ ಸತತ 4 ರಣಜಿ ಪಂದ್ಯ ಗೆಲ್ಲಲು ಅಭಿಷೇಕ ರೆಡ್ಡಿ ಪಾತ್ರ ಪ್ರಮುಖವಾಗಿದೆ. ಒರಿಸ್ಸಾ, ತಮಿಳುನಾಡು, ವಿದರ್ಭ ಮತ್ತು ಜಾರ್ಖಂಡ್ ವಿರುದ್ಧ ನಡೆದ ಪಂದ್ಯದಲ್ಲಿ ಗೆದ್ದು ಆಂಧ್ರಕ್ಕೆ ಜಯ ತಂದುಕೊಟ್ಟರು. ಇದರಲ್ಲಿ ತಮಿಳುನಾಡು, ಜಾರ್ಖಂಡ್ ವಿರುದ್ಧ ಪಂದ್ಯದಲ್ಲಿ ಅಭಿಷೇಕ್ ರೆಡ್ಡಿ ಪಂದ್ಯ ಶ್ರೇಷ್ಠವಾದರು.

ಈ ರಣಜಿ ಸೀಜನ್ ದಲ್ಲಿ ಜಾರ್ಖಂಡ್ ವಿರುದ್ಧ 247 ರನ್ ಗಳಿಸಿ ಇಡೀ ದೇಶದಲ್ಲಿಯೇ 2ನೇ ಅತಿಹೆಚ್ಚು ವ್ಯಯಕ್ತಿಕ ರನ್ ಗಳಿಸಿದ ಕೀರ್ತಿ ಅಭಿಷೇಕ್ ರೆಡ್ಡಿ ಅವರಿಗೆ ಸಲ್ಲುತ್ತದೆ. ಈ ಸಲ ಕ್ವಾರ್ಟರ್ ಫೈನಲ್ ತಲುಪಿ ಆಂಧ್ರಪ್ರದೇಶ ರಣಜಿ ಟ್ರೋಫಿ ಚಾಂಪಿಯನ್ ಆಗುವ ಹೊಸ್ತಿಲಿನಲ್ಲಿ ಬಂದು ನಿಂತಿದೆ.

2014–15ನೇ ಸೀಜನ್ ದಲ್ಲಿ ಕರ್ನಾಟಕ ರಣಜಿ ಟ್ರೋಫಿ ಗೆದ್ದಾಗ ಅಭಿಷೇಕ್ ರೆಡ್ಡಿ ಕೂಡ ಇದ್ದರು. ಅಂತೆಯೇ 2015ರಲ್ಲಿ ಇರಾನಿ ಟ್ರೋಫಿ ಗೆದ್ದಿದ್ದರು. ಅದೇ ರೀತಿ ಆಂಧ್ರಪ್ರದೇಶದಲ್ಲಿ ಈ ಬಾರಿ ರಣಜಿ ಪಂದ್ಯ ಗೆದ್ದರೆ ಅಭಿಷೇಕ್ ರೆಡ್ಡಿ ವಿಶೇಷ ದಾಖಲೆ ಬರೆಯಬಹುದು.

–ಮಾಣಿಕರೆಡ್ಡಿ ಕೌಡಾಳೆ
ಅಭಿಷೇಕ ರೆಡ್ಡಿ ತಂದೆ

## 4,894 ಟನ್ ಸೋಪ್ ಉತ್ಪಾದನೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಸರಕಾರಿ ಸ್ವಾಮ್ಯದ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತವು (ಕೆಎಸ್ಡಿಎಲ್)



ಈ ವರ್ಷದ ಜನವರಿಯಲ್ಲಿ ಒಟ್ಟು 4,894 ಮೆಟ್ರಿಕ್ ಟನ್ ಸೋಪ್ ಉತ್ಪನ್ನ ಉತ್ಪಾದನೆ ಮಾಡುವ ಮೂಲಕ ಸಾರ್ವಕಾಲಿಕ ದಾಖಲೆ ಬರೆದಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ತಿಳಿಸಿದ್ದಾರೆ.

ಈ ಬಗ್ಗೆ ಮಾಧ್ಯಮ ಪ್ರಕಟಣೆ ನೀಡಿ, ಜನವರಿ ತಿಂಗಳಲ್ಲಿ ಸಾಬೂನು ವಿಭಾಗದಲ್ಲಿ 3,798 ಟನ್, ಮಾರ್ಜಕಗಳ ವಿಭಾಗದಲ್ಲಿ 941 ಟನ್ ಮತ್ತು ಕಾಸ್ಮೆಟಿಕ್ಸ್ ವಿಭಾಗದಲ್ಲಿ 155 ಟನ್ ಉತ್ಪಾದನೆ ನಡೆದಿದೆ ಎಂದು ಹೇಳಿದ್ದಾರೆ.

ಕೆಎಸ್ಡಿಎಲ್ ಈ ಹಿಂದೆ 2020ರ ಸೆಪ್ಟೆಂಬರ್ ನಲ್ಲಿ 3,113 ಟನ್, 2021ರ ನವೆಂಬರ್ ನಲ್ಲಿ 2,744 ಟನ್, 2022ರ ಸೆಪ್ಟೆಂಬರ್ ನಲ್ಲಿ 3,650 ಟನ್, 2023ರ ನವೆಂಬರ್ ನಲ್ಲಿ 4,144 ಟನ್, 2025ರ ಮಾರ್ಚ್ ನಲ್ಲಿ 4,486 ಟನ್, 2025ರ ಡಿಸೆಂಬರ್ ನಲ್ಲಿ 4,735 ಟನ್ ಉತ್ಪಾದನೆ ಮೂಲಕ ದಾಖಲೆ ನಿರ್ಮಿಸಿತ್ತು ಎಂದು ಅವರು ತಿಳಿಸಿದ್ದಾರೆ. ಉತ್ತರ ಭಾರತ ಮತ್ತು ವಿದೇಶಗಳಲ್ಲಿ ಮಾರುಕಟ್ಟೆ ವಿಸ್ತರಣೆ ಮತ್ತು ಬ್ರ್ಯಾಂಡಿಂಗ್ ಬಲವರ್ಧನೆಗೆ ವ್ಯಾಪಕ ಕ್ರಮ ಕೈಗೊಳ್ಳಲಾಗಿದೆ. ಜತೆಗೆ ಮೂರು ಪಾಳಿಗಳಲ್ಲಿ ನಿರಂತರ ಮತ್ತು ಗುಣಮಟ್ಟದ ಉತ್ಪಾದನಾ ವ್ಯವಸ್ಥೆ ಅಳವಡಿಸಿಕೊಳ್ಳಲಾಗಿದೆ ಎಂದು ಅವರು ವಿವರಿಸಿದ್ದಾರೆ.

ಕನ್ನಡದ ಕ್ಲಾಸಿಕ್ ಸಿನಿಮಾ ಪ್ರತಿಗಳ ಸಂರಕ್ಷಣೆಗೆ ಚಲನಚಿತ್ರ ಅಕಾಡೆಮಿ ಗಮನ ಹರಿಸಬೇಕು: ಅಪರ್ಣಾ ಸುಬ್ರಮಣಿಯನ್

# ಪರುಷ ಕಟ್ಟೆ ಮೇಲೆ ವಚನಗಳಿಗೆ ಪಟ್ಟಾಧಿಕಾರ– ಪ್ರಭುದೇವ ಮಹಾಸ್ವಾಮೀಜಿ.

• (ವರದಿ.ಡಿ.ಕೆ. ಪ್ರಹ್ಲಾದ).
ಮಲ್ಲಮ್ಮ ನುಡಿ ವಾರ್ತೆ.



ಬಸವಕಲ್ಯಾಣ :– ವಚನಗಳು ಬದುಕಿನ ದಾರಿದೀಪ. ಶರಣ–ರು ನಮ್ಮೊಂದಿಗೆ ಇಂದಿಗೂ ಮಾತನಾಡುತ್ತಾರೆ. ಯಾವುದರ ಮುಖಾಂತರ ಎಂದರೆ? ವಚನ ಸಾಹಿತ್ಯದ ಮುಖಾಂತರ. ಎಲ್ಲಾ ಸಮಸ್ಯೆಗಳಿಗೆ ಪರಿಹಾರ ವಚನ ಸಾಹಿತ್ಯದಲ್ಲಿದೆ. ಅಂತಹ ಸಾಹಿತ್ಯಕ್ಕೆ ಪಟ್ಟ ಕಟ್ಟುವುದೇ ಅತ್ಯಂತ ಶ್ರೇಷ್ಠ ಎಂದು ತಿಳಿದು ವಚನಗಳಿಗೆ ಪಟ್ಟಕಟ್ಟಿದ ಕೀರ್ತಿ ಅಕ್ಕಅನ್ನಪೂರ್ಣ ತಾಯಿಯವರಿಗೆ ಸಲ್ಲುತ್ತದೆ. ಅದೇ ಕಾರ್ಯವನ್ನು ಮುನ್ನಡೆಸಿಕೊಂಡು ಬಂದು ಇಲ್ಲಿನ ಪರುಷಕಟ್ಟೆಯ ಮೇಲೆವಚನಗಳಿಗೆಪಟ್ಟಕಟ್ಟಲಾಗುತ್ತಿದೆ ಎಂದು ಲಿಂಗಾಯತ ಮಹಾಮಠ ಬಸವಗಿರಿ ಬೀದರ ಹಾಗೂ ಗೋರ್ಟಾ ಮಠದ ಪಿಠಾಧಿಪತಿಗಳಾದ ಪೂಜ್ಯ ಶ್ರೀ ಪ್ರಭುದೇವ ಮಹಾಸ್ವಾಮಿಜಿ ತಿಳಿಸಿದರು.

ನಗರದ ಪರುಷಕಟ್ಟೆಯ ಮೇಲೆ ವಚನ ಸಾಹಿತ್ಯಕ್ಕೆ ಪಟ್ಟವನ್ನುಕಟ್ಟಿ ಮಾತನಾಡಿದ ಪೂಜ್ಯರು, ಬಸವಣ್ಣನವರು ಕುಂತ ನೆಲವೇ ಪರುಷ ಕಟ್ಟೆ. ಸಮಸ್ಯೆಗಳಿಗೆ ಸಮಾಧಾನವನ್ನು ನೀಡುತ್ತಾ, ಬೇಡಿದವರಿಗೆ ಬೇಡಿದ್ದನ್ನು ಇಲ್ಲೆನ್ನದೆ ದಾಸೋಹ ಮಾಡುತ್ತಾ, ಸರ್ವರ ಸಮಸ್ಯೆಗಳಿಗೆ ಸ್ಪಂದಿಸಿದ ನೆಲವೇ ಪರುಷಕಟ್ಟೆ.

ಹಲವಾರು ವರ್ಷಗಳ ಪೂರ್ವದಲ್ಲಿ ಪೂಜ್ಯಶ್ರೀ ಅಕ್ಕ ಅನ್ನಪೂರ್ಣತಾಯಿ ಈ ಒಂದು ಸತ್ಯವನ್ನು ತಿಳಿದು ವಚನಗಳಿಗೆ ಪಟ್ಟ ಕಟ್ಟುವ ಕಾರ್ಯ ನಡೆಸಿಕೊಂಡು ಬಂದಿದ್ದಾರೆ. ಅವರ ಸಂಕಲ್ಪದಂತೆ ಇಂದು ವಚನಗಳಿಗೆ ಪಟ್ಟ ಕಟ್ಟುವ ಕಾರ್ಯ ಮಾಡಲಾಗಿದೆ ಎಂದು ಪೂಜ್ಯರು ತಿಳಿಸಿದರು.

ಶರಣ ಸಾಹಿತ್ಯಗಳಾದ ರಮೇಶ ಮಠಪತಿ ಮಾತನಾಡಿ ಕಲ್ಯಾಣ ಕ್ರಾಂತಿಯ ಸಂದರ್ಭದಲ್ಲಿ ಶರಣರು ಕಲ್ಯಾಣ ತೊರೆದು ಹೋಗಬೇಕಾದರೆ ಪ್ರಾಣ ಉಳಿಸಿಕೊಳ್ಳಬೇಕೆಂದು ಕಲ್ಯಾಣ ತೊರೆದವರಲ್ಲ, ವಚನ ಸಾಹಿತ್ಯ ಉಳಿಸಲು ಕಲ್ಯಾಣ ತೆರೆದು ಹೋದವರು. ಉಳುವಿಯ ದಟ್ಟ ಕಾಡಿನಲ್ಲಿ ವಚನ ಸಾಹಿತ್ಯವನ್ನು ಇಟ್ಟು, ವಚನಗಳಿಗೆ ಪಟ್ಟ ಕಟ್ಟಿದವರು ಮೊಟ್ಟಮೊದಲು ಬಸವಣ್ಣನವರ ಅಕ್ಕನಾದ ಅಕ್ಕನಾಗಮ್ಮ ತಾಯಿಯವರು. ಅಂತೆಯೇ ಜನಪದ ನುಡಿಯಲ್ಲಿ ಹೇಳುತ್ತಾರೆ, ಮೇರಿಸಿದರು ತತ್ವ ಮಂಟಪವ ಎಂದು. ಆ ಒಂದು ಸತ್ಯವನ್ನು ಅರಿತವರು ಪೂಜ್ಯಶ್ರೀ ಅಕ್ಕ ಅನ್ನಪೂರ್ಣತಾಯಿ. ಅಂತೆ ಹಲವಾರು ವರ್ಷಗಳಿಂದ ವಚನಗಳಿಗೆ ಪಟ್ಟುವ ಕಟ್ಟುವ ಕಾರ್ಯ ನಿರಂತರ ನಡೆಸಿಕೊಂಡು ಬಂದಿರುವರು. ಅಕ್ಕನವರ ಕಾರ್ಯವನ್ನು ಮುನ್ನಡೆಸಿಕೊಂಡು ಬರುತ್ತಿರುವ ಲಿಂಗಾಯತ ಮಹಾಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಪ್ರಭುದೇವ ಮಹಾಸ್ವಾಮೀಜಿ ವಚನಗಳಿಗೆ ಪರಮೋಚ್ಚ ಸ್ಥಾನವನ್ನು ನೀಡಿ ಪಟ್ಟ ಕಟ್ಟಿರುವುದು ನಿಜವಾಗಲೂ ಬಸವ ಭಕ್ತರಿಗೆ ಸಂತೋಷವನ್ನುಂಟು ಮಾಡಿದೆ ಎಂದು ತಿಳಿಸಿದರು.

ನೀಲಮ್ಮನ ಬಳಗದ ಶರಣೆಯರು 108 ವಚನಗಳು ಹಾಡುವುದರ ಮೂಲಕ ಪ್ರಾರ್ಥನೆ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಲಿಂಗಾಯತ ಮಹಾಮಠದ ಹಿರಿಯರಾದ ಮಾಣಿಕಪ್ಪ ಗೋರನಾಳೆ .ಸಿ ಎಸ್ ಗಣಾಚಾರಿ. ಬಾಬುರಾವ ರಾಜೋಳೆ. ಚಂದ್ರಕಾಂತ್ ಕಣಜ. ಸುಭಾಷ ಪತಂಗೆ. ಶ್ರೀಮಂತಪ್ಪ ರಾಜೇಶ್ವರೆ ಶಿವರಾಜ್ ಕನಕಟ್ಟೆ. ಬಸವರಾಜ ಮಾಶೆಟ್ಟಿ. ಗೋರ್ಟಾ ಲಿಂಗಾಯತ ಸೇವಾದಳದ ಅಧ್ಯಕ್ಷರಾದ ಸುಪ್ರೀತ ಪತಂಗೆ ಮುಂತಾದವರು ಭಾಗವಹಿಸಿದರು.

# ಪ್ರಾಮಾಣಿಕ ಸೇವೆಯಿಂದ ಮಾತ್ರ ಸಂಘಟನೆ ಬಲಿಷ್ಠ: ರಮೇಶ್ ಡಾಕುಳಗೆ ಕಿವಿಮಾತು




ಮಲ್ಲಮ್ಮ ನುಡಿ ವಾರ್ತೆ
ಕಮಲನಗರ:

"ಡಾ.ಬಿ.ಆರ್.ಅಂಬೇಡ್ಕರ್ ಅವರು ಹಾಕಿಕೊಟ್ಟ ತತ್ವ ಆದರ್ಶಗಳನ್ನು ಪಾಲಿಸುತ್ತಾ ಸಮಾಜಕ್ಕೆ ಪ್ರಾಮಾಣಿಕವಾಗಿ ಸ್ಪಂದಿಸಿದರೆ ಮಾತ್ರ ಸಂಘಟನೆ ಬೆಳೆಯಲು ಸಾಧ್ಯ," ಎಂದು ರಾಜ್ಯ ಸಂಘಟನಾ ಸಂಚಾಲಕ ರಮೇಶ್ ಡಾಕುಳಗೆ ಅಭಿಪ್ರಾಯಪಟ್ಟರು.

ಪಟ್ಟಣದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ್ದ ಕಮಲನಗರ ತಾಲ್ಲೂಕು ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ವಾದ) ಪದಾಧಿಕಾರಿಗಳ ಆಯ್ಕೆ ಸಭೆಯಲ್ಲಿ ಅವರು ಮಾತನಾಡುತ್ತಿದ್ದರು.

ನಾಯಕತ್ವ ಮತ್ತು ಹೋರಾಟಕ್ಕೆ ಕರೆ

ಕಾರ್ಯಕ್ರಮದ ವೇಳೆ ರಮೇಶ್ ಡಾಕುಳಗೆ ಅವರು ಮಾತನಾಡುತ್ತಾ, "ಬಾಬಾ ಸಾಹೇಬರಲ್ಲಿ ಹಣದ ಸಂಪತ್ತು ಇರಲಿಲ್ಲ, ಆದರೆ ಶಿಕ್ಷಣದ ಮೂಲಕ ಅವರು ಜ್ಞಾನದ ಸಂಪತ್ತನ್ನು ಗಳಿಸಿದರು. ಅವರ ಶ್ರಮ ಮತ್ತು ಪ್ರಾಮಾಣಿಕತೆಯಿಂದಲೇ ಇಂದು ಅವರು ವಿಶ್ವದ ಮಹಾನಾಯಕನಾಗಿ ಗುರುತಿಸಿಕೊಂಡಿದ್ದಾರೆ. ಯುವಕರು ಆ ದಾರಿಯಲ್ಲಿ ಸಾಗಬೇಕು," ಎಂದು ಸಲಹೆ ನೀಡಿದರು. ಜಿಲ್ಲಾ ಸಂಚಾಲಕ ರಮೇಶ್ ಮಂದಕನಹಳ್ಳಿ ಮಾತನಾಡಿ, "ಸಂಘಟನೆ ಎನ್ನುವುದು ಕೇವಲ ಹೆಸರಿಗಿರಬಾರದು. ಸಂವಿಧಾನ ರಕ್ಷಣೆಗಾಗಿ ಮತ್ತು ಹಳ್ಳಿಗಳಲ್ಲಿ ಬಡವರು ಹಾಗೂ ಮಹಿಳೆಯರ ಮೇಲೆ ದೌರ್ಜನ್ಯ ನಡೆದಾಗ ಅವರ ಧ್ವನಿಯಾಗಿ ಹೋರಾಟ ಮಾಡಲು ಸಿದ್ಧವಿರಬೇಕು," ಎಂದು ಕರೆ ನೀಡಿದರು. ನ್ಯಾಯಕ್ಕಾಗಿ ನಿರಂತರ ಹೋರಾಟ ಜಿಲ್ಲಾ ಸಂಘಟನಾ ಸಂಚಾಲಕ ಝರಪ್ಪ ರಾಂಪೂರೆ ಮಾತನಾಡಿ, ಸಂಘಟನೆಯು ಸದಾ ಬಡವರ ಪರವಾಗಿ ಇರಬೇಕು. ಯಾವುದೇ ಆಮಿಷಗಳಿಗೆ ಬಲಿಯಾಗದೆ ಕೆಲಸ ಮಾಡಿ ಸಮಾಜದಲ್ಲಿ ನಿಮ್ಮದೇ ಆದ ಛಾಪು ಮೂಡಿಸಿ ಎಂದರು. ಮಾರುತಿ ಜಗದಾಳೆ ಅವರು ಮಾತನಾಡಿ, "ಶಿಕ್ಷಣ, ಸಂಘಟನೆ ಮತ್ತು ಹೋರಾಟ" ಎಂಬ ಮಂತ್ರಗಳನ್ನು ಪಾಲಿಸುವಂತೆ ತಿಳಿಸಿದರು.

**ನೂತನ ಪದಾಧಿಕಾರಿಗಳನ್ನು ಆಯ್ಕೆ**

ತಾಲ್ಲೂಕು ಸಂಚಾಲಕರಾಗಿ ಅಮೂಲ ಸೂರ್ಯವಂಶಿ, ಸಂಘಟನಾ ಸಂಚಾಲಕರಾಗಿ ರಾಹುಲ್ ಭಂಡಾರೆ,

ಪ್ರಮುಖ ಸದಸ್ಯರಾಗಿ ಭಗವಂತ ಭೂತಾಳೆ, ಉತ್ತಮ ಸುತಾರ, ಕುಶಾಲ ಶಿಂದೆ, ಸತೀಶ ಸೂರ್ಯವಂಶಿ, ಹರಿ ಶಿಂದೆ ಮದನೂರ, ವಿಜಯಕುಮಾರ ಖಂಜಾಚಿ, ಶಾಂತ ಗಾಯಕವಾಡ, ರತ್ನದೀಪ, ಸೈಯದ ಭಾಗವಾನ, ಸಲ್ಲಾವೋದ್ದೀನ. ಆಯ್ಕೆಮಾಡಲಾಗಿದೆ

# ತಾಳ್ಮೆಯಿಂದ ಜವಾಬ್ದಾರಿ ವಹಿಸಿಕೊಂಡು ರಾಜ್ಯ ಸಮ್ಮೇಳನ ಯಶಸ್ಸಿಗೊಳಿಸಿ ಜಿ.ಸಿ ಲೋಕೇಶ

• ಮಲ್ಲಮ್ಮ ನುಡಿ ವಾರ್ತೆ
ಬೀದರ್

ತಾಳ್ಮೆಯಿಂದ ಜವಾಬ್ದಾರಿ ವಹಿಸಿಕೊಂಡು ರಾಜ್ಯ ಸಮ್ಮೇಳನ ಯಶಸ್ವಿಗೊಳಿಸಬೇಕೆಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ ಲೋಕೇಶ ಕರೆ ನೀಡಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಮಂಗಳವಾರ



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದಿಂದ ಜರುಗಿದ ರಾಜ್ಯ ಸಮ್ಮೇಳನದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿರುವ ಅವರು, ಹಳೆಬರು ಹಾಗೂ ಹೊಸಬರು ಎಲ್ಲರು ಒಟ್ಟಾಗಿದ್ದಿರಿ. ಅದಕ್ಕಾಗಿ ಬೀದರ್ ಗೆ ಸಮ್ಮೇಳನ ನೀಡಲಾಗಿದೆ. ಸಮ್ಮೇಳನಕ್ಕೆ ಕೇವಲ 42 ದಿನಗಳು ಬಾಕಿ ಇವೆ. ಸಮ್ಮೇಳನಕ್ಕೆ ಬಂದವರಿಗೆ ಮಾತ್ರ ಶುಲ್ಕ ಪಡೆದು ರಸಿದಿ ಹಾಗೂ ಕಾಣಿಕೆ ನೀಡಬೇಕು. ವಸತಿ ಕೆಲಸ ಬಹಳ ಮುಖ್ಯ. ಊಟದ ವ್ಯವಸ್ಥೆ ಮಾಡಿಸುವಲ್ಲಿ ಉತ್ತರ ಕರ್ನಾಟಕದವರು ಯಾವತ್ತೂ ಎತ್ತಿದ ಕೈ. ಅನುಭವಿ ಪತ್ರಕರ್ತರಿಗೆ ಸಮಿತಿಗಳ ಜವಾಬ್ದಾರಿ ನೀಡಬೇಕಾಗಿದೆ. ವಸತಿ ಸಮಿತಿಗಳಲ್ಲಿ ತಾಳ್ಮೆ ಇರುವವರಿಗೆ ಜವಾಬ್ದಾರಿ ನೀಡಬೇಕು. ವಸತಿ, ಊಟ ಹಾಗೂ ಬ್ಯಾಗ್ ಸರಿಯಾಗಿ ನೀಡಿದರೆ ಸಮ್ಮೇಳನ ಯಶಸ್ವಿಯಾದ ಹಾಗೆ. ಆರೋಗ್ಯ ಸಮಿತಿಯಲ್ಲಿ ಸ್ಥಳಿಯ ನುರಿತ ವೈದ್ಯಾಧಿಕಾರಿಗಳನ್ನು ನೇಮಿಸಿಕೊಳ್ಳಬೇಕು. ಅಂಬುಲೆನ್ಸ್, ಶುಷ್ರುಷಕರನ್ನು ಸಮಿತಿಗೆ ತೆಗೆದುಕೊಳ್ಳಬೇಕು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ನೇತೃತ್ವದಲ್ಲಿ ಹಿರಿಯ ಕಲಾವಿದರನ್ನು ನೇಮಿಸಿಕೊಂಡು ಸಾಂಸ್ಕೃತಿಕ ಸಮಿತಿ ರಚಿಸಬೇಕು. ಬೀದರ್ ಜಿಲ್ಲೆಯ ಎಲ್ಲ ಪತ್ರಕರ್ತರ ಕುಟುಂಬ ಸಮ್ಮೇಳನದಲ್ಲಿ ಭಾಗಿಯಾಗಿ ಒಟ್ಟಾರೆ ಸಮ್ಮೇಳನ ಯಶಸ್ಸಿಗೆ ಕಂಕಣಬದ್ಧರಾಗುವಂತೆ ಲೋಕೇಶ ಕರೆ ಕೊಟ್ಟರು. ಸಂಘದ ಜಿಲ್ಲಾಧ್ಯಕ್ಷ ಅನಂದ ದೇವಪ್ಪ ಪ್ರಾಸ್ತಾವಿಕ ಮಾತನಾಡಿ, ಸಮ್ಮೇಳನ ಒಬ್ಬರಿಂದ ಮಾಡಲು ಸಾಧ್ಯವಿಲ್ಲ. ಇದಕ್ಕೆ ಎಲ್ಲರು ಕೈಜೋಡಿಸಬೇಕು. ರಾಜ್ಯ ಸಂಘ ಕಾಲ ಕಾಲಕ್ಕೆ ನಮಗೆ ಮಾರ್ಗದರ್ಶನ ಮಾಡಲಿ. ಈ ಸಮ್ಮೇಳನ ಯಶಸ್ವು ಮಾಡಿ ತೋರಿಸುತ್ತೇವೆ ಎಂದರು. ಐದಾರು ದಿನಗಳಲ್ಲಿ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ ಪ್ರಭಾಕರ ಹಾಗೂ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಬೀದರ್ ಗೆ ಆಗಮಿಸಲಿದ್ದು, ಎಲ್ಲ ಸಮಿತಿಗಳ ಸಭೆ ಮಾಡಲಿದ್ದಾರೆ ಎಂದರು.

ಮಾಜಿ ರಾಜ್ಯ ಉಪಾಧ್ಯಕ್ಷ ಭವಾನಿಸಿಂಗ ಠಾಕುರ , ಮಾಜಿ ಜಿಲ್ಲಾಧ್ಯಕ್ಷರಾದ ಡಿ.ಕೆ ಗಣಪತಿ, ಬಸವರಾಜ ಕಾಮಶೆಟ್ಟಿ, ಮಲ್ಲಿಕಾರ್ಜುನ ಬಿರಾದಾರ, ಹಿರಿಯ ಪತ್ರಕರ್ತ ದೀಪಕ ವಾಲಿ, ಸುನಿಲಕುಮಾರ ಕುಲಕರ್ಣಿ, ಪೂಜಾ ಪಿಟ್ಲೆ, ಹಾಗೂ ಇತರರು ತಮ್ಮ ಅನುಭವ ಹಂಚಿಕೊಂಡರು. ಅಪ್ಪಾರಾವ ಸೌದಿ ಸರ್ವರನ್ನು ಸ್ವಾಗತಿಸಿ, ಶಿವಕುಮಾರ ಸ್ವಾಮಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಆಮ್ ಆದ್ಮಿ ಪಾರ್ಟಿಯ ಪದಾಧಿಕಾರಿಗಳ ನೇಮಕ

• ಮಲ್ಲಮ್ಮ ನುಡಿ ವಾರ್ತೆ, ಹುಮನಾಬಾದ:

ಆಮ್ ಆದ್ಮಿ ಪಾರ್ಟಿ ಬೀದರ ಜಿಲ್ಲೆ ಹುಮನಾಬಾದ ತಾಲ್ಲೂಕಾ ಹಾಗೂ ಟೌನ್ ಅಧ್ಯಕ್ಷರನ್ನು ನಾಮನಿರ್ದೇಶನ ಮಾಡಿ, ಅಲ್ಲಿನ ಬ್ಯಾಂಕ್‌ರೆಡ್ಡಿ ಅವರ ಅವರ ಶಿಫಾರಸ್ಸಿನೊಂದಿಗೆ ಮತ್ತು ಆಮ್ ಆದ್ಮಿ ಪಕ್ಷದ ಹಿರಿಯರು, ಯುವಕರ ಸಮ್ಮುಖದಲ್ಲಿ ನೇಮಕಾತಿ ಮಾಡಿ, ಅಲ್ಲಿನ ಸಮಿತಿಯ ರಚನೆ ಹಾಗೂ ಸಂಘಟನೆ ಬಲಪಡಿಸಬೇಕೆಂದು ಈ ಕೆಳಕಂಡಂತೆ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಬೀದರ ಜಿಲ್ಲಾ ಉಪಾಧ್ಯಕ್ಷರಾಗಿ ಶಶಿಕಾಂತ ಕುಂಬಾರ, ಬೀದರ ಜಿಲ್ಲಾ ಉಪಾಧ್ಯಕ್ಷರಾಗಿ ಖದೀರ ಭಾಯಿ, ಬೀದರ ಕಾರ್ಯದರ್ಶಿಯಾಗಿ ಸಿದ್ರಾಮ್ ಪವಾರ, ಹುಮನಾಬಾದ ತಾಲ್ಲೂಕಾಧ್ಯಕ್ಷರಾಗಿ ಪವನಗೊಂಡ, ಹುಮನಾಬಾದ ಟೌನ್ ಅಧ್ಯಕ್ಷರಾಗಿ ಅನೀಲರೆಡ್ಡಿ, ಹುಮನಾಬಾದ ತಾಲ್ಲೂಕಾ ಉಪಾಧ್ಯಕ್ಷರಾಗಿ ರೋಷನ್ ಹೊಸಮನಿ, ಚಿಟಗುಪ್ಪ ಟೌನ್ ಅಧ್ಯಕ್ಷರಾಗಿ ದಿನೇಶ ಹೊನ್ನಾ ಹುಮನಾಬಾದ ತಾಲ್ಲೂಕಾ ಉಪಾಧ್ಯಕ್ಷರಾಗಿ ರಾಕೇಶ್ ಹೂಗಾರ, ತಾಲ್ಲೂಕಾ ಉಪಾದ್ಯಕ್ಷರಾಗಿ ಸಿದ್ರಾಮ್ ಡಾಂಗೆ,ಎಸ್.ಟಿ ಮೋರ್ಚಾ ತಾಲ್ಲೂಕಾಧ್ಯಕ್ಷರಾಗಿ ಅಶೋಕ ಮಾನಕಾರೆ ಚಂದನಹಳ್ಳಿ, ಜಂಟಿ ಕಾರ್ಯದರ್ಶಿಯಾಗಿ ಕೃಷ್ಣಕುಮಾರ ಇವರನ್ನು ನೇಮಕ ಮಾಡಿ ಆದೇಶ ಹೊರಾಡಿಸಲಾಗಿದೆ ಎಂದು ಬ್ಯಾಂಕ್‌ರೆಡ್ಡಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಜೆಪಿ ಮಂಡಲದ ಮೋರ್ಚಾ ಪದಾಧಿಕಾರಿಗಳ ನೇಮಕ

ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ. :

ತಾಲೂಕಿನ ಬಿಜೆಪಿ ಮಂಡಲಕ್ಕೆ ಜಿಲ್ಲಾಧ್ಯಕ್ಷರ ಆದೇಶದ ಮೇರೆಗೆ ವಿವಿಧ ಮಂಡಲದ ಮೋರ್ಚಾಗಳ ಪದಾಧಿಕಾರಿಗಳನ್ನು ನೇಮಿಸಿ ಜವಾಬ್ದಾರಿ ಹಂಚಿಕೆ ಮಾಡಲಾಗಿದೆ ಎಂದು ತಾಲೂಕು ಅಧ್ಯಕ್ಷ ವೀರಣ್ಣ ಕಾರಬಾರಿ ತಿಳಿಸಿದ್ದಾರೆ.



ಪದಾಧಿಕಾರಿಗಳ ವಿವರ :

ಎಸ್.ಸಿ ಮೋರ್ಚಾ: ಲಕ್ಷ್ಮಣ್ ಮುದಾಳೆ, ಸಿದ್ಧೋದನ ಕಾಂಬಳೆ, ಕುಲದೀಪ್ ಕಾಂಬಳೆ. ಎಸ್. ಟಿ ಮೋರ್ಚಾ: ನಾಗನಾಥ್ ಹುಣಜೆ , ಸುಶೀಲ್ ನಾಗರಾಳೆ, ನಾಗೇಶ್ ನಾಗೂರೆ. ಓಬಿಸಿ ಮೋರ್ಚಾ: ದೀಪಕ್ ಶಿಂಧೆ , ಶರದ ಪಾಟೀಲ್, ಗೋವಿಂದ ರಾವ್ ಪಾಟೀಲ್. ಯುವ ಮೋರ್ಚಾ: ಡಾ. ಜಗದೀಶ್ ಭೂರೆ, ಅಮಿತ್ ಮೋರೆ , ಸಂತೋಷ್ ಸೂರ್ಯವಂಶಿ. ಮಹಿಳಾ ಮೋರ್ಚಾ: ಅರುಣ ಬಿರಾದಾರ್ , ಪ್ರಿಯಾ ದೇಶಮುಖ್, ಜ್ಯೋತಿ ಸೂರಿ. ರೈತ ಮೋರ್ಚಾ: ಶಿವಕುಮಾರ್ ಅಣದೂರೆ, ಜಗದೀಶ್ ಕನ್ನಾಳೆ, ಮಾರುತಿ ಬಿರಾದಾರ. ಅಲ್ಪಸಂಖ್ಯಾತ ಮೋರ್ಚಾ: ಗೌಸುದ್ದೀನ್ ಅಲಿ, ರವಿ ಪಾದ್ರೆ , ಶೇಕ್ ಮೌಲ ಇವರನ್ನು ನೇಮಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೇ. 6.ರಂದು ಕೋಜಾಪುರ (ಕುಪ್ಪಿ ಕ್ರಾಸ್ )ಜಾತ್ರಾಮೋತ್ಸವ

• ಮಲ್ಲಮ್ಮ ನುಡಿ ,ಹುಣಸಗಿ:



ಪಟ್ಟಣ ಪಂಚಾಯತ 9ನೆಯ ವಾರ್ಡ್ ನ ವ್ಯಾಪ್ತಿಯಲ್ಲಿ ಬರುವ ಕೋಜಾಪುರು ಗ್ರಾಮ ದೇವತೆಯ ಜಾತ್ರಾಮೋತ್ಸವವು ಇದೆ ದಿನಾಂಕ 06.02.2026 ಶುಕ್ರವಾರರಂದು ಕೋಜಾಪುರ ಗ್ರಾಮಾದೇವತೆ ಜಾತ್ರಾಮೋತ್ಸವ ಅದ್ದೂರಿಯಾಗಿ ಜರುಗುವದು ಎಂದು ಮುಖಂಡರಾದ ಬಸವರಾಜ ಸ್ವಾಮಿ ಸ್ಥಾವರಮಠ ತಿಳಿಸಿದರು

ಪತ್ರಿಕೆಯೊಂದಿಗೆ ಮಾತನಾಡಿದ ಅವರು ಶುಕ್ರವಾರ ಬೆಳಿಗ್ಗೆ 5 ಗಂ–ಟೆ ಗಂಗಸ್ಥಳ ಜರುಗುವದು ನಂತರ ಗ್ರಾಮ ದೇವತೆಯು ನೂತನ ರಥದೊಂದಿಗೆ ಡೊಳ್ಳು ಕುಣಿತ ಹಾಗೂ ಬಾಜಾ ಬಜೇಂತ್ರಿ ಭವ್ಯ ಮೆರವಣಿಗೆಯೊಂದಿಗೆ ಪಟ್ಟಣ ಮತ್ತು ಸುತ್ತಮುತ್ತಲಿನ ಗ್ರಾಮದ ಜನರೊಂದಿಗೆ ಸದರಗಟ್ಟೆಗೆ ಬಂದು ಕುಳಿತುಕೊಳ್ಳುವಳು ತದನಂತರ ಬಂದಂತಹ ಎಲ್ಲಾ ಬಕ್ತಾದಿಗಳಿಂದ ದೇವಿಗೆ ಉಡಿ ತುಂಬುವದು ಜೊತೆಗೆ ಮಹಾಮಂಗಳಾರತಿ ಕರ್ಪುರಾತಿ ಮೂಲಕ ದೇವಿಗೆ ಪೂಜ್ಯ ಸಲ್ಲಿವದು ಕಾರ್ಯಕ್ರಮ ಇದ್ದು 12 ಗಂಟೆಗೆ ದೇವಿಯ ದರ್ಶನಕ್ಕೆ ಬಂದಂಥಹ ಬಕ್ತಾದಿಗಳಿಗೆ ಮಹಾ ಪ್ರಸಾದ ವ್ಯವಸ್ಥೆ ಇರುವದು ಎಂದು ಹೇಳಿದರು.

ಶ್ರೀ ಪುಟ್ಟರಾಜಗುರು ಸಂಗೀತ ಪಾಠಶಾಲೆವತಿಯಿಂದ ಸಂಗೀತ ಕಾರ್ಯಕ್ರಮ ಇದ್ದು ಈ ಕಾರ್ಯಕ್ರಮದಲ್ಲಿ ಗುರು ಬಿರಾದಾರ, ಪ್ರವೀಣ್ ಪತ್ತಾರ , ಶ್ರೀ ದೀಪಕಶಿಂಗ್ ಅಶೋಕ್ ರಾಜನಕೊಳೂರು ಸೇರಿದಂತೆ ಇನ್ನು ಅನೇಕ ಸಂಗೀತ ಕಲಾವಿದರು ಕಾರ್ಯಕ್ರಮ ನಡೆಸಿಕೊಡುವರು.

ರಾತ್ರಿ 8 ಗಂಟೆಯಿಂದ ವಿಶ್ವಕರ್ಮ ಆರ್ಕೆಸ್ಟ್ರಾ ಮೆಲೋಡಿಯರ್ಸ್ ವತಿಯಿಂದ ವಿಶೇಷ ರಸಮಂಜಿರಿ ಕಾರ್ಯಕ್ರಮ ಇದ್ದು ಈ ಕಾರ್ಯಕ್ರಮದಲ್ಲಿ ಖ್ಯಾತ ಗಾಯಕಿ ಲತಾ ಲಿಂಗಸಗೂರು, ದೇವಿಂದ್ರ ವಿಶ್ವಕರ್ಮ ಹುಣಸಗಿ, ರಾಜು ಉಳ್ಳಾಗಡ್ಡಿ ಹುಣಸಗಿ,ಚಳ್ಳಿಗ್ಗೆಪ್ಪಾ ಬೇವಿನಾಳ ಇನ್ನು ಅನೇಕ ಕಲಾವಿದರು ಕಾರ್ಯಕ್ರಮ ನಡೆಸಿಕೊಡುವರು.

# ಇಂದು ಭಾಲ್ಕಿಯಲ್ಲಿ ವಿರಾಟ್ ಹಿಂದು ಸಮ್ಮೇಳನ

• ಮಲ್ಲಮ್ಮ ನುಡಿ ವಾರ್ತೆ,
ಭಾಲ್ಕಿ:

ಇಂದಿನ ಜಾತಿ ವ್ಯವಸ್ಥೆಯನ್ನು ಹೋಗಲಾಡಿಸಿ ಹಿಂದೂ ಸಮಾಜವನ್ನು ಒಗ್ಗೂಡಿಸಿಕೊಂಡು ಹೋಗುವ ನಿಟ್ಟಿನಲ್ಲಿ ಹಾಗೂ ಹಿಂದು ಸಮಾಜವನ್ನು ಜಾಗೃತಿಗೊಳಿಸುವದಕ್ಕಾಗಿ, ಸಮಾಜದ ಏಕತೆಯನ್ನು ಬಲಪಡಿಸುವ ಉದ್ದೇಶದಿಂದ ಭಾಲ್ಕಿ ನಗರದಲ್ಲಿ ಇಂದು 04 ಫೆಬ್ರವರಿ ರಂದು ವಿರಾಟ್ ಹಿಂದು ಸಮ್ಮೇಳನವನ್ನು ಆಯೋಜಿಸಲಾಗಿದೆ.

ಇಂದು ಮಧ್ಯಾಹ್ನ 2 ಗಂಟೆಗೆ ಭಾಲ್ಕಿಯ ಭಾಲೇಶ್ವರ ಮಂದಿರದ ಆವರಣದಿಂದ ವಿರಾಟ್ ಹಿಂದು ಶೋಭಾಯಾತ್ರೆ ಹೊರಡಲಿದ್ದು, ಬೊಮ್ಮಗೊಂಡೇಶ್ವರ ವೃತ್ತ, ಬಸ್ ನಿಲ್ದಾಣ, ಜ್ಯೋತಿಬಾ ಫುಲೆ ವೃತ್ತ, ಸರಾಫ್ ಬಜಾರ್, ಮಹಾತ್ಮ ಗಾಂಧಿ ವೃತ್ತ ಹಾಗೂ ಅಂಬೇಡ್ಕರ್ ವೃತ್ತ ಮಾರ್ಗವಾಗಿ ಸಾಗುತ್ತಾ ಚನ್ನಬಸವ ಪಟ್ಟದೇವರ ಆಶ್ರಮದಲ್ಲಿ ಸಮಾವೇಶಗೊಳ್ಳಲಿದೆ.

ಸಂಜೆ 5 ಗಂಟೆಗೆ ಚನ್ನಬಸವ ಪಟ್ಟದೇವರ ಆಶ್ರಮದಲ್ಲಿ ನಡೆಯುವ ಸಾರ್ವಜನಿಕ ಸಮಾರಂಭದಲ್ಲಿ ಬಸವಲಿಂಗಪಟ್ಟದ್ದೇವರು, ರಾಜೇಶ್ವರ ಶಿವಾಚಾರ್ಯರು, ಶಂಕರಾನಂದ ಸ್ವಾಮೀಜಿಗಳು, ಭಂತೇ ಸಂಗರಕೀತರು, ಗೋವಿಂದ ಮಹಾರಾಜರು ಹಾಗೂ ಹಾವಗಿಲಿಂಗೇಶ್ವರ ಶಿವಾಚಾರ್ಯರ ಪೂಜ್ಯರ ಸಾನ್ನಿಧ್ಯದಲ್ಲಿ, ಆರ್‌ಎಸ್‌ಎಸ್‌ನ ಸಹ ಸಹ ಸರಕಾರ್ಯವಾಹ ಮುಕುಂದ ಜಿ ಅವರು ಮುಖ್ಯ ಭಾಷಣ ಮಾಡಲಿದ್ದಾರೆ ಎಂದು ಆಯೋಜನಾ ಸಮಿತಿಯವರು ತಿಳಿಸಿದ್ದಾರೆ. ಈ ಸಮ್ಮೇಳನವು ಯಾವುದೇ ಒಂದು ಜಾತಿಗೆ ಸೀಮಿತವಾಗದೆ ಸಮಾಜದ ಎಲ್ಲ ವರ್ಗಗಳನ್ನು ಒಗ್ಗೂಡಿಸುವ ಆಶಯ ಹೊಂದಿದ್ದು, ಪಟ್ಟಣದ ಸುಮಾರು 23 ವಿವಿಧ ಸಮಾಜಗಳ ಮುಖಂಡರು ತಮ್ಮ ಸಮಾಜದ ಮಹಾಪುರುಷರ ಭಾವಚಿತ್ರಗಳೊಂದಿಗೆ ಹಾಗೂ ಸಮುದಾಯದ ಸದಸ್ಯರೊಂದಿಗೆ ಭವ್ಯ ಶೋಭಾಯಾತ್ರೆಯಲ್ಲಿ ಭಾಗವಹಿಸಲಿದ್ದಾರೆ. ಶೋಭಾಯಾತ್ರೆಯಲ್ಲಿ ವಿವಿಧ ಸಾಂಸ್ಕೃತಿಕ ನೃತ್ಯಗಳು, ಶಾಲಾ–ಕಾಲೇಜು ವಿದ್ಯಾರ್ಥಿಗಳ ಕೋಲಾಟ, ನೃತ್ಯ ಪ್ರದರ್ಶನಗಳು ಹಾಗೂ ಮಹಾತ್ಮರ ಛದ್ಮವೇಷಗಳು ಜನರ ಗಮನ ಸೆಳೆಯಲಿವೆ. ಭಾಲ್ಕಿ ನಗರ ಹಾಗೂ ಸುತ್ತಮುತ್ತಲಿನ ಸಕಲ ಹಿಂದು ಸಮಾಜದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ವಿರಾಟ್ ಹಿಂದು ಸಮ್ಮೇಳನವನ್ನು ಯಶಸ್ವಿಗೊಳಿಸಬೇಕಾಗಿ ಆಯೋಜನಾ ಸಮಿತಿಯವರು ಮನವಿ ಮಾಡಿದ್ದಾರೆ.

# ಅಗತ್ಯತೆಯುಳ್ಳ ಮಕ್ಕಳಿಗೆ ಕ್ಷೇತ್ರ ಬೇಟಿ ಮತ್ತು ಕ್ರೀಡೆ . ಹಾಗೂ ಅರಿವು ಮೂಡಿಸುವ ಕಾರ್ಯಕ್ರಮ.




ಮಲ್ಲಮ್ಮ ನುಡಿ ವಾರ್ತೆ.
ಬಸವಕಲ್ಯಾಣ:

ಇಲ್ಲಿನ ವಿವಿಧ ಸ್ಥಳಗಳಿಗೆ ಭೇಟಿ 2025 26 ನೇ ಸಾಲಿನ ವಿಶೇಷ ಅಗತ್ಯತೆಯುಳ್ಳ ಸಿ. ಡಬ್ಲಿ. ಎಸ್. ಎನ್. ಮಕ್ಕಳಿಗೆ ಕ್ಷೇತ್ರ ಭೇಟಿ ಮತ್ತು ಕ್ರೀಡೆ ಹಾಗೂ ಅರಿವು ಮೂಡಿಸುವ ಕಾರ್ಯಕ್ರಮವನ್ನು ಆಯೋಜಿಸಿ ತಾಲೂಕಿನ ಆಯ್ದ ಪ್ರೇಕ್ಷಣಿಕ ಸ್ಥಳಗಳಾದ 108 ಎತ್ತರದ ಮಹಾತ್ಮ ಬಸವೇಶ್ವರ ಪ್ರತಿಮೆ ಪರಿಸರ ಹಾಗೂ ಅನುಭವ ಮಂಟಪ ಮತ್ತು ಬಾಂಧವರ ಓಣಿ ಹಾಗೂ ಮರಿದೇವರ ಗುಡ್ಡ ಪರಿಸರ ಸ್ಥಳಗಳನ್ನು ಅನುಭವಿಸಿ ವೀಕ್ಷಿಸಿ ಕ್ರೀಡೆ ಮತ್ತು ಸಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಿ ಸ್ಪರ್ಧೆಗಳಲ್ಲಿ ವಿಜೇತರಾದ ಮಕ್ಕಳಿಗೆ ಕಂಚಿನ ಪದಕ ಹಾಗೂ ಪ್ರಶಸ್ತಿ ಪತ್ರಗಳನ್ನು ಕ್ಷೇತ್ರ ಸಮಾನವಾಧಿಕಾರಿಗಳಾದ ಪ್ರಭಾಕರ್ ಕಳಮಸೇ ಬಿ. ಆರ್. ಪಿ. ಗಳಾದ ಅಲಿಕಾ ಭಾನು ಸಿ. ಆರ್. ಪಿ. ಗಳಾದ ನಾಶೀರ್ ಪಟೇಲ್. ಗಿರಿಧರ್ ದಾನೂರೆ. ಕೆ. ಪಿ. ಎಸ್. ಶಾಲೆಯ ಕ್ರಿಯಾಶೀಲ ದೈಹಿಕ ಶಿಕ್ಷಕರಾದ ಮಾರುತಿ ಸೂರ್ಯವಂಶಿ ಕಿಟ್ಟಾ. ಶಾಲೆಯ ಮುಖ್ಯ ಗುರುಗಳಾದ ಲಿಂಗಣ್ಣ. ಬಿ. ಆಯ್. ಈ. ಆರ್. ಟಿ. ಗಳಾದ ಡಾ. ಶರಣಪ್ಪ ಗಡ್ಲೆಗಾವ್ ಶ್ರೀಮತಿ ಅನಿತಾ ರವರು ಸ್ಪರ್ಧೆಯಲ್ಲಿ ವಿಜೇತರಾದ ಮಕ್ಕಳಿಗೆ ಪ್ರಶಸ್ತಿ ಪತ್ರಗಳನ್ನು ಪ್ರಧಾನ ಮಾಡಲಾಯಿತು. ಕಾರ್ಯಕ್ರಮದಲ್ಲಿ ಕೇಂದ್ರಬಿಂದುಗಳಾದ ವಿಶೇಷ ಚೇತನ ಮುದ್ದು ಮಕ್ಕಳು ಹಾಗೂ ಪಾಲಕ ಪೋಷಕರು ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಿದರು.

# ಮಧ್ಯಸ್ಥಗಾರರಾಗಿ ಕಾರ್ಯನಿರ್ವಹಿಸಲು ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ,ಕಲಬುರಗಿ:

2026–27 ರಿಂದ 2028–29ನೇ ಸಾಲಿಗೆ ಗೌರವ ಮಧ್ಯಸ್ಥಗಾರರಾಗಿ ಕಾರ್ಯನಿರ್ವಹಿಸಲು ಆಸಕ್ತಿ ಇರುವ ವಕೀಲರು/ನಿವೃತ್ತ ಸಹಕಾರ ಸಂಘಗಳ ಸಹಾಯಕ ನಿಬಂಧಕರು/ ಸಹಕಾರ ಅಭಿವೃದ್ಧಿ ಅಧಿಕಾರಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಸಹಕಾರ ಸಂಘಗಳ ಉಪ ನಿಬಂಧಕರು ತಿಳಿಸಿದ್ದಾರೆ. ಆಸಕ್ತಿಯುಳ್ಳ ಅರ್ಜಿದಾರರು ತಮ್ಮ ಕಾನೂನು ಪದವಿ/ಬಾರ್ ಕಾನ್ಸಿಲ್‌ಯಿಂದ ಪಡೆದ ಪ್ರಮಾಣ ಪ್ರತಿ ಹಾಗೂ ಸೇವಾ ಅನುಭವದ ಪ್ರಮಾಣ ಪತ್ರದೊಂದಿಗೆ ತಮ್ಮ ವೈಯಕ್ತಿಕ ಮಾಹಿತಿ ಒಳಗೊಂಡ ಅರ್ಜಿಯನ್ನು ಕಲಬುರಗಿ ಸಹಕಾರ ಸಂಘಗಳ ಉಪ ನಿಬಂಧಕರ ಕಚೇರಿಯಲ್ಲಿ 2026ರ ಫೆಬ್ರವರಿ 10 ರೊಳಗಾಗಿ ಸಲ್ಲಿಸಬೇಕು. ವಕೀಲ ವೃತ್ತಿಯಲ್ಲಿ ಕನಿಷ್ಟ 5 ವರ್ಷ ಸೇವಾ ಅನುಭವ ಹೊಂದಿರುವ ದಾಖಲಾತಿಗಳನ್ನು ಸಲ್ಲಿಸಬೇಕು.

# ನಾರಾಯಣಪುರ ಗ್ರಾಮದಲ್ಲಿ ಗುರು ಶಿಷ್ಯರ ಸಮಾರಂಭ

• ಮಲ್ಲಮ್ಮ ನುಡಿ ವಾರ್ತೆ.
ಬಸವಕಲ್ಯಾಣ




ವಿದ್ಯಾರ್ಥಿ ಗಳು ಎಲ್ಲರೂ ಸೇರಿ ಕೊಂಡು ಗುರು ಶಿಷ್ಯರ ಸಮಾರಂಭ ಹಮ್ಮಿಕೊಂಡಿದ್ದು ನಿಜ್ಜಕೂ ಶ್ಲಾಘನೀಯ ಎಂದು ಗೌರ ಸರ್ಕಾರಿ ಪ್ರೌಢ ಶಾಲೆಯ ಮುಖ್ಯ ಗುರುಗಳಾದ ಸುಧಾಕರ ಮಹೇಂದೇರ್ಕರ ತಿಳಿಸಿದರು. ತಾಲೂಕಿನ ನಾರಾಯಣಪುರ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯಲ್ಲಿ 2010–11ನೇ ಸಾಲಿನ ಎಸ್. ಎಸ್. ಎಲ್. ಸಿ. ವಿದ್ಯಾರ್ಥಿಗಳಿಂದ ಹಮ್ಮಿಕೊಂಡ ಗುರುವಂದನಾ ಮತ್ತು ಸ್ನೇಹ ಸಮ್ಮೇಳನದಲ್ಲಿ ಮುಖ್ಯ ಅತಿಥಿಗಳಾಗಿ ಮಾತಾನಾಡಿ ಈ ಶಾಲೆ ನನ್ನಗೆ ಉತ್ತಮ ಅವಕಾಶ ನೀಡಿದೆ. ನನ್ನಿಂದ ಯಾವಾಗಲು ಸಹಾಯ ಸಹಕಾರ ಇರುತ್ತದೆ ಎಂದರು. ಉಪನ್ಯಾಸಕರಾದ ಜ್ಞಾನರಡ್ಡಿ ಭೋಗ್ಲೇ ವಿಷ್ಣುಕಾಂತ ಜಮಾದಾರ ನಿವೃತ್ತ ಮುಖ್ಯ ಗುರುಗಳಾದ ದೇವಿದಾಸ ಜಾಧವ ಇಂದುಮತಿ ಸೀಗೆಧಾರ ಇವರೆಲ್ಲರೂ ಇಂಥ ಸಮಾರಂಭ ಮಕ್ಕಳು ಹಮ್ಮಿಕೊಂಡಿದಕ್ಕೆ ಶುಭ ಕೋರಿದರು.

ವೇದಿಕೆ ಮೇಲೆ 2010–11ನೇ ಸಾಲಿನಲ್ಲಿ ಶಿಕ್ಷಣ ನೀಡಿದ ಶಿಕ್ಷಕರು ಉಪಸ್ಥಿತರಿದ್ದರು. ವಿದ್ಯಾರ್ಥಿಗಳಾದ ಆದರ್ಶ್. ಅಶ್ವಿನಿ. ಶಿವಕುಮಾರ ಹೌಶೆಟ್ಟೆ ಅಮೀತಾ ಮೈಸಲಗೆ ತಮ್ಮ ಅನಿಸಿಕೆ ವ್ಯಕ್ತ ಪಡಿಸಿದರು. ವಿದ್ಯಾರ್ಥಿನಿ ಅಮೀತಾ ಮೈಸಲಗೆ. ಪಿ.ಎಸ್.ಐ. ಆದ ಕಾರಣ. ಧನರಾಜ ರಾಸುರೆ ಪೊಲೀಸ್ ಹುದ್ದೆಗೆ ಹೋದ ಕಾರಣ ಅವರನ್ನು ಶಿಕ್ಷಕರಿಂದ ಸನ್ಮಾನಿಸಲಾಯಿತು. ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸರ್ಕಾರಿ ಪ್ರಾಥಮಿಕ ಶಾಲೆಯ ಮುಖ್ಯ ಗುರುಗಳಾದ ಶರಣ ಬಸಪ್ಪ ಬಿರಾದಾರ್ ಹಿರೇನಾಗವ ವಹಿಸಿದರು. ಆ ಬ್ಯಾಚಿನ್ ವಿಧಾರ್ಥಿ ವಿದ್ಯಾರ್ಥಿನಿಯರು ಆಸಕ್ತಿಯಿಂದ ಭಾಗವಹಿಸಿದರು. ಈ ಕಾರ್ಯಕ್ರಮದ ಪ್ರಾರ್ಥನಾ ಗೀತೆಯನ್ನು ಅಮಿತಾ ಮೈಸಲಗೆ ಅವರು ನೆರವೇರಿಸಿದರು .ಸ್ವಾಗತ ಹಾಗೂ ಸಂಚಾಲನೆ ಶಿವಕುಮಾರ ಹೌಶೆಟ್ಟೆ ನೆರವೇರಿಸಿದರು. ಶಿಕ್ಷಕರಾದ ನಾಗಪ್ಪ ನಿಣ್ಣೆ ವಂದಿಸಿದರು.

## ವಿಶ್ರಾಂತ ಶಿಕ್ಷಕಿ ಗುಲಾಬಿ ನಾಯ್ಕರದು ಅನುಕರಣೆಯ ವ್ಯಕ್ತಿತ್ವ : ಜಗದೀಶ ನಾಯಕ



- **ಮಲ್ಲಮ್ಮ ನುಡಿ ವಾರ್ತೆ,ಅಂಕೋಲಾ :**

ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ತಾಲೂಕು ಘಟಕ ಅಂಕೋಲಾ ವತಿಯಿಂದ ಜನವರಿ ತಿಂಗಳಲ್ಲಿ ವಯೋ ನಿವೃತ್ತಿಯನ್ನು ಹೊಂದಿರುವ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಅವರ್ಸಾ ಹೆಣ್ಣು ಶಾಲೆಯ ಗುಲಾಬಿ ಬಿ. ನಾಯ್ಕರವರನ್ನು ಅವರ ಮನೆಯಂಗಳದಲ್ಲಿ ಸನ್ಮಾನಿಸಿ, ಗೌರವಿಸಿ, ಬೀಳ್ಕೊಡುವ ಕಾರ್ಯಕ್ರಮ ನಡೆಯಿತು.ಸನ್ಮಾನಿಸಿ ಮಾತನಾಡಿದ ಅಂಕೋಲಾ ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಘಟಕದ ಅಧ್ಯಕ್ಷ ಜಗದೀಶ ಜಿ. ನಾಯಕ, ಹೊಸ್ಕೇರಿ, ವಿಶ್ರಾಂತ ಶಿಕ್ಷಕಿ ಗುಲಾಬಿ ನಾಯ್ಕರು ನಾಲ್ಕು ದಶಕಗಳಿಗಿಂತಲೂ ಹೆಚ್ಚು ಕಾಲ ಶಿಕ್ಷಕಿಯಾಗಿ ಸಾರ್ಥಕ ಸೇವೆಯನ್ನು ಸಲ್ಲಿಸಿ ಇದೀಗ ವಯೋನಿವೃತ್ತಿಯನ್ನು ಹೊಂದಿದ್ದಾರೆ. ಅವರ ಸೇವೆ ಅನುಪಮವಾದುದು. ಅವರು ಅನುಕರಣೀಯ ವ್ಯಕ್ತಿತ್ವವನ್ನು ಹೊಂದಿದವರು. ಸರಳತೆ, ಸಜ್ಜನಿಕೆಯನ್ನು ಮೈಗೂಡಿಸಿಕೊಂಡು ಶಿಕ್ಷಕರಿಗೆ ಮಾದರಿಯಾದವರು. ಇವರನ್ನು ಶಿಕ್ಷಕರ ಸಂಘದ ಮೂಲಕ ಗೌರವಾದರಗಳೊಂದಿಗೆ ಅವರ ಮನೆಯಂಗಳದಲ್ಲಿಯೇ ಸನ್ಮಾನಿಸಿ, ಗೌರವಿಸಿ, ಬೀಳ್ಕೊಡಲು ಸಂಘ ಹೆಮ್ಮೆಪಡುತ್ತದೆ ಎಂದರು.ಸನ್ಮಾನ ಸ್ವೀಕರಿಸಿ ಮಾತನಾಡಿದ ವಿಶ್ರಾಂತ ಶಿಕ್ಷಕಿ ಗುಲಾಬಿ ಬಿ. ನಾಯ್ಕ ಮಾತನಾಡಿ, ಶಿಕ್ಷಕಿಯಾಗಿ ನಾನು ಸಲ್ಲಿಸಿದ ನನ್ನ ಸುದೀರ್ಘ ಸೇವೆ ನನಗೆ ತೃಪ್ತಿಯನ್ನು ತಂದಿದೆ. ನನ್ನ ಸೇವಾವಧಿಯಲ್ಲಿ ಪಾಲಕರು, ಪೋಷಕರು, ಇಲಾಖೆಯ ಅಧಿಕಾರಿಗಳು, ವಿದ್ಯಾರ್ಥಿಗಳು, ನನ್ನ ಸಂಘ,ನನಗೆ ಕೊಟ್ಟ ಸಹಕಾರ ಮರೆಯಲಾರದ್ದು, ನನ್ನ ಹೆಮ್ಮೆಯ ಸಂಘ ನನ್ನ ಮನೆ ಬಾಗಿಲಿಗೆ ಬಂದು ನನ್ನನ್ನು ಗೌರವಿಸಿ, ಬೀಳ್ಕೊಡುತ್ತಿರುವುದು ತುಂಬಾ ಸಂತಸವನ್ನು ತಂದಿದೆ. ಇಂತಹ ವಿಧೇಯಕ ಕಾರ್ಯಕ್ರಮಗಳು ಸಂಘದ ಮೂಲಕ ಇನ್ನೂ ನಿರಂತರವಾಗಿ ಮುಂದುವರೆಯಲಿ ಎಂದರು. ಶಿಕ್ಷಕರಾದ ಮಂಜುನಾಥ ನಾಯಕ, ಶ್ರೀನಿವಾಸ ನಾಯಕ, ವೇಲಾಯುಧ ನಾಯರ, ನಮ್ರತಾ ಬಿ. ನಾಯಕ ಅಭಿನಂದಿಸಿ ಮಾತನಾಡಿದರು. ಸಂಘದ ಸದಸ್ಯರಾದ ತುಕಾರಾಮ ಭಂಟ, ದಿವಾಕರ ದೇವನ ಮನೆ, ವೆಂಕಮ್ಮ ಬಿಂದೇಶ ನಾಯಕ ಶಿಕ್ಷಕರಾದ ಉದಯ ವಿ. ನಾಯಕ, ಅಶೋಕ ಬಲೆಗಾರ, ಜಯಶೀಲ ಆಗೇರ, ವಿಶ್ರಾಂತ ಶಿಕ್ಷಕರಾದ ರೋಹಿದಾಸ ಭಂಟ, ಸಂಜೀವ ಆರ್. ನಾಯಕ ಕುಟುಂಬಸ್ಥರಾದ ಮಂಜುನಾಥ ನಾಯ್ಕ, ಪ್ರೇಮಾ ನಾಯ್ಕ, ಶ್ರೀನಿವಾಸ ನಾಯ್ಕ, ರಾಜಶ್ರೀ ನಾಯ್ಕ ಮುಂತಾದವರು ಉಪಸ್ಥಿತರಿದ್ದರು. ಅಕ್ಷಯ ಹಾಗೂ ಸಹನಾ ಸಹಕರಿಸಿದರು. ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ರಾಜು ಎಚ್. ನಾಯಕ ಪ್ರಾಸ್ತಾವಿಕ ಮಾತುಗಳೊಂದಿಗೆ ಸ್ವಾಗತಿಸಿದರು. ಸಂಘದ ಉಪಾಧ್ಯಕ್ಷ ಮಂಜುನಾಥ ವೆಂಕಟರಮಣ ನಾಯಕ ಅಭಿನಂದಿಸಿ, ವಂದಿಸಿದರು.

## ಕನ್ನಡ ಮಾಧ್ಯಮ ಶಾಲೆ ಒಳಪಡಿಸಲು ಶಿಕ್ಷಣ ಸಚಿವ ಮಧು ಬಂಗಾರಪ್ಪ ರವರಿಗೆ ಮನವಿ



- **ಮಲ್ಲಮ್ಮ ನುಡಿ ವಾರ್ತೆ,ಕಲಬುರಗಿ:**

ಕಲ್ಯಾಣ ಕರ್ನಾಟಕದ 1995ರ ನಂತರದ ಎಲ್ಲಾ ಅನುದಾನ ರಹಿತ ಕನ್ನಡ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸುವ ಕಲ್ಯಾಣ ಕರ್ನಾಟಕ ಕನ್ನಡ ಮಾಧ್ಯಮ ಅನುದಾನ ರಹಿತ ಶಾಲೆಗಳ ಆಡಳಿತ ಮಂಡಳಿಯ ಒಕ್ಕೂಟ-ದ ಸಂಘದ ವತಿಯಿಂದ ಸಚಿವ ಮಧು ಬಂಗಾರಪ್ಪ ಅವರಿಗೆ ಸಂಘದ ಜಿಲ್ಲಾಧ್ಯಕ್ಷ ಅನಿಲಕುಮಾರ್ ಎನ್ ಡಾಂಗೆ ನೇತೃತ್ವದಲ್ಲಿ ಬೆಂಗಳೂರಿನಲ್ಲಿ ಮನವಿ ಸಲ್ಲಿಸಲಾಯಿತು.

ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಶಿಕ್ಷಣದ ಪ್ರಗತಿ ಕುಂಠಿತವಾಗಿರುವುದರ ಜೊತೆಗೆ, ಕನ್ನಡವು ವಿವಿಧ ಭಾಷೆಗಳಿಂದ ಬಡ ಕೂಸಾಗಿದೆ. ಅದನ್ನು ಉಳಿಸಿ ಬೆಳೆಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ, ಈ ನಿಟ್ಟಿನಲ್ಲಿ ಕಲ್ಯಾಣ ಕರ್ನಾಟಕದ ಕೆಲವೇ ಕೆಲವು ಅನುದಾನ ರಹಿತ ಕನ್ನಡ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢಶಾಲೆಗಳು ಕನ್ನಡ ಮಾಧ್ಯಮದಿಂದ ಆಂಗ್ಲ ಮಾಧ್ಯಮಕ್ಕೆ ಪರಿವರ್ತನೆಯಾಗಲು ಅವಕಾಶ ಸರಕಾರ ಮತ್ತು ಶಿಕ್ಷಣ ಇಲಾಖೆ ನೀಡಿದಾಗಲೂ ಮಾತೃ ಭಾಷೆಯ ಮೇಲಿನ ಮಮಕಾರದಿಂದ ಇತರೆ ಭಾಷೆಗೆ ಪರಿವರ್ತನೆಯಾಗದೇ ಕನ್ನಡ ಭಾಷೆಯಲ್ಲಿಯೇ ಬೋಧಿಸುತ್ತಿರುವುದು ಹೆಮ್ಮೆಯ ವಿಷಯವಾಗಿರುತ್ತದೆ.

ಸರಕಾರಿ ಕನ್ನಡ ಶಾಲೆಗಳಲ್ಲಿ ದಾಖಲಾತಿ ಕೊರತೆಯಾಗುತ್ತಿದೆ ಎಂಬ ಕಾರಣಕ್ಕೆ ಸರಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಆಂಗ್ಲ ಮಾಧ್ಯಮ ಶಾಲೆಗಳಾಗಿ ಪರಿವರ್ತಿಸುತ್ತಿರುವ ಸಂದರ್ಭದಲ್ಲಿಯೂ ಎದೆಗುಂದದೆ ಮಾತೃಪ್ರೇಮದಿಂದ, ಕನ್ನಡ ಮಾಧ್ಯಮ ಅನುದಾನರಹಿತ ಶಾಲೆಗಳು ಕನ್ನಡ ಮಾಧ್ಯಮದಲ್ಲಿಯೇ ಉಳಿದುಕೊಂಡಿರುವುದು ಸಾಹಸದ ಕೆಲಸವಾಗಿದೆ. ಆದರೆ ದಿನದಿಂದ ದಿನಕ್ಕೆ ಸರಕಾರದ ಆಂಗ್ಲ ಮತ್ತು ಎಲ್ಲಾ ಉಚಿತ (ಸರಕಾರಿ ಮಟ್ಟದಲ್ಲಿ ಒಂದು ಮಗುವಿಗೆ ಎಷ್ಟು ಆರ್ಥಿಕ ಹೊರೆ ಯಾಗುತ್ತಿದೆ) ಎಂಬ ಪೈಪೋಟಿಯಿಂದ ಹಾಗೂ ಶಿಕ್ಷಣ ಇಲಾಖೆ ವಿಧಿಸುತ್ತಿರುವ ಅಸಂವಿಧಾನಿಕ ಹಲವಾರು ನಿಯಮಗಳಿಂದ ಆರ್ಥಿಕವಾಗಿ ನಲುಗಿಹೋಗಿದೆ.ಆದ ಕಾರಣ ನಮ್ಮ ಮಾತೃ ಭಾಷೆಯಾದ ಕನ್ನಡವನ್ನು ಕಲ್ಯಾಣ ಕರ್ನಾಟಾಗಿಲ್ಲ. ಉಳಿಸಿ" ಬೆಳೆಸುವುದಕ್ಕಾಗಿ ಸದರಿ ಕಲ್ಯಾಣ ಕರ್ನಾಟಕ ಕನ್ನಡ ಮಾಧ್ಯಮ ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಅನುದಾನವನ್ನು ನೀಡುವುದು ಮತ್ತು ನಿಯಮ ನಿಬಂಧನೆಗಳಲ್ಲಿ ಸಡಿಲಿಕೆ ನೀಡಿ ಶಾಲೆಗಳನ್ನು ಉಳಿಸಿ ಕನ್ನಡ ಬೆಳೆಸಿ ಸರಕಾರದ ಜವಾಬ್ದಾರಿಯಾಗಿರುತ್ತದೆ, ಆದುದರಿಂದ ಕೂಡಲೇ ಈ ಕೆಳಕಂಡ ಬೇಡಿಕೆಗಳನ್ನು ಈಡೇರಿಸಬೇಕೆಂದು ಮನವಿಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಚಂದ್ರಶೇಖರ್ ಕರಜಿಗಿ, ಮಹಿಬೂಬ್ ನರಿಬೋಳ, ನಿಂಗಪ್ಪ ಆರ್, ಗುಂಡು ರಾವ್ ದೇಶಮುಖ್, ಅಣ್ಣ ರಾವ್ ಹೆಗ್ಗಿ ಸಲೀಂ ಶೇಕ್, ರೇವಣಸಿದ್ದ ನಂದೂರ, ನಿಂಗಪ್ಪ ಮಯಾರ್, ದೇಸು ರಾಥೋಡ್, ಸಂತೋಷ್ ಜಾದವ್, ಅವಿನಾಶ್ ಕೊಡದೂರ ಸೇರಿದಂತೆ ಇತರರು ಇದ್ದರು.

# ಸಂಪೂರ್ಣತಾ ಅಭಿಯಾನ 2.0ಗೆ ಚಾಲನೆ

## ನೀತಿ ಅಯೋಗ ಗುರುತಿಸಿರುವ ತಾಲೂಕಿನಲ್ಲಿ ಶೇ.100ರಷ್ಟು ಪ್ರಗತಿ ಸಾಧಿಸಿ -ಬಿ.ಫೌಜಿಯಾ ತರನ್ನುಮ್

**ಮಲ್ಲಮ್ಮ ನುಡಿ ವಾರ್ತೆ**

- **ಕಲಬುರಗಿ:**

ನೀತಿ ಆಯೋಗ ಗುರುತಿಸಿರುವ ಜಿಲ್ಲೆಯ ಆಫಜಲಪೂರ, ಕಾಳಗಿ, ಶಹನಾದ ತಾಲೂಕಿನಲ್ಲಿ ಸಂಪೂರ್ಣತಾ ಅಭಿಯಾನ 2.0 ರ ಮೂಲಕ ಆರೋಗ್ಯ, ಅಪೌಷ್ಟಿಕತೆ ನಿವಾರಣೆ, ಶಿಕ್ಷಣ ಹಾಗೂ ಕೃಷಿ ಕ್ಷೇತ್ರಗಳಲ್ಲಿ ಶೇ.100ರಷ್ಟು ಪ್ರಗತಿ ಸಾಧಿಸುವುದು ನಮ್ಮ ಗುರಿಯಾಗಿದ್ದು, ಅದನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಬೇಕು ಎಂದು ಅಧಿಕಾರಿಗಳಿಗೆ ಡಿ.ಸಿ. ಬಿ.ಫೌಜಿಯಾ ತರನ್ನುಮ್ ಸೂಚಿಸಿದರು.

ಸೋಮವಾರ ಇಲ್ಲಿನ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಆಯೋಜಿಸಿದ ನೀತಿ ಆಯೋಗದ ಮಹತ್ವಾಕಾಂಕ್ಷಿ ಕಾರ್ಯಕ್ರಮ "ಸಂಪೂರ್ಣತಾ ಅಭಿಯಾನ 2.0"ಕ್ಕೆ ಚಾಲನೆ ನೀಡಿ ಮಾತನಾಡಿದ ಅವರು,




ಮೂರು ಆಕಾಂಕ್ಷಿ ಬ್ಲಾಕ್‌ಗಳಲ್ಲಿ ಕಾರ್ಯಕ್ರಮಗಳು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಇಲಾಖೆಗಳ ನಡುವಿನ ಸಮನ್ವಯ ಅತ್ಯಗತ್ಯ ಎಂದು ಪ್ರತಿಪಾದಿಸಿದರು.

ಇನ್ನು ಕ್ಷೇತ್ರ ಮಟ್ಟದ ನಿರಂತರ ಮೇಲ್ವಿಚಾರಣೆ ಅತ್ಯವಶ್ಯಕವಾಗಿದೆ. ಪ್ರಮುಖವಾಗಿ ಜನರ ಸಹಭಾಗಿತ್ವ ಅತ್ಯಂತ ಅಗತ್ಯವೆಂದು ಒತ್ತಿಹೇಳಿದ ಅವರು, ಯಾವುದೇ ಅರ್ಹ ಫಲಾನುಭವಿಯೂ ಸರ್ಕಾರಿ ಯೋಜನೆ ಮತ್ತು ಸೌಲಭ್ಯಗಳಿಂದ ಹೊರಗುಳಿಯದಂತೆ ಎಚ್ಚರ ವಹಿಸಬೇಕೆಂದರು.

ಕಾಳಗಿಯೆ ನಮಗೆ ಪ್ರೇರಣೆ: ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವಾರ್ ಸಿಂಗ್ ಮಾತನಾಡಿ, ನೀತಿ ಆಯೋಗದ ಸಂಪೂರ್ಣತಾ ಅಭಿಯಾನ 1.0ರಲ್ಲಿ ಕಾಳಗಿ ಆಕಾಂಕ್ಷಿ ಬ್ಲಾಕ್ 6 ಸೂಚಕಗಳಲ್ಲಿ 5 ಸೂಚಕಗಳನ್ನು ಶೇ.100ರಷ್ಟು ಪ್ರಗತಿ ಸಾಧಿಸಿ ಬೆಳ್ಳಿ ಪದಕ ಪಡೆದಿರುವುದು ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದಲ್ಲದೆ 2.0 ಅಭಿಯಾನಕ್ಕೆ ಇದೇ ಪ್ರೇರಣೆ–ಯಾಗಿದೆ ಎಂದರು.

ಸಂಪೂರ್ಣತಾ ಅಭಿಯಾನ 2.0ರಲ್ಲಿ ಶೇ.100ರಷ್ಟು ಗುರಿ ಸಾಧನೆಗೆ ಎಲ್ಲರು ಸಂಕಲ್ಪ ಮಾಡಬೇಕು. ಎಲ್ಲಾ ಇಲಾಖೆಗಳು ಪ್ರತಿ 3 ತಿಂಗಳಿಗೊಮ್ಮೆ ಕಾರ್ಯಯೋಜನೆ ರೂಪಿಸಬೇಕು. ಪ್ರತಿ ವಾರ ಪರಿಶೀಲನೆ, ಕ್ಷೇತ್ರ ಭೇಟಿ ಹಾಗೂ ನೈಜ ಫಲಿತಾಂಶ ಆಧಾರಿತ ಅನುಷ್ಠಾನಕ್ಕೆ ತರವುದು ನಮ್ಮೆಲ್ಲರ ಆದ್ಯತೆ ಆಗಬೇಕು ಎಂದರಲ್ಲದೆ ದಾಖಲೆಗಿಂತ ನೆಲಮಟ್ಟದ ಸಾಧನೆ ಮುಖ್ಯ ಎಂಬುದನ್ನು ಅವರು ಸ್ಪಷ್ಟಪಡಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತಿಯ ಯೋಜನಾ ನಿರ್ದೇಶಕ ಜಗದೇವಪ್ಪ, ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್, ಡಿ.ಎಚ್.ಓ ಡಾ. ಶರಣಬಸಪ್ಪ ಕ್ಯಾತನಾಳ, ಆಕಾಂಕ್ಷಿ ಬ್ಲಾಕ್ ಫೆಲೋ ಶಿವರಾಜ ಹೊಳ್ಕರ್ ಸೇರಿದಂತೆ ಕಾಳಗಿ, ಆಫಜಲಪೂರ ಹಾಗೂ ಶಹಾಬಾದ ತಾಲ್ಲೂಕಿನ ತಾಲೂಕಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಸಿ.ಡಿ.ಪಿ.ಓ ಗಳು, ಸಹಾಯಕ ಕೃಷಿ ನಿರ್ದೇಶಕರುಗಳು, ತಾಲೂಕಾ ಆರೋಗ್ಯಾಧಿಕಾರಿಗಳು ಹಾಗೂ ಜಿಲ್ಲಾ ಹಾಗೂ ಬ್ಲಾಕ್ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

## ಫೆಬ್ರವರಿ 4 ರಂದು ವಿಶೇಷ ನೋಂದಣಿ ಅಭಿಯಾನ

**ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

–ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಸೂಚನೆಯಂತೆ ಪ್ರಧಾನಮಂತ್ರಿ ಸುರಕ್ಷಾ ಬೀಮಾ ಯೋಜನೆ (PMSBY), ಪ್ರಧಾನಮಂತ್ರಿ ಜೀವನ ಜ್ಯೋತಿ ಬೀಮಾ ಯೋಜನೆ (PMJJBY) ಹಾಗೂ ಅಟಲ್ ಪಿಂಚಣಿ ಯೋಜನೆ (APY) ಗಳಿಗೆ ಸಂಬಂಧಿಸಿದಂತೆ ಇದೇ ಫೆಬ್ರವರಿ 4 ರಂದು ಕಲಬುರಗಿ ಹಾಗೂ ಆಳಂದ ತಾಲೂಕು ಪಂಚಾಯಿತಿ ಕಚೇರಿಗಳಲ್ಲಿ ವಿಶೇಷ ಸಾಮೂಹಿಕ ನೋಂದಣಿ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

ಕಲಬುರಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಇವರ ಅಧ್ಯಕ್ಷತೆಯಲ್ಲಿ ಅಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಕಲಬುರಗಿ ತಾಲ್ಲೂಕು ಪಂಚಾಯಿತಿ ಕಚೇರಿ ಹಾಗೂ ಅಂದು ಮಧ್ಯಾಹ್ನ 2 ರಿಂದ ಸಂಜೆ 4 ಗಂಟೆವರೆಗೆ ಆಳಂದ ತಾಲೂಕು ಪಂಚಾಯಿತಿ ಕಚೇರಿಗಳಲ್ಲಿ ವಿಶೇಷ ನೋಂದಣಿ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

ಮೇಲ್ಕಂಡ ಸಾಮಾಜಿಕ ಭದ್ರತಾ ಯೋಜನೆಗಳಡಿ ಗರಿಷ್ಠ ನೋಂದಣಿ ಸಾಧಿಸುವ ಉದ್ದೇಶದಿಂದ ಎಲ್ಲಾ ಸಂಬಂಧಪಟ್ಟ ಇಲಾಖೆಗಳು ಅಗತ್ಯ ಸಹಕಾರ ನೀಡಿ, ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ನಿಯೋಜಿಸಲು ಮತ್ತು ಸಾರ್ವಜನಿಕರಲ್ಲಿ ವ್ಯಾಪಕ ಜಾಗೃತಿ ಮೂಡಿಸಬೇಕು. ಕಾರ್ಯಕ್ರಮದಲ್ಲಿ ಕಲಬುರಗಿ ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ವಿಕಾಸ್ ಸಜ್ಜನ್, ಆಳಂದ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಮಾನಪ್ಪ ಕಟ್ಟಿಮಾನಿ ಹಾಗೂ ಕಲಬುರಗಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಮೊಹಮ್ಮದ್ ಸೈಯದ್ ಪಟೇಲ್ ಸಹ ಉಪಸ್ಥಿತರಿರುವರು. ಎಲ್ಲಾ ಸಾರ್ವಜನಿಕರು ಈ ಮೇಲ್ಕಂಡ ಸಾಮಾಜಿಕ ಭದ್ರತಾ ಯೋಜನೆಗಳಡಿ ತಮ್ಮ ಹೆಸರು ನೋಂದಣಿ ಮಾಡಿಕೊಂಡು ಈ ಸುವರ್ಣಾವಕಾಶದ ಸದುಪಯೋಗಪಡಿಸಿಕೊಳ್ಳಬೇಕೆಂದು ಕಲಬುರಗಿ ಲೀಡ್ ಬ್ಯಾಂಕ್ ಮುಖ್ಯ ವ್ಯವಸ್ಥಾಪಕರಾದ ರವಿಗೌಡ ಅವರು ತಿಳಿಸಿದ್ದಾರೆ.

## ಉತ್ತಮ ಸಮಾಜ ನಿರ್ಮಾಣಕ್ಕೆ ಮೌಲ್ಯ ಶಿಕ್ಷಣ ಅಗತ್ಯ : ಪ್ರೇಮಾ ಆರ್. ಪಾಟೀಲ್

- **ಮಲ್ಲಮ್ಮ ನುಡಿ ವಾರ್ತೆ,ಹುಮನಾಬಾದ್ :**



ಉತ್ತಮ ಸಮಾಜದ ನಿರ್ಮಾಣಕ್ಕೆ ಗುಣಮಟ್ಟದ ಶಿಕ್ಷಣದ ಜತೆಗೆ ಮೌಲ್ಯ ಶಿಕ್ಷಣ ಅಗತ್ಯವಾಗಿ ಬೇಕಾಗಿದೆ ಎಂದು ರಾಜರಾಜೇಶ್ವರಿ ದೇವಸ್ಥಾನ ಟ್ರಸ್ಟ್ ಅಧ್ಯಕ್ಷೆ ಪ್ರೇಮಾ ರಾಜಶೇಖರ ಪಾಟೀಲ್ ಹೇಳಿದರು.

ತಾಲೂಕಿನ ಹಳ್ಳಿಖೇಡ(ಬಿ) ಪಟ್ಟಣದ ಚೌಡೇಶ್ವರಿ ದೇವಸ್ಥಾನದ ಮುಂಭಾಗದಲ್ಲಿ ನಡೆದ ಹಿಬಾರೆ ಹೈಟೆಕ್ ಕಿಡ್ಸ್ ಪ್ಲೇ ಶಾಲೆ ವಾರ್ಷಿಕೋತ್ಸವ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಇಂದಿನ ನಾಗರಿಕ ಜಗತ್ತಿನಲ್ಲಿ ವೈಜ್ಞಾನಿಕ ಕ್ಷೇತ್ರ ಬಹಳ ಬೆಳೆಯುತ್ತಿರುವ ಹಿನ್ನಲೆ ಯುವ ಪೀಳಿಗೆಗಳು ಹೆಚ್ಚಿನ ಕಾಲ ಸಾಮಾಜಿಕ ಜಾಲತಾಣದಲ್ಲಿ ತಮ್ಮ ಸಮಯ ಹಾಳು ಮಾಡಿಕೊಳ್ಳುತ್ತಿದ್ದಾರೆ. ಹೀಗಾಗಿ ಮಕ್ಕಳ ಬೆಳವಣಿಗೆಗಾಗಿ ಶಿಕ್ಷಕ ವೃಂದದವರು ಹಾಗೂ ಪಾಲಕ ಪೋಷಕರು ಹೆಚ್ಚಿನ ಜಾಗೃತಿ ವಹಿಸಿ, ಉತ್ತಮ ಸಂಸ್ಕಾರ ನೀಡುವ ಪ್ರಯತ್ನ ಮಾಡಬೇಕು ಎಂದರು.

ಶಾಲಾ ವ್ಯಾಸಂಗ ಅವಧಿಯಲ್ಲಿ ಬೋದಕರು ವರ್ಗ ಕೋಣೆಯಲ್ಲಿ ಮಾಡುವ ಮಾರ್ಗದರ್ಶನ ಚಾಚು ತಪ್ಪದೇ ವಿದ್ಯಾರ್ಥಿಗಳು ಪಾಲಿಸಬೇಕು. ಜತೆಗೆ ಉತ್ತಮ ಸಂಸ್ಕಾರಗಳನ್ನು ಮೈಗೂಡಿಸಿಕೊಂಡು ಗುರುಹಿರಿಯರಿಗೆ ಗೌರವ ಕೊಡಬೇಕು ಎಂದು ಸಲಹೆ ನೀಡಿದರು. ಹಿಬಾರೆ ಶಾಲೆ ಅಧ್ಯಕ್ಷ ನಾಗರಾಜ ಹಿಬಾರೆ ಮಾತನಾಡಿ, ನಮ್ಮ ಶಾಲೆಯ ಶಿಕ್ಷಕ ವೃಂದ ಹಾಗೂ ಪಾಲಕರ ಸಹಕಾರ ಮತ್ತು ವಿದ್ಯಾರ್ಥಿಗಳ ಮಾಡಿದ ಉತ್ತಮ ಸಾಧನೆಯಿಂದ ನನ್ನ ಶಿಕ್ಷಣ ಸಂಸ್ಥೆ ಬಹಳ ಎತ್ತರಕ್ಕೆ ಬೆಳೆಯುತ್ತಿದೆ. ಈ ಹಿನ್ನಲೆಯಲ್ಲಿ ನಮ್ಮ ಹಿಬಾರೆ ಕುಟುಂಬ ಸದಸ್ಯರು ಜೊತೆಗೂಡಿ ಶೈಕ್ಷಣಿಕ ಪ್ರಗತಿಗೆ ಶ್ರಮಿಸುತ್ತಾ ಸಮಾಜ ಸೇವೆ ಮಾಡುತ್ತೇವೆ ಎಂದರು.

ಈ ಸಂದರ್ಭದಲ್ಲಿ ಬಿ.ಕೆ. ಸುಮನ ಬೇಹನಜಿ, ವಿದ್ಯಾ ಪಾಟೀಲ್, ಮಲ್ಲಮ್ಮಾ ತಾಳಂಪಳ್ಳಿ, ರುಚೀತಾ ಹಿಬಾರೆ, ಸುಲೋಚನಾ ಥೌಳೆ, ಶ್ರೀಮತಿರೆಡ್ಡಿ , ಮೇಘಾ ಹಿಬಾರೆ, ಶಿವಮಂಗಲಾ ಗೌಡನಗುರು ಸೇರಿ ಅನೇಕರಿದ್ದರು.

## ನಾರಾಯಣಪೂರ ಗ್ರಾಮದಲ್ಲಿ ಫೆ.8ರಂದು ಶೋಭಾಯಾತ್ರೆ ಅದ್ದೂರಿ ಹಿಂದೂ ಸಮ್ಮೇಳನ.



- **ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ :**

ಹಿಂದೂ ಸಮಾಜವು ಕೇವಲ ಧರ್ಮವಲ್ಲದೆ ಸಮಾಜದ ಏಕತೆ, ಸಂಸ್ಕಂತ ಉಳಿವು ಮತ್ತು ಎಲ್ಲರಲ್ಲೂ ವಿಶಾಲ ಮನೋಭಾವ ಮೂಡಿಸುವ ಧರ್ಮವಾಗಿದೆ. ಅಲ್ಲದೆ ಭಾರತದ ಅಖಂಡತೆ ಕಾಪಾಡುವ ಆಶಾ ಭಾವನೆಯೂ ಹೊಂದಿದೆ.ಇದೇ ನಿಟ್ಟಿನಲ್ಲಿ ಹಿಂದೂ ಧರ್ಮದ ಜಾಗೃತಿ ಮೂಡಿಸುವ ಉದ್ದೇಶದಿಂದ ಇದೇ ತಿಂಗಳ ಫೆ.8ರಂದು ನಾರಾಯಣಪುರ ಗ್ರಾಮದಲ್ಲಿ ಭಾನುವಾರರಂದು ಅದ್ದೂರಿಯಾಗಿ ಹಿಂದೂ ಸಮ್ಮೇಳನ ಹಮ್ಮಿಕೊಳ್ಳಲಾಗಿದೆ ಎಂದು ಹಿಂದೂ ಸಮ್ಮೇಳನ ಆಯೋಜನೆ ಸಮಿತಿ ಅಧ್ಯಕ್ಷ ನರಸಿಂಗ್ ಲಾಲ್ ರಾಜಪುತ ತಿಳಿಸಿದರು. ಈಗಾಗಲೇ ಸಮ್ಮೇಳನಕ್ಕೆ ಸಂಪೂರ್ಣ ತಯ್ಯಾರಿ ಮಾಡಲಾಗಿದೆ. ಅಂದು ಬೆಳಿಗ್ಗೆ 11 ಗಂಟೆಗೆ ನಾರಾಯಣಪುರ ಗ್ರಾಮದ ಶ್ರೀ ರಾಮ ವೃತ್ತದಿಂದ ಪ್ರಾರಂಭ ಆಗುವ ಶೋಭಾಯಾತ್ರೆ ಶ್ರೀ ವಾಲ್ಮೀಕಿ ಚೌಕ್ ಮಾರ್ಗವಾಗಿ, ಶ್ರೀ ಕಾಳಿಕಾ ದೇವಿ ಮಂದಿರ, ಶ್ರೀ ಹನುಮಾನ ಮಂದಿರ ಹಾಗೂ ಶ್ರೀ ಲಕ್ಷ್ಮೀ ಮಂದಿರ ಮಾರ್ಗವಾಗಿ ತಾಯಿ ಭವಾನಿ ಮಂದಿರಕ್ಕೆ ಅದ್ದೂರಿ ಶೋಭಾಯಾತ್ರೆ ತಲುಪಲಿದ್ದು, ಮೆರವಣಿಗೆಯಲ್ಲಿ ವಿವಿಧ ಸಾಂಸ್ಕೃತಿಕ ಕಲಾ ತಂಡಗಳು, ಡೊಳ್ಳು ಕುಣಿತ ಹಾಗೂ ವಾದ್ಯಗಳ ಮೂಲಕ ಭಾರತ ಮಾತೆಯ ಭಾವಚಿತ್ರ ಪ್ರದರ್ಶಿಸಲಾಗುವುದು. ಈ ಮೆರವಣಿಗೆಯಲ್ಲಿ ಮಠಾಧೀಶರು, ಗಣ್ಯರು, ಸಾರ್ವಜನಿಕರು, ಮಹಿಳೆಯರು ಸೇರಿದಂತೆ ಹಲವರು ಪಾಲ್ಗೊಳ್ಳಲಿದ್ದಾರೆ. ನಂತರ ಭವಾನಿ ಮಂದಿರ ಆವರಣದಲ್ಲಿ ಸಾರ್ವಜನಿಕ ಕಾರ್ಯಕ್ರಮ ಸಮಾಪ್ತಿಗೊಳ್ಳುವುದು ಎಂದು ಸಮಿತಿಯ ಉಪಾಧ್ಯಕ್ಷ ಪೋಪಟ್ ಲಾಲ್ ಜಮಾದಾರ ತಿಳಿಸಿದರು. ಸಮ್ಮೇಳನ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಲು ಶ್ರೀ ಪೂಜ್ಯ ಡಾ.ಷ.ಬ್ರ.ಅಭಿನವ ಘನಲಿಂಗ ಶಿವಾಚಾರ್ಯರು, ತಾಯಿ ಲಲಿತಾ ಮಠ ಆಗಮಿಸುವರು. ದಿಕ್ಸೂಚಿ ಭಾಷಣವನ್ನು ಶ್ರೀಯುತ ರೇಕುನಾಯಕ್, ಸಾಮಾಜಿಕ ಸಾಮರ್ಥ್ಯ ವೇದಿಕೆ ವಿಭಾಯಗದ ಸಂಯೋಜಕರು ನಡೆಸಿಕೊಡಲಿದ್ದು, ಶೋಭಾಯಾತ್ರೆ ಅಧ್ಯಕ್ಷತೆಯನ್ನು ಮಹಾಂತಯ್ಯ ಮಠಪತಿ, ಹಾಗೂ ರವಿ ಸ್ವಾಮಿ ವಹಿಸುವರು. ಕೃಷ್ಣಾರೆಡ್ಡಿ ಸಾಬ್ದೆ, ರಾಮೇಶ್ವರ ಅಡಕಿಲೆ, ಮಹದೇವ್ ಖಂಡಾಳೆ, ಸಂದೀಪ್ ಬಿರಾದಾರ್, ಬಾಬು ಅರಳಿ, ವಾಮನ್ ಸೂರ್ಯವಂಶಿ ಸೇರಿದಂತೆ ಪ್ರಮುಖರು ಕಾರ್ಯಕ್ರಮದಲ್ಲಿ ಉಪಸ್ಥಿತಿ ಇರಲಿದ್ದು, ಕಾರ್ಯಕ್ರಮದ ನಂತರ ಸಾರ್ವಜನಿಕರಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿದೆ ಎಂದು ನರ್ಸಿಂಗ್ ರಾಜಪುತ ತಿಳಿಸಿದ್ದಾರೆ.

## ಫೆಬ್ರುವರಿ 4 ರಂದು ನಾನ್ ಎ.ಸಿ.ಸ್ಲೀಪರ್ ಬಸ್ ಸೇವೆ ಪ್ರಾರಂಭ




- **ಮಲ್ಲಮ್ಮ ನುಡಿ ವಾರ್ತೆ ,ಕಲಬುರಗಿ:**

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಕಲಬುರಗಿ ವಿಭಾಗಕ್ಕೆ –02 ವ್ಯಾಪ್ತಿಯಲ್ಲಿ ಬರುವ ಅಫಜಲಪೂರ ಘಟಕದಿಂದ ಬೆಂಗಳೂರಿಗೆ ಸಿಂದಗಿ, ಮುದ್ದೆಬಿಹಾಳ, ಚಿತ್ರದುರ್ಗ ಮಾರ್ಗವಾಗಿ ಅಮೋಘವರ್ಷ ನಾನ್ ಎ.ಸಿ. ಸ್ಲೀಪರ್ ಬಸ್ ಸೇವೆಯನ್ನು ಫೆಬ್ರುವರಿ 4 ರಂದು ಪ್ರಾರಂಭಿಸಲಾಗುತ್ತದೆ ಎಂದು ಕಲಬುರಗಿ ವಿಭಾಗೀಯ ನಿಯಂತ್ರಣಾಧಿಕಾರಿ ಕಲಬುರಗಿ ವಿಭಾಗ–2 ಕಲಬುರಗಿ ಇವರು ತಿಳಿಸಿದ್ದಾರೆ. ಅಫಜಲಪೂರದಿಂದ ಬೆಂಗಳೂರಿಗೆ ಹೊರಡುವ ಸಮಯ ಸಾಯಂಕಾಲ 5.45 ಗಂಟೆಗೆ ಬೆಂಗಳೂರಿನಿಂದ ಅಫಜಲಪೂರಕ್ಕೆ ಹೊರಡುವ ಸಮಯ ರಾತ್ರಿ 8.30 ಗಂಟೆಗೆ ಇರುತ್ತದೆ ಸಂಜೆ 4 ಗಂಟೆಗೆ ಅಫಜಲಪೂರ ಬಸ್ ನಿಲ್ದಾಣದಲ್ಲಿ ಫಜಲಪುರ ವಿಧಾನ ಸಭಾ ಶಾಸಕರಾದ ಎಂ.ವೈ.ಪಾಟೀಲ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರಾದ ರುಣಕುಮಾರ ಎಮ್. ಪಾಟೀಲ ಚಾಲನೆ ನೀಡುವರು. ಸ್ಥಳೀಯ ಗಣ್ಯವ್ಯಕ್ತಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಸಾರಿಗೆ ಸದುಪಯೋಗವನ್ನು ಸಾರ್ವಜನಿಕ ಪ್ರಯಾಣಿಕರು ಪಡೆದುಕೊಳ್ಳಬೇಕೆಂದು ವಿಭಾಗೀಯ ನಿಯಂತ್ರಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಂ.ಹೆಚ್.ಪಿ.ಎಸ್ ಶಾಲೆಯಲ್ಲಿ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ

- **ಮಲ್ಲಮ್ಮ ನುಡಿ ವಾರ್ತೆ,ಕೊಪ್ಪಳ :**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿಗಳ ಕಛೇರಿ, ತಾಲೂಕಾ ಆರೋಗ್ಯಾಧಿಕಾರಿಗಳ ಕಛೇರಿ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಶಾಸಕರ ಸರಕಾರಿ ಮಾದರಿಯ ಹಿರಿಯ ಪ್ರಾಥಮಿಕ ಶಾಲೆ, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಸೋಮವಾರ ಶಾಲಾ ಆವರಣದಲ್ಲಿ "ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ–2026"ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಕೊಪ್ಪಳ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಮಹೇಶ ಉಮಚಗಿ ಅವರು ಕಾರ್ಯಕ್ರಮ ಕುರಿತು ಮಾತನಾಡಿ, "ತಾರತಮ್ಯವನ್ನು ಕೊನೆಗೊಳಿಸುವುದು ಘನತೆಯನ್ನು ಕಾಪಾಡುವುದು" ಎಂಬ ಈ ವರ್ಷದ ಘೋಷವಾಕ್ಯದೊಂದಿಗೆ ಕಾರ್ಯಕ್ರಮ ಆಚರಿಸಲಾಗುತ್ತದೆ. ಜನವರಿ 30 ರಿಂದ ಫೆಬ್ರವರಿ 13



ರವರೆಗೆ "ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ ಕಾರ್ಯಕ್ರಮ–2026" ಹಮ್ಮಿಕೊಳ್ಳಲಾಗಿದೆ. ಇದರ ಉದ್ದೇಶ ಪ್ರತಿಯೊಬ್ಬರಿಗೂ ಕುಷ್ಠರೋಗದ ಬಗ್ಗೆ ಅರಿವು ಮೂಡಿಸಿ, ಶೀಘ್ರ ಪತ್ತೆ ತ್ವರಿತ ಚಿಕಿತ್ಸೆ ಪಡೆದುಕೊಳ್ಳುವುದು ಹಾಗೂ ಸಾಮಾಜಿಕ ಕಳಂಕದಿಂದ ಹೊರಬರುವುದು. ಇದು ಮೈಕೊಬ್ಯಾಕ್ಟೇರಿಯಾ ಲೆಪ್ರೈ ಎಂಬ ಸುಕ್ಷ್ಮಾಣುವಿನಿಂದ ಹರಡುತ್ತದೆ. ರೋಗಿಯು ಕೆಮ್ಮಿದಾಗ ಮತ್ತು ಸೀನಿದಾಗ ಗಾಳಿಯಲ್ಲಿ ಸೇರಿಕೊಂಡು ಒಬ್ಬರಿಂದ ಇನ್ನೊಬ್ಬರಿಗೆ ಹರುಡುತ್ತದೆ. ರೋಗದ ಲಕ್ಷಣಗಳು ಚರ್ಮದ ಮೇಲೆ ಯಾವುದೇ ತಿಳಿಬಿಳಿ, ತಾಮ್ರ ಬಣ್ಣದ ಸ್ಪರ್ಶಜ್ಞಾನವಿಲ್ಲದ ಮಚ್ಚೆ, ದಪ್ಪನಾದ ಎಣ್ಣೆ ಪಸರಿಸಿದಂತಹ ಹೊಳೆಯುವ ಚರ್ಮ, ದೇಹದ ಮೇಲಿನ ಗಂಟುಗಳು, ಕಣ್ಣಿನ ರೆಪ್ಪೆಗಳನ್ನು ಮುಚ್ಚುವಲ್ಲಿ ತೊಂದರೆ, ಕೈ ಅಥವಾ ಕಾಲುಗಳಲ್ಲಿ ಬಹುದಿನದ ಗಾಯ, ಕೈ ಅಥವಾ ಕಾಲುಗಳಲ್ಲಿ ಬೆರಳು ಮಡಿಚಿಕೊಂಡಿರುವುದು, ನಡೆಯುವಾಗ ಕಾಲು ಎಳೆಯುವುದು, ಕೈ ಅಥವಾ ಕಾಲುಗಳಲ್ಲಿ ಜುಮ್ಮೆನಿಸುವಿಕೆ ಅಥವಾ ಮರಗಟ್ಟುವಿಕೆ, ಅಂಗೈ ಅಥವಾ ಪಾದಗಳಲ್ಲಿ ಶೀತ, ಬಿಸಿ ಅಥವಾ ಸಂವೇದನೆ ನಷ್ಟವಾಗಿರುವುದು, ಕೈಗಳಲ್ಲಿ ವಸ್ತುಗಳನ್ನು ಹಿಡಿಯುವುದು ಹಾಗೂ ಪಾದರಕ್ಷೆಗಳನ್ನು ತೊಡುವಲ್ಲಿ ಬಲಹೀನತೆ ಕಂಡುಬರುವುದು. ಇಂತಹ ಲಕ್ಷಣಗಳು ಯಾರಿಗಾದರು ಕಂಡುಬಂದರೆ ತಕ್ಷಣ ತಮ್ಮ ಸಮೀಪದ ಸರ್ಕಾರಿ ಆಸ್ಪತ್ರೆ ಅಥವಾ ಆರೋಗ್ಯ ಸಿಬ್ಬಂದಿ, ಆಶಾ ಕಾರ್ಯಕರ್ತೆಯರನ್ನ ಸಂಪರ್ಕಿಸಬೇಕು. ರೋಗ ಕಚಿತಪಟ್ಟರೆ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಚಿಕಿತ್ಸೆ ನೀಡಲಾಗುತ್ತದೆ ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವ್ಹಿ.ಪಿ ಅವರು ಕುಷ್ಠರೋಗ ನಿರ್ಮೂಲನೆಯಲ್ಲಿ ಶಾಲಾ ವಿದ್ಯಾರ್ಥಿಗಳ ಪಾತ್ರ ಹಾಗೂ ವಹಿಸಬೇಕಾದ ಮುಂಜಾಗ್ರತ ಕ್ರಮಗಳ ಕುರಿತು ಮಾತನಾಡಿ, ಗ್ರಾಮೀಣ ಪ್ರದೇಶ ಮತ್ತು ನಗರ ಪ್ರದೇಶಗಳಲ್ಲಿ ಜಾಗೃತಿ ಮೂಡಿಸಬೇಕು. ಹದಿ–ಹರೆಯದವರ ಆರೋಗ್ಯ ರಕ್ಷಣೆ ಮತ್ತು ಇತರೆ ಸಾಂಕ್ರಾಮಿಕ, ಅಸಾಂಕ್ರಾಮಿಕ ರೋಗಗಳ ಬಗ್ಗೆ ವಿವರವಾದ ಮಾಹಿತಿ ನೀಡಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗಂಗಮ್ಮ ಕೆ. ಅವರು ಮಾತನಾಡಿ, ಕುಷ್ಠರೋಗದ ಬಗ್ಗೆ ಪ್ರತಿಯೊಬ್ಬರು ತಿಳಿದುಕೊಳ್ಳಿ, ಜಾಗೃತಿ ಮೂಡಿಸೋಣ, ತಪ್ಪುಕಲ್ಪನೆಗಳನ್ನು ಹೋಗಲಾಡಿಸೋಣ ಮತ್ತು ಕುಷ್ಠರೋಗದಿಂದ ಬಾಧಿತರಾದ ಎಲ್ಲರನ್ನೂ ಹಿಂದುಳಿಯದಂತೆ ನೋಡಿಕೊಳ್ಳೋಣ ಎಂದು ತಿಳಿಸಿದರು. ನಂತರ ಕುಷ್ಠರೋಗ ನಿರ್ಮೂಲನೆ ಕುರಿತು ಪ್ರತಿಜ್ಞಾವಿಧಿ ಬೋಧಿಸಿದರು.

ಶಾಲೆಯ ಮುಖ್ಯೋಪಾಧ್ಯಾಯರಾದ ಅಂದಪ್ಪ ಅವರು ಮಾತನಾಡಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು "ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ" ಹಮ್ಮಿಕೊಳ್ಳುವ ಮೂಲಕ ಜಾಗೃತಿ ಮೂಡಿಸುತ್ತಿದೆ. ಈ ಕಾರ್ಯಕ್ರಮ ವಿದ್ಯಾರ್ಥಿಗಳಿಗೆ ಬಹಳ ಉಪಯುಕ್ತವಾಗಿದೆ. ಜೊತೆಗೆ ವಿವಿದ ಸಾಂಕ್ರಾಮಿಕ, ಅಸಾಂಕ್ರಾಮಿಕ ರೋಗಗಳ ಬಗ್ಗೆ ಜಾಗೃತಿ ಮೂಡಿಸುತ್ತಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಂಡು ತಮ್ಮ ತಮ್ಮ ಮನೆ, ಊರು, ವಾರ್ಡ್ಗಳಲ್ಲಿ ಹಾಗೂ ಸುತ್ತ ಮುತ್ತಲಿನ ಸಾರ್ವಜನಿಕರಿಗೆ ಅರಿವು ಮೂಡಿಸುವಂತೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ದಿನೇಶ್, ಹಿರಿಯ ಮೇಲ್ವಿಚಾರಕ ವೀರಭದ್ರಪ್ಪ, ಆರೋಗ್ಯ ನಿರೀಕ್ಷಣಾಧಿಕಾರಿ ಪರಶುರಾಮ, ಲಿಂಕ್‌ವರ್ಕರ್ ಉದಯ ಸೇರಿದಂತೆ ಸಹಶಿಕ್ಷಕರು, ಆಶಾ ಕಾರ್ಯಕರ್ತೆ–ಯರು, ವಿದ್ಯಾರ್ಥಿಗಳು ಹಾಗೂ ಶಾಲಾ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಹಸಿರು ಸೇನೆ ಕ್ಯಾಲೆಂಡರ್ ಬಿಡುಗಡೆ



• **ಮಲ್ಲಮ್ಮ ನುಡಿ ವಾರ್ತೆ ,ಕೆಂಭಾವಿ:**

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಪೀಠಾಧಿಪತಿ ಚನ್ನಬಸವ ಶಿವಾಚಾರ್ಯರ ನೇತೃತ್ವದಲ್ಲಿ 2026 ರ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಸೇನೆಯ ಕ್ಯಾಲೆಂಡರ್ ಅನಾವರಣಗೊಳಿಸಲಾಯಿತು. ಈ ಸಂದರ್ಭದಲ್ಲಿ ಹಸಿರು ಸೇನೆಯ ಯಾದಗಿರಿ ಜಿಲ್ಲಾಧ್ಯಕ್ಷ ಎಚ್ ಆರ್ ಬಡಿಗೇರ್, ಸುರಪುರು ತಾಲೂಕ ಗೌರವಾಧ್ಯಕ್ಷ ಯಮನಪ್ಪ ಕುಂಬಾರ, ಹೋಬಳಿ ಮಹಿಳಾ ಘಟಕ ಅಧ್ಯಕ್ಷೆ ಬೋರಮ್ಮ ಹಿರೇಮಠ, ಪ್ರಧಾನ ಕಾರ್ಯದರ್ಶಿ ಪಾರ್ವತಿ ಹೂಗಾರ್, ಮಹಾದೇವಿ ಎಚ್ ಮೋಪಗಾರ, ಬೋರಮ್ಮ ಹೂಗಾರ್, ಸಂಗು ಪತ್ತೆಪುರ್, ಹೋಬಳಿ ಉಪಾಧ್ಯಕ್ಷ ಧರ್ಮಣ್ಣ ಮಳಿಕೇರಿ, ಯಲ್ಲಪ್ಪ ಮಳಿಕೇರಿ, ಮಹಿಬೂಬ್ ದಪ್ಪೆದಾರ ಮಲ್ಲು ತುಂಬಿಗಿ, ರಫೀಕ್ ಚೌದರಿ ಬಲಭೀಮ ದೊರೆ ಸೇರಿದಂತೆ ಇತರರಿದ್ದರು.

# ಫೆ.೮ ರಂದು ಡಿ.ಡಿ.ಯು ಕಾಲೇಜಿನಲ್ಲಿ ಪ್ರಥಮ ವರ್ಷದ ವಿಜ್ಞಾನ ವಿಭಾಗಕ್ಕೆ ಪ್ರವೇಶ ಪರೀಕ್ಷೆ



• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.**

ವಡಗೇರಾ ಪಟ್ಟಣದ ಪ್ರತಿಷ್ಠಿತ ಡಿ.ಡಿ.ಯು ಕಾಲೇಜಿನಲ್ಲಿ ಪ್ರಥಮ ವರ್ಷದ ಪಿಯುಸಿ ವಿಜ್ಞಾನ ವಿಭಾಗಕ್ಕೆ 2026 – 27 ನೇ ಸಾಲಿನ ಉಚಿತ ಪ್ರವೇಶಕ್ಕಾಗಿ ಫೆಬ್ರವರಿ 8 ರಂದು ವಡಗೇರಾ ಡಿ.ಡಿ.ಯು ಕಾಲೇಜಿನಲ್ಲಿ ಪ್ರವೇಶ ಪರೀಕ್ಷೆ ಹಮ್ಮಿಕೊಳ್ಳಲಾಗಿದೆ ಎಂದು ಡಿ.ಡಿ.ಯು ಸಮೂಹ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಮಲ್ಲಿಕಾರ್ಜುನ ಮೇಟಿ ತಿಸಿಳಿದರು.ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ವಡಗೇರಾ ಹಾಗೂ ದೋರನಹಳ್ಳಿ ಕೇಂದ್ರಗಳಲ್ಲಿ ಫೆಬ್ರವರಿ – 8ರಂದು ಬೆಳಗ್ಗೆ 10:30 ರಿಂದ 12:10 ರ ವರೆಗೆ ಪ್ರವೇಶ ಪರೀಕ್ಷೆ ನಡೆಯಲ್ಲಿದ್ದು ಗ್ರಾಮೀಣ ಭಾಗದ ಹೆಚ್ಚಿನ ವಿದ್ಯಾರ್ಥಿಗಳು ಭಾಗವಹಿಸಿ ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದರು ಎಸ್.ಎಸ್.ಎಲ್.ಸಿ ಹಾಗೂ ಪ್ರವೇಶ ಪರೀಕ್ಷೆಯಲ್ಲಿ ಪಡೆದ ಅಂಕಗಳು ಸೇರಿಸಿ ಮೆರಿಟ್ ಆಧಾರದ ಮೇಲೆ ತಲಾ 10 ವಿದ್ಯಾರ್ಥಿಗಳಿಗೆ ಉಚಿತ ಪ್ರವೇಶಾತಿ ನೀಡಲಾಗುತ್ತಿದೆ. ಇದಲ್ಲದೆ ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಶುಲ್ಕದಲ್ಲಿ ವಿನಾಯಿತಿ ಹಾಗೂ ಶಿಷ್ಯವೇತನ ಕೂಡಾ ನೀಡಲಾಗುವುದು ಎಂದು ಅವರು ತಿಳಿಸಿದರು. ಹೆಚ್ಚಿನ ಮಾಹಿತಿಗಾಗಿ ವಡಗೇರಾ ಕಾಲೇಜಿನ ಮೊಬೈಲ್ ನಂಬರ್ 9353532529 , 9686307517 ಹಾಗೂ ದೋರನಹಳ್ಳಿ ಕಾಲೇಜಿನ ಮೊಬೈಲ್ ನಂಬರ್ 9972062917 , 9902777109 ಗೆ ಸಂಪರ್ಕಿಸಲು ತಿಳಿಸಿದರು.ಈ ಸಂದರ್ಭದಲ್ಲಿ ಡಿಡಿಯು ಕಾಲೇಜ್ ಪ್ರಾಂಶುಪಾಲ ಹೊನ್ನಯ್ಯ ಕೊಂಕಲ, ನರಸಪ್ಪ ಪತ್ತಾರ ಇದ್ದರು.

# ಮಾಹಾಪುರಷರ ಜೀವನಾರ್ತ್ತಗಳನ್ನು ಪಾಲಿಸಿ: ರೇವಣಸಿದ್ದೇಶ್ವರ ಸ್ವಾಮಿ.

**ಮಲ್ಲಮ್ಮ ನುಡಿ ವರ್ತೆ ಯಾದಗಿರಿ.**

ಭಕ್ತಿಯಿಂದಲೇ ಭಗವಂತನಿಗೆ ಹತ್ತಿರವಾದ ದಾಸಶ್ರೇಷ್ಠ ಕನಕದಾಸರ ಭಕ್ತಿ ಮತ್ತು ದೇಶಕ್ಕಾಗಿ ಹೋರಾಡಿ ಬಲಿದಾನ ನೀಡಿದ ಅಪ್ಪಟ್ಟ ದೇಶಪ್ರೇಮಿ ಸಂಗೊಳ್ಳಿರಾಯಣ್ಣರಂತಹ ಮಾಹಪುರಷರ ಜೀವನಾರ್ಥಗಳನ್ನು ಪ್ರತಿಯೊಬ್ಬರು ಪಾಲಿಸಿ ಎಂದು ಅಗತರ್ಥ ಸರೂರ ಶಾಖಾಮಠದ ಹಾಲುಮತ ಗುರುಪೀಠದ ರೇವಣಸಿದ್ದೇಶ್ವರ ಸ್ವಾಮಿ ರ್ಶೀವಚನ ನೀಡಿದರು. ಸಮೀಪದ ಬಾಲಛೇಡ ಗ್ರಾಮದಲ್ಲಿ ನೂತನವಾಗಿ ಪ್ರತಿಷ್ಠಾಪಿಸಿದ ಕನಕದಾಸ ಮತ್ತು ಸಂಗೊಳ್ಳಿ ರಾಯಣ್ಣ ಪುತ್ಥಳಿ ಲೋಕರ್ಪಣೆ ಕರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.



ಭಗವಂತನಿಗೆ ದಾಸನಾದಾಗ ಮಹಾತ್ಮರಾಗಲು ಸಾಧ್ಯ. ಮನುಕುಲದ ಒಳಿತಿಗಾಗಿ, ಬ್ರಿಟಿಷರ ವಿರುದ್ಧ ಹೋರಾಡಿದ ವೀರ ಸಂಗೊಳ್ಳಿರಾಯಣ್ಣ. ಇವರ ತತ್ವಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಬದುಕಿದಾಗ ಜೀವನ ಸರ್ಥಕತೆಯನ್ನು ಪಡೆ–ಯುತ್ತದೆ. ದುರಾಭ್ಯಾಸ, ದುಶ್ಚಟಗಳಿಗೆ ಬಲಿಯಾಗದೆ ಎಲ್ಲರೊಡನೆ ಕೂಡಿ ಬಾಳಿದಾಗ–ಸುಖ ದೊರೆಯುತ್ತದೆ. ಮಕ್ಕಳಿಗೆ ಸಂಸ್ಕೃತಿ ಮತ್ತು ಉನ್ನತ ಶಿಕ್ಷಣ ಕೊಡಿಸಿ. ಮಕ್ಕಳ ಭವಿಷ್ಯಕ್ಕಾಗಿ ಕೂಡಿಟ್ಟ ಹಣವನ್ನು ವೆಚ್ಚಮಾಡಿ. ಆದರೆ ಪರಂಪರೆ ಹಾಗೂ ದೇವರ ಹೆಸರಲ್ಲಿ ದುಂದುವೆಚ್ಚಮಾಡಬೇಡಿ ಎಂದು ಕರೆ ನೀಡಿದರು.

ಗುರುಮಠಕಲ್ ಕ್ಷೇತ್ರದ ಶಾಸಕ ಶರಣಗೌಡ ಕಂದಕೂರ ಮಾತನಾಡಿ, ನಮ್ಮ ಭಾಗದ ಬಹುತೇಕ ಜನರು ಭಕ್ತಿ ಮತ್ತು ಬಡತನದ ಮಧ್ಯೆ ಸಿಲುಕಿಕೊಂಡಿದ್ದಾರೆ. ಶರಣ, ಸಂತ, ದಾಸರು ಹಾಕಿ ಕೊಟ್ಟ ಮರ್ಗರ್ತ್ಯನದಲ್ಲಿ ಯುವಪೀಳಿಗೆ ದಿನನಿತ್ಯ ಸಾಗಿದರೆ ಮರ್ತಿ ಪ್ರತಿಷ್ಠಾಪಿಸಿದ ಗುರಿ ಮತ್ತು ಉದ್ದೇಶ ಸರ್ಥಕತೆಯನ್ನು ಪಡೆಯುತ್ತದೆ. ಜೊತೆಗೆ ಶಿಕ್ಷಣದ ಕೊರತೆಯಿಂದ ನಮ್ಮ ಜನರು ಸಾಕಷ್ಟು ಸಮಸ್ಯೆಗಳು ಎದುರಿಸುವಂತಾಗಿದೆ. ಆದ್ದರಿಂದ ತಂದೆತಾಯಿ ನಿಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಮೂಲಕ ಇಂತಹ ದಾಸರ ಮತ್ತು ವೀರರ ತತ್ವಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಿ ಎಂದರು. ಹಿಂದುಳಿದ ರ್ಗಗಳ ಆಯೋಗದ ಮಾಜಿ ಸದಸ್ಯ ಶರಣಪ್ಪ ಮಾನೆಗಾರ ಮಾತನಾಡಿ ಮಾಹಪುರುಷರ ಮರ್ತಿ ಪ್ರತಿಷ್ಠಾಪನೆಯಿಂದ ಜನರಲ್ಲಿ ಅರಿವು ಮೂಡಿಸುವ ಸಂಕೇತವಾಗಿದೆ. ಹಿಂದುಳಿದ ಸಮಾಜದಲ್ಲಿರುವಂತಹ ಅನಿಷ್ಟಪದ್ಧತಿಗಳು, ಮೂಢನಂಬಿಕೆಗಳು, ಅಂಧ ಆಚರಣೆಗಳಿಗೆ ಒತ್ತು ಕೊಡದೆ, ಶಿಕ್ಷಣ ಮತ್ತು ಆರೋಗ್ಯ ಹೆಚ್ಚಿನ ಒತ್ತುನೀಡಿ ಎಂದರು. ಇದಕ್ಕೂ ಮೊದಲು ಗ್ರಾಮದ ಭೀರಪ್ಪ ಗುಡಿಯಿಂದ ಕನಕವೃತ್ತದವರೆಗೆ ಡೊಳ್ಳು ವಾದ್ಯಗಳೊಂದಿಗೆ ಮಹಿಳೆಯರು ಕಳಸ–ಕುಂಬದೊಂದಿಗೆ ಅತಿಥಿ ಗಣ್ಯರು, ಬಾಲಛೇಡ ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು, ಮೆರವಣಿಗೆ ಮೂಲಕ ಸಾಗಿ ವ ಪುತ್ಥಳಿಯನ್ನು ಲೋಕರ್ಪಣೆಗೊಳಿಸಿ ವೇದಿಕೆಗೆ ಆಗಮಿಸಿದರು. ಈ ಸಂರ್ಭದಲ್ಲಿ ತಿಂತಣಿ ಬ್ರಿಜ್ ಕನಕ ಗುರುಪೀಠ ಕಾಗಿನೆಲೆ ಮಠದ ಲಿಂಗಭೀರದೇವರು, ಕ್ಷೀರಲಿಂಗಶ್ವೇರ ಸ್ವಾಮಿಚೇಗುಂಟಾ, ಸೋಮೇಶ್ವರಾನಂದ ಸ್ವಾಮಿ, ಸಮಾಜದ ರಾಜ್ಯ ಯುವ ಘಟಕದ ಉಪಾಧ್ಯಕ್ಷ ನಿಖಿಲ್.ವಿ ಶಂಕರ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಜಿಲ್ಲಾಧ್ಯಕ್ಷ ಶರಣಿಕ ಕುಮಾರಾ ದೊಕಾ, ಕೆ. ವಿಶ್ವನಾಥ ನೀಲಹಳ್ಳಿ, ನಿರಂಜನರೆಡ್ಡಿ ಶೆಟ್ಟಿಹಳ್ಳಿ, ಚಂದ್ರುಗೌಡ ಸೈದಾಪುರ, ನರಸಪ್ಪ ಕವಡೆ, ಚಂದ್ರಶೇಖರ್ ವಾರಾದ, ಪ್ರಭುಲಿಂಗ ವಾರದ, ಸಣ್ಣಭೀಮಶಪ್ಪ ಜೇಗರ್, ಸಿದ್ದಣ್ಣಗೌಡ ಕಾಡಂಗೇರ್, ಜಿಲ್ಲಾಧ್ಯಕ್ಷ ಮಲ್ಲಣ್ಣ ಐಕೂರು, ವಲಯಾಧ್ಯಕ್ಷ ರವಿಂದ್ರಕುಮಾರ ಕಡೇಚೂರು, ಸಿದ್ದು ಪೂಜಾರಿ, ವಿಜಯ ಕಂದಳ್ಳಿ, ಬೀರಲಿಂಗಪ್ಪ ಕಿಲ್ಲನಕೇರಾ, ಪುಂಡಲಿಕ, ಚಂದ್ರಶೇಖರ್ ಹೊಸಳ್ಳೋರ್, ತಾಯಪ್ಪಗಡದೋರ್, ಸಾಬಣ್ಣಗೌಡ್ರ ಬಾಲಛೇಡ್ ಹಾಗೂ ಸುತ್ತಮುತ್ತಲಿನ ಗ್ರಾಮದ ರೈತರು, ಸಮಾಜದ ಸಮಸ್ತ ನಾಗರಿಕರು ಸೇರಿದಂತೆ ಇತರರಿದ್ದರು.

# ವಿದ್ಯುತ್ ವ್ಯತ್ಯಯ ಉಂಟಾಗಲಿದೆ

• **ಮಲ್ಲಮ್ಮ ನುಡಿ ವಾರ್ತೆ, ಯಾದಗಿರಿ.**

110ಕೆವಿ ವಿದ್ಯುತ್ ವಿತರಣಾ ಕೇಂದ್ರ ಖಾನಾಪೂರದಲ್ಲಿ 110ಕೆವಿ ಬಸ್ ನಿರ್ವಹಣೆ ಹಾಗೂ ಪವರ್ ಟ್ರಾನ್ಸಾರ್ಮರ್‌ಗಳ ತೈಲ ಸೋರಿಕೆಯನ್ನು ನಿರ್ವಹಣೆ ಕೈಗೊಳ್ಳುತ್ತಿರುವ ಹಿನ್ನೆಲೆ 2026ರ ಫೆಬ್ರವರಿ 5 ರಂದು ಬೆಳಿಗ್ಗೆ 11 ರಿಂದ 3 ಗಂಟೆಯ ವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಸುರಪುರ ಗುಲಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ ಕಾರ್ಯ ಮತ್ತು ಪಾಲನೆ ವಿಭಾಗ ಕಾರ್ಯನಿರ್ವಾಹಕ ಅಭಿಯಂತರರು (ವಿ) ಅವರು ತಿಳಿಸಿದ್ದಾರೆ. 110/33/11ಕೆವಿ ಮಾರ್ಗ ಖಾನಪೂರ, 110/33/11ಕೆವಿ ಮಾರ್ಗ ಶಿರವಾಳ, 110/33/11 ಕೆವಿ ಮಾರ್ಗ ವಡಗೇರಾ, ಇ.ಎಚ್.ಟಿ ಮೇ.ಮುದ್ನಾಳ ರೈಲ್ವೇ ಸ್ಟೇಷನ್, ಮೇ.ಕೊರ್ ಗ್ರೀನ್ ಸುಗರ್, ಮೆ.ಸುಗ್ನಾನೇಶ್ವರ ಹೈಡ್ರೊ, ಎಲ್ಲಾ ಐಪಿಪಿ ಹಾಗೂ ಮೀನಿ ಹೈಡ್ರೊ ಇಟಗಾ, ರೋಜಾ ಹುರಸಗುಂಡಗಿ, ಶಿರವಾಳ, ತಡಿಬಿಡಿ, ಕಾಡಮಗೇರಾ, ಹುಂಡೇಕಲ್, ಕ್ಯಾತನಾಳ, ಗುಂಡಗುರ್ತಿ, ಖಾನಾಪೂರ, ಸುತ್ತಮುತ್ತಲಿನ ತಾಂಡಾ, ದೊಡ್ಡಿ ಗ್ರಾಮಗಳ ಸಾರ್ವಜನಿಕರು ಹಾಗೂ ಗ್ರಾಹಕರು ಜೆಸ್ಕಾಂಗೆ ಸಹಕರಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇಶದ ಆರ್ಥಿಕತೆಯನ್ನು ಕೊಲ್ಲುವ ಬಜೆಟ್; ಡಿ.ಎಚ್ .ಪೂಜಾರ

**ಮಲ್ಲಮ್ಮ ನುಡಿ ವಾರ್ತೆ, ಸಿಂಧನೂರು;**

ಹಣಕಾಸು ಮಂತ್ರಿ ನಿರ್ಮಲಾ ಸೀತಾರಾಮನ್ ಮಂಡಿಸಿದ 2026–27 ನೇ ಸಾಲಿನ ಕೇಂದ್ರ ಬಜೆಟ್, ಜನ ವಿರೋಧಿ ಅಭಿವೃದ್ಧಿ ವಿರೋಧಿಯಾಗಿದೆ. ಸಚಿವರು ತಮ್ಮ ಭಾಷಣದಲ್ಲಿ, ದೇಶದ ಜನರಿಗೆ ಕರ್ತವ್ಯ ಮಾಡಿರಿ ಪ್ರತಿಫಲ ಕೇಳಬೇಡಿರೆಂದಿದ್ದಾರೆ. ಅಂ–ದರೆ ಜೀತಗಾರ, ಜೀತ ಮಾಡಬೇಷ್ಟೇ ಸಂಬಳ ಕೇಳಬಾರದು.?...

ಒಟ್ಟು 53.47 ಲಕ್ಷ ಕೋಟಿ ಬಜೆಟ್ ನಿಂದ ಸಾಮಾನ್ಯ ಜನರಿಗೆ ಯಾವುದೆ ಅನುಕೂಲವಿಲ್ಲ.

ಕಾರ್ಪೊರೇಟ್ ಕಂಪನಿಗಳಿಗೆ ಹೆಚ್ಚಿನ ತೆರಿಗೆ ವಿಧಿಸದೆ, ಸಣ್ಣ ಮಧ್ಯಮ ಹಾಗೂ ವೈಯಕ್ತಿಕ ಆದಾಯದಾರರ ಬದುಕಿಗೆ ಬರೆ ಎಳೆಯಲಾಗಿದೆ.



ವಿದೇಶಿ ಮತ್ತು ಸ್ವಾದೇಶಿ ಕಾರ್ಪೊರೇಟ್ ಕಂಪೆನಿಗಳಿಗೆ ಮಣೆ ಹಾಕಿ

ಆ ಮೂಲಕ ದೇಶದ ಆರ್ಥಿಕತೆಯನ್ನು ಕೊಲ್ಲಲಾಗುತ್ತಿದೆ. ಕೊರತೆ ಬಜೆಟ್ ಸರಿ ದೂಗಿಸಲು 16.95 ಲಕ್ಷ ಕೋಟಿ ಸಾಲ ಮಾಡಲಾಗಿದೆ. ಮತ್ತು 14.04 ಲಕ್ಷ ಕೋಟಿ ಬಡ್ಡಿ ಕಟ್ಟಲಾಗುತ್ತಿದೆ . ಒಟ್ಟಾರೆ ದೇಶದ ಜನರು ಬಡ್ಡಿ ಮತ್ತು ಚಕ್ರ ಬಡ್ಡಿಗೆ ಬಲಿಯಾಗಬೇಕಾಗಿದೆ.

ಕಾರ್ಪೊರೇಟ್ ಕಂಪನಿಗಳಿಗೆ, ರಸ್ತೆ, ಭೂಮಿ, ವಿದ್ಯುತ್, ಇತರೆ ಮೂಲಭೂತ ಸೌಕರ್ಯ (ಇದಕ್ಕೆ ಬಂಡವಾಳ ವೆಚ್ಚವೆಂದು ಹೆಸರಿಡಲಾಗಿದೆ) ಒದಗಿಸಲು 12.22 ಲಕ್ಷ ಕೋಟಿ ಖರ್ಚು ಮಾಡಲಾಗುತ್ತಿದೆ.

ಕಾರ್ಪೊರೇಟ್ ಕಂಪನಿಗಳ ಅನುಕೂಲಕ್ಕಾಗಿ ಇಷ್ಟು ದೊಡ್ಡ ಮೊತ್ತದ ಹಣ ಖರ್ಚು ಮಾಡುತ್ತಿರುವುದು ಅತ್ಯಂತ ಖಂಡನೀಯ.

ಇದಲ್ಲದೆ ಸಾಮಾನ್ಯ ಜನರಿಗೆ ಸ್ವಲ್ಪವಾದರು ಅನುಕೂಲವಾಗುತ್ತಿದ್ದ ಕ್ಷೇತ್ರಗಳಿಗೆ ಅತ್ಯಂತ ಕಡಿಮೆ ಹಣ ಕೊಡಲಾಗಿದೆ.

ಶಿಕ್ಷಣಕ್ಕೆ 1.39 ಲಕ್ಷ ಕೋಟಿ, ಕೃಷಿಗೆ 1.63 ಲಕ್ಷ ಕೋಟಿ ಆರೋಗ್ಯ ಕ್ಷೇತ್ರಕ್ಕೆ 1.65 ಲಕ್ಷ ಕೋಟಿ,ಉದ್ಯೋಗ ಖಾತ್ರಿ ಯೋಜನೆಗೆ 95 ಸಾವಿರ ಕೋಟಿ. ಈ ಹಂತದಲ್ಲಿ

30 ಸಾವಿರ ಕೋಟಿ ಕಳೆದ ವರ್ಷದ ಬಾಕಿಗೆ ಹೋಗುತ್ತದೆ. ಬಜೆಟ್ ಅಂಕಿ ಅಂಶಗಳ ಪ್ರಕಾರ ಕೇಂದ್ರ ಸರ್ಕಾರ, ಸಾಮಾನ್ಯ ಜನರ ವಿರೋಧಿಯನ್ನುವುದು ಸಾಬೀತು ಪಡಿಸಿಕೊಂಡಿದೆ.ಒಟ್ಟಾರೆ ಈ ಬಜೆಟ್ ಜನ ವಿರೋಧಿ ಅಭಿವೃದ್ಧಿ ವಿರೋಧಿ ಬಜೆಟಾಗಿದೆ.

ದೇಶದ ಸಾಲ 214 ಲಕ್ಷ ಕೋಟಿಗೆ ಏರಿಕೆಯಾದರೂ, ಭಾರತ ಜಗತ್ತಿನಲ್ಲಿ 4 ನೇ ಆರ್ಥಿಕ ಬಲಿಷ್ಠ ದೇಶವಾಗಲಿದೆ ಎಂದು ಗಂಟೆ ಬಾರಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ರೈತರು, ಕಾರ್ಮಿಕರು, ಸಣ್ಣ ಮಧ್ಯಮ ವ್ಯಾಪಾರಿಗಳು ಸೇರಿದಂತೆ ಬಹುಸಂಖ್ಯಾತ ಜನರು, ಈ ಬಜೆಟ್ ನ್ನು ವಿರೋಧಿಸಿ ಹೋರಾಡಬೇಕೆಂದ ಸಿ.ಪಿ.ಐ. (ಎಂ.ಎಲ್) ಮಾಸ್ ಲೈನ್ ರಾಜ್ಯ ಕಾರ್ಯದರ್ಶಿ. ಡಿ.ಹೆಚ್. ಪೂಜಾರ ಅವರು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದರು ಈ ಸಂದರ್ಭದಲ್ಲಿ . ಸಿ.ಪಿ.ಐ ,(ಎಂ ಎಲ್ ) ಜಿಲ್ಲಾ ಕಾರ್ಯದರ್ಶಿ ಬಿ ಎನ್ ಯರದಿಹಾಳ ಇದ್ದರು

# ರವಿ ಎಂಟಿ ಪಲ್ಲಿ ಕಾ. ನಿ. ಪ. ಧ್ವನಿ ತಾಲೂಕ ಅಧ್ಯಕ್ಷ

• **ಮಲ್ಲಮ್ಮ ನುಡಿ ವಾರ್ತೆ ,ಗುರುಮಠಕಲ್:**

ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಬಂಗ್ಲೆ ಮಲ್ಲಿಕಾರ್ಜುನ ಸ್ಥಾಪಿತ

ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘ(ರಿ.) ತಾಲೂಕ ಘಟಕದ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಫೆ. 5 ರಂದು ಅದ್ದೂರಿಯಾಗಿ ನಡೆಯಲಿದೆ ಎಂದು ಸಂಘ ತಾಲ್ಲೂಕು ಅಧ್ಯಕ್ಷ ರವಿ ಬುರನೋಳ ತಿಳಿಸಿದ್ದಾರೆ.

ಪಟ್ಟಣದಲ್ಲಿ ಸುದ್ದಿಗಾರ ರೊಂದಿಗೆ ಅವರು ಮಾತನಾಡಿ, ಪಟ್ಟಣದ ಜೆಪಿ ಫಂಕ್ಷನ್ ಹಾಲ್ (ಪನ್ನಲಾಲ್)ನಲ್ಲಿ ಫೆ. 5 ರಂದು ಬೆಳಿಗ್ಗೆ 11 ಗಂಟೆಗೆ ನಡೆಯಲಿರುವ ನೂತನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮದಲ್ಲಿ

ಪೂಜ್ಯ ಶ್ರೀ ಶಾಂತವೀರ ಗುರು ಮುರುಘರಾಜೇಂದ್ರ ಸ್ವಾಮಿಗಳು ಸಾನಿಧ್ಯ ವಹಿಸಲಿದ್ದಾರೆ. ಕ್ಷೇತ್ರದ ಶಾಸಕ



ಶರಣಗೌಡ ಕಂದಕೂರ ಕಾರ್ಯಕ್ರಮ ಕ್ಕೆ ಚಾಲನೆ ನೀಡಲಿದ್ದಾರೆ ಎಂದರು. ಪದಗ್ರಹಣ ಸಮಾರಂಭ ದಲ್ಲಿ

ಬಸವರಾಜ ಬೂದಿ, ಹಿರಿಯ ಪತ್ರಕರ್ತರು ಹಾಗು ಡಾ.ವಿ.ಸಿ.ಮೈತ್ರಿ, ನಿವೃತ್ತ ವೈದ್ಯಧಿಕಾರಿ ಗಳನ್ನು ವಿಶೇಷ ವಾಗಿ ಸನ್ಮಾನಿಸಲಾಗುವುದು.

ಇದೇ ವೇಳೆ ಸಂಘದ ಸ್ಥಾಪಕ ರಾಜ್ಯಾಧ್ಯಕ್ಷರಾದ

ಬಂಗ್ಲೆ ಮಲ್ಲಿಕಾರ್ಜುನ ಕೆಡಬ್ಲೂಜೆವಿ ಯಾದಗಿರಿ ಜಿಲ್ಲಾಧ್ಯಕ್ಷ ರಮೇಶ ಸೌಕಾರ, ತಹಶೀಲ್ದಾರರಾದ ಚನ್ನಮಲ್ಲಪ್ಪ ಘಂಟಿ, ತಾಲ್ಲೂಕು ಪಂಚಾಯಿತಿ ಇಓ ಅಂಬರೇಶ ಪಾಟೀಲ, ಪುರಸಭೆ ಮುಖ್ಯಾಧಿಕಾರಿ ಶರಣಪ್ಪ ಮಡಿವಾಳ, ಪಿಐ ವೀರಣ್ಣ ದೊಡ್ಮನಿ, ಸಿಡಿಪಿಓ ಶರಣಬಸಪ್ಪ, ಬಿಜೆಪಿ ಮಂಡಲಾಧ್ಯಕ್ಷರಾದ ನರಸಿಂಹಲು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೃಷ್ಣ ಕೆ.ಚಪೆಟ್ಲಾ, ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಪ್ರಕಾಶ ನಿರೇಟಿ, ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದು ಅವರು ತಿಳಿಸಿದರು.

# ಮಾನವ ಅಭಿವೃದ್ಧಿಯೇ ನಿಜವಾದ ಅಭಿವೃದ್ಧಿ: ಸಿಇಓ ಡಾ.ದಿಲೀಷ್ ಶಶಿ.

• **ಮಲ್ಲಮ್ಮ ನುಡಿ ವಾರ್ತೆ, ಕಾರವಾರ:**



ಅಭಿವೃದ್ಧಿ ಎಂದರೆ ಮೂಲಭೂತ ಸೌಕರ್ಯಗಳು ಮತ್ತು ತಂತ್ರಜ್ಞಾನವನ್ನು ಅಭಿವೃದ್ಧಿ ಪಡಿಸುವುದಲ್ಲ, ಅಸಮಾನತೆಯನ್ನು ತೊಡೆದ, ಮಾನವನ ಸಮಗ್ರ ಅಭಿವೃದ್ಧಿಯೇ ನಿಜವಾದ ಅಭಿವೃದ್ಧಿಯಾಗಿದ್ದು, ಜಿಲ್ಲಾ ಮಾನವ ಅಭಿವೃದ್ಧಿ ವರದಿ ತಯಾರಿಕೆಯಲ್ಲಿ ಜಿಲ್ಲೆಯ ಸಾರ್ವಜನಿಕರ ಸಮಗ್ರ ಅಭಿವೃದ್ಧಿಯನ್ನು ಗಮನದಲ್ಲಿಟುಕೊಂಡು ವರದಿಯನ್ನು ತಯಾರಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ ಹೇಳಿದರು.

ಅವರು ಸೋಮವಾರ ಕ್ರಿಮ್ಸ್ ಸಭಾಂಗಣದಲ್ಲಿ, ಜಿಲ್ಲಾ ಆಡಳಿತ ಮತ್ತು ಜಿಲ್ಲಾ ಪಂಚಾಯತ ಉತ್ತರ ಕನ್ನಡ ವತಿಯಿಂದ, ಜಿಲ್ಲಾ ಮಾನವ ಅಭಿವೃದ್ಧಿ ವರದಿ 2025 ಹಾಗೂ ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ದೂರದೃಷ್ಟಿ ಯೋಜನೆ 2031 ವರದಿ ತಯಾರಿಕೆಗೆ ಸಂಬಂಧಿಸಿದ ಜಿಲ್ಲಾಮಟ್ಟದ ತರಬೇತಿ ಕಾರ್ಯಾಕ್ರಮ ಉದ್ಘಾಟಿಸಿ ಮಾತನಾಡಿದರು.ಮಾನವ ಅಭಿವೃದ್ಧಿ ವರದಿಯು ಇಡೀ ಜಿಲ್ಲೆಯ ಸಾರ್ವಜನಿಕರ ಅಭಿವೃದ್ಧಿಯ ಕುರಿತಂತೆ ನಿಖರವಾದ ಅಂಕಿ ಅಂಶಗಳು ಮತ್ತು ಅವರ ಈಗಿನ ಜೀವನ ಸ್ಥಿತಿ ಮತ್ತು ಅದನ್ನು ಮತ್ತಷ್ಟು ಅಭಿವೃದ್ಧಿಗೊಳಿಸುವ ಉದ್ದೇಶವನ್ನು ಹೊಂದಿದ್ದು, ಹೊಸ ಯೋಜನೆಗಳ ಅನುಷ್ಠಾನ ಮಾಡಲು ಅನುಕೂಲವಾಗಲಿದ್ದು, ಈ ವರದಿ ತಯಾರಿಕೆಯಲ್ಲಿ ಎಲ್ಲಾ ಅಧಿಕಾರಿಗಳು ಅತ್ಯಂತ ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸುವ ಮೂಲಕ ಜಿಲ್ಲೆಯ ಮಾನವ ಅಭಿವೃದ್ಧಿಯಲ್ಲಿ ಯಾವುದೇ ಅಸಮಾನತೆ ಉಂಟಾಗದಂತೆ ಸುಸ್ಥಿರ ಅಭಿವೃದ್ಧಿಯನ್ನು ಒಳಗೊಂಡ ವರದಿಯನ್ನು ತಯಾರಿಸಬೇಕು ಎಂದರು.

ಜಿಲ್ಲೆಯು 2031 ರಲ್ಲಿ ಸುಸ್ಥಿರ ಅಭಿವೃದ್ಧಿ ಹೊಂದುವ ಕುರಿತಂತೆ ತಮ್ಮ ಇಲಾಖಾ ವ್ಯಾಪ್ತಿಯಲ್ಲಿ ಕೈಗೊಳ್ಳಬೇಕಾದ ಯೋಜನೆಗಳ ಕುರಿತ ಮಾಹಿತಿಯನ್ನು ಒಳಗೊಂಡ ಸಮಗ್ರ ವರದಿ ತಯಾರಿಸುವಂತೆ ತಿಳಿಸಿದ ಅವರು, ಈ ವರದಿ ತಯಾರಿಕೆಯಲ್ಲಿ ಜಿಲ್ಲೆಯ ಎಲ್ಲಾ ಇಲಾಖೆಗಳು ಪರಸ್ಪರ ಸಮನ್ವಯದಿಂದ ಮಾಹಿತಿಗಳನ್ನು ವಿನಿಮಯ ಮಾಡಿಕೊಂಡು, ಒಟ್ಟಾಗಿ ತಂಡದ ರೀತಿಯಲ್ಲಿ ಕಾರ್ಯನಿರ್ವಹಿಸಿ, ಮುಂದಿನ ಪೀಳಿಗೆಗೆ ಅನುಕೂಲವಾಗುವಂತಹ ಅಭಿವೃದ್ಧಿಯ ವರದಿಯನ್ನು ಸಿದ್ದಪಡಿಸುವಂತೆ ತಿಳಿಸಿದರು.

ಸಾಂಖ್ಯಿಕ ಇಲಾಖೆಯ ಪದನಿಮಿತ್ತ ಜಂಟಿ ಕಾರ್ಯದರ್ಶಿ ಹಾಗೂ ಹಿರಿಯ ನಿರ್ದೇಶಕ ಎಸ್.ಬಸವರಾಜ್ ಮಾತನಾಡಿ, ದೇಶ ಅಥವಾ ರಾಜ್ಯದ ಅಭಿವೃದ್ಧಿಯನ್ನು ಜನತೆಯ ತಲಾ ಆದಾಯ, ಮೂಲಭೂತ ಸೌಕರ್ಯಗಳ ಅಭಿವೃದ್ಧಿಯಿಂದ ಪರಿಗಣಿಸದೇ ಇವುಗಳ ಜೊತೆಗೆ ಅಲ್ಲಿನ ಜನರ ಶಿಕ್ಷಣ, ಆರೋಗ್ಯ ಮತ್ತು ಜೀವನ ಮಟ್ಟವನ್ನು ಆಧರಿಸಿ ಪರಿಗಣಿಸಲಾಗುತ್ತಿದೆ. ರಾಜ್ಯದಲ್ಲಿ 2014–15 ರಲ್ಲಿ ಮಾನವ ಅಭಿವೃದ್ಧಿ ವರದಿಯನ್ನು ತಯಾರಿಸಿದ್ದು ಈಗ 10 ವರ್ಷಗಳ ನಂತರ ವರದಿ ತಯಾರಿಕೆ ಮಾಡಲಾಗುತ್ತಿದೆ. ಕಳೆದ 10 ವರ್ಷಗಳಲ್ಲಿ ಸರ್ಕಾರಗಳು ಜಾರಿಗೆ ತಂದ ಹಲವು ಯೋಜನಗಳು ಕಾರ್ಯಕ್ರಮಗಳ ಮೂಲಕ ಸಾರ್ವಜನಿಕರ ಜೀವನಮಟ್ಟದಲ್ಲಿ ಆಗಿರುವ ಬದಲಾವಣೆ ಮತ್ತು ಸುಧಾರಣೆಗಳ ಬಗ್ಗೆ ಪರಿಶೀಲಿಸಿ ಇದನ್ನು ಮತ್ತಷ್ಟು ಸುಧಾರಿಸಲು ಕೈಗೊಳ್ಳಬೇಕಾದ ಕ್ರಮಗಳು, ಕೃಷಿ, ಉದ್ಯೋಗ, ಶಿಕ್ಷಣ, ಆರೋಗ್ಯ ಮುಂತಾದ ಕ್ಷೇತ್ರಗಳಲ್ಲಿ ಜಾರಿಗೆ ತರಬಹುದಾದ ಯೋಜನೆಗಳ ಬಗ್ಗೆ ಈ ವರದಿಯು ದಾರದೀಪವಾಗಲಿದ್ದು, ಪ್ರಸ್ತುತ ಇರುವ ಹಲವು ಸಮಸ್ಯೆಗಳಿಗೆ ಸೂಕ್ತ ಪರಿಹಾರ ಕಂಡುಕೊಳ್ಳಲು ಕೂಡಾ ಸಾಧ್ಯವಾಗಲಿದ್ದು, ಈ ವರದಿ ತಯಾರಿಕೆ ಕಾರ್ಯದಲ್ಲಿ ಪ್ರತಿಯೊಂದು ಇಲಾಖೆಗಳ ಪಾತ್ರವು ಅತ್ಯಂತ ಮಹತ್ವದ್ದಾಗಿದೆ ಎಂದರು.

ಕ್ರಿಮ್ಸ್ ನ ಡೀನ್ ಡಾ.ಪೂರ್ಣಿಮಾ, ಜಿ.ಪಂ. ಉಪ ಕಾರ್ಯದರ್ಶಿ ಅಲ್ಲಾ ಭಕ್ಷ್, ಯೋಜನಾ ನಿರ್ದೇಶಕ ಕರೀಂ ಅಸಾದಿ, ಮುಖ್ಯ ಯೋಜನಾಧಿಕಾರಿ ಸೋಮಶೇಖರ್ ಮೇಸ್ತಾ, ಸಂಪನ್ಮೂಲ ವ್ಯಕ್ತಿಗಳಾದ ಸಿ.ಎಂ.ಡಿ.ಆರ್ ಧಾರವಾಡದ, ಅರ್ಥಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಎಸ್.ವಿ. ಹನಗೋಡಿ ಮಠ್ ಮತ್ತು ಡಾ.ನಾರಾಯಣ ಬಿಲ್ಲವ ಇದ್ದರು.

ಜಿಲ್ಲೆಯ ವಿವಿಧ ಇಲಾಖೆಗಳ ಜಿಲ್ಲಾ ಮತ್ತು ತಾಲೂಕುಮಟ್ಟದ ಅಧಿಕಾರಿಗಳು ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಬಾಲಕಾರ್ಮಿಕ ಹಾಗೂ ಬಾಲ್ಯವಿವಾಹ ಮುಕ್ತ ಭಾರತ ನಿರ್ಮಾಣವಾಗಲು ಕೈಜೋಡಿಸಲು ಕರೆ.

**ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.**

ಬಾಲಕಾರ್ಮಿಕ ಹಾಗೂ ಬಾಲ್ಯವಿವಾಹ ಮುಕ್ತ ಭಾರತ ನಿರ್ಮಾಣವಾಗಲು ಸಮುದಾಯದ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರು ಗೌರವಾನ್ವಿತ ಶ್ರೀ ಮರಿಯಪ್ಪ ಅವರು ಹೇಳಿದರು. ಯಾದಗಿರಿ ಜಿಲ್ಲೆಯ ಖಾನಹಳ್ಳಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಇಂದು ಮಂಗಳವಾರ ರಂದು ಜಿಲ್ಲಾ ಕಾನೂನು ಸೇವೆಗಳ ಪಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನೆ ಹಾಗೂ ವಿವಿಧ ಇಲಾಖೆ ಮತ್ತು ಸ್ಥಳಿಯ ಸಂಘ–ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ 2025–26ನೇ ಸಾಲಿನ ಪರಿಶಿಷ್ಟ ಜಾತಿ ಉಪಯೋಜನೆ (ಎಸ್.ಸಿ.ಎಸ್.ಪಿ) ಹಾಗೂ ಗಿರಿಜನ ಉಪಯೋಜನೆ (ಟಿ.ಎಸ್.ಪಿ)ಯಡಿ "ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986, ತಿದ್ದುಪಡಿ ಕಾಯ್ದೆ 2016ರ" ಕುರಿತು ಆಯೋಜಿಸಿದ ಕಾನೂನು ಅರಿವು–ನೆರವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಬಾಲ್ಯಾವಸ್ಥೆ



ಹಾಗೂ ಕಿಶೋರಾವಸ್ಥೆ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986, ತಿದ್ದುಪಡಿ ಕಾಯ್ದೆ 2016ರ"*ಕುರಿತು ಬಾಲಕಾರ್ಮಿಕ ಹಾಗೂ ಬಾಲ್ಯವಿವಾಹ ಮುಕ್ತ ಭಾರತ ನಿರ್ಮಾಣವಾಗಲು ಸಮುದಾಯದ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದರು.ಕಾರ್ಮಿಕ ಅಧಿಕಾರಿಗಳಾದ ಶ್ರೀಹರಿ ದೇಶಪಾಂಡೆ ಅವರು ಮಾತನಾಡಿ, ಭಾರತದ ಸಂವಿಧಾನದ 21 ಎ ವಿಧಿಯು 6 ರಿಂದ 14 ವರ್ಷದ ಮಕ್ಕಳಿಗೆ ಉಚಿತ ಹಾಗೂ ಕಡ್ಡಾಯ ಶಿಕ್ಷಣದ ಹಕ್ಕನ್ನು ನೀಡಿದೆ ಪ್ರತಿಯೊಬ್ಬ ವಿದ್ಯಾರ್ಥಿಯು ಈ ಹಕ್ಕನ್ನು ಬಳಸಿಕೊಳ್ಳಬೇಕೆಂದು ತಿಳಿಸಿದರು. ಜಿಲ್ಲಾ ಬಾಲಕಾರ್ಮಿಕ ಯೋಜನಾ ನಿರ್ದೇಶಕರಾದ ರಿಯಾಜ್ ಪಟೇಲ್ ವರ್ಕನಳ್ಳಿ ಅವರು ಮಾತನಾಡಿ, ಓದುವ ಮಕ್ಕಳನ್ನು ಶಾಲೆ ಬಿಡಿಸಿ ಕೆಲಸಕ್ಕೆ ಕಳುಹಿಸುವುದು ಮತ್ತು ಅಂತಹ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳುವುದು ಕಾನೂನು ಬಾಹಿರ ಕ್ರಮವಾಗಿದ್ದು, ಇದನ್ನು ಮೀರಿಯೂ ಸಹ ಮಕ್ಕಳನ್ನು ಕೆಲಸಕ್ಕೆ ಸೇರಿಸಿಕೊಂಡ ಮಾಲೀಕರ ವಿರುದ್ಧ 20,000 ರಿಂದ 50,000 ರೂ.ಗಳ ವರೆಗೆ ದಂಡ ವಿಧಿಸಲಾಗುವುದು. 6 ತಿಂಗಳಿಂದ 2 ವರ್ಷದ ವರೆಗೆ ಜೈಲು ಶಿಕ್ಷೆಗಳನ್ನು ಸಹ ವಿಧಿಸಲಾಗುವುದೆಂದು ಹಾಗೂ ಶಾಲೆಗೆ ಹೋಗುವ ಮಕ್ಕಳನ್ನು ಶಾಲೆ ಬಿಡಿಸಿ ಆಟೋ, ಟಂಟಂಗಳಲ್ಲಿ ಕೃಷಿ, ಇನ್ನಿತರ ಕೃಷಿ ಚಟುವಟಿಕೆ ಕೆಲಸಕ್ಕೆ ಕರೆದುಕೊಂಡು ಹೋಗುವುದು ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿ 1098ಕ್ಕೆ ಫೋನ್ ಮಾಡಿ ತಿಳಿಸಿದರೆ ಅಂತಹ ಮಕ್ಕಳನ್ನು ರಕ್ಷಿಸಿ, ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು ಎಂದರು. ಬಾಲ, ಕಿಶೋರ ಕಾರ್ಮಿಕ ಪದ್ಧತಿ ನಿಷೇಧದ ಕುರಿತು ಆಯೋಜಿಸಿದ್ದ ಚಿತ್ರಕಲೆ, ಪ್ರಭಂಧ, ಭಾಷಣ ಸ್ಪರ್ಧೆಯಲ್ಲಿ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆದ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಬಹುಮಾನಗಳನ್ನು ಸಹ ಈ ಸಂಧರ್ಭದಲ್ಲಿ ವಿತರಿಸಲಾಯಿತು. ಈ ಸಂದರ್ಭದಲ್ಲಿ ಕಾರ್ಮಿಕ ನಿರೀಕ್ಷಕರಾದ ಸಂಗೀತಾ ಹೊನ್ನೂರು, ಪ್ಯಾನಲ್ ವಕೀಲರಾದ ಭೀಮಶಂಕರ ಆಶನಾಳ, ಡಾನ್ ಬೋಸ್ಕೋ ಸಮಾಜ ಸೇವಾ ಕೇಂದ್ರದ ನಿರ್ದೇಶಕರಾದ ಫ್ರಾನ್ಸಿಸ್ ಶಾಬು, ಜಿಲ್ಲಾ ಮಕ್ಕಳ ರಕ್ಷಣ ಘಟಕದ ರಾಜೇಂದ್ರ ಕುಮಾರ್, ದೇವಪ್ಪ ಗಿರಿಗಿರಿ, ಶಾಲೆಯ ಎಸ್.ಡಿ.ಎಮ್.ಸಿ ಅಧ್ಯಕ್ಷರಾದ ಹಣಮಂತ, ಶಾಲಾ ಶಿಕ್ಷಕರಾದ ರೀಟಾ, ಜೈಸುಧಾ, ಚಂದ್ರಭಾಗ, ಅಮೀನ್ ಪಾಷಾ, ಗ್ರಾಮಸ್ಥರಾದ ಹಣಮಂತ ಹೊಸಮನಿ, ಕಾರ್ಮಿಕ ಇಲಾಖೆಯ ದೀಪಕ್ ಸಿಂಗ್, ಬಾಲು ನಾಯಕ ಉಪಸ್ಥಿತರಿದ್ದರು.

# ಕ್ರೀಡಾಪಟುಗಳಿಗೆ ಪ್ರೋತ್ಸಾಹಧನ : ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

- **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಪ್ರಸಕ್ತ ಸಾಲಿಗೆ ಪರಿಶಿಷ್ಟಜಾತಿ ಹಾಗೂ ಪರಿಶಿಷ್ಟಪಂಗಡ ಉಪಯೋಜನೆಯಡಿ 2024ನೇ ಕ್ಯಾಲೆಂಡರ ವರ್ಷದಲ್ಲಿ ಅಂತರರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಅಧಿಕೃತ ಕ್ರೀಡಾಪಟುಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನ ನೀಡಲು ಅರ್ಜಿ ಸಲ್ಲಿಸುವ ಅವಧಿಯನ್ನು ಫೆಬ್ರವರಿ 10 ವರೆಗೆ ವಿಸ್ತರಿಸಲಾಗಿದೆ ಎಂದು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

6ನೇ ತರಗತಿ ಪ್ರವೇಶ ಪರೀಕ್ಷೆಗೆ ಅರ್ಜಿ

ಬಾಗಲಕೋಟೆ : ಫೆಬ್ರವರಿ 03 (ಕರ್ನಾಟಕ ವಾರ್ತೆ) : ಬೀಳಗಿ ಸರಕಾರಿ ಆದರ್ಶ ವಿದ್ಯಾಲಯವು 2026–27ನೇ ಶೈಕ್ಷಣಿಕ ವರ್ಷಕ್ಕೆ 6ನೇ ತರಗತಿ ಪ್ರವೇಶ ಪಡೆಯಲು ಸಾಮಾನ್ಯ ಪ್ರವೇಶ ಪ್ರವೇಶಕ್ಕಾಗಿ ಅರ್ಹ ವಿದ್ಯಾರ್ಥಿಗಳಿಂದ ಫೆಬ್ರವರಿ 25 ರಂದು ಸಂಜೆ 5 ಗಂಟೆಯೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಮಾರ್ಚ 15 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1 ಗಂಟೆವರೆಗೆ ಪ್ರವೇಶ ಪರೀಕ್ಷೆ ನಡೆಸಲಾಗುವುದು ಎಂದು ಆದರ್ಶ ವಿದ್ಯಾಲಯದ ಮುಖ್ಯೋಪಾದ್ಯಾಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 6ನೇ ತರಗತಿ ಪ್ರವೇಶ: ಅವಧಿ ವಿಸ್ತರಣೆ

- **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಸಮಾಜ ಕಲ್ಯಾಣ ವ್ಯಾಪ್ತಿಯಲ್ಲಿ ಬರುವ ಮೊರಾರ್ಜಿ ದೇಸಾಯಿ, ಕಿತ್ತೂರ ರಾಣಿ ಚೆನ್ನಮ್ಮ, ಅಟಲ್ ಬಿಹಾರಿ ವಾಜಪೇಯಿ, ಡಾ.ಬಿ.ಆರ್. ಅಂಬೇಡ್ಕರ, ಶ್ರೀಮತಿ ಇಂದಿರಾ ಗಾಂಧಿ ವಸತಿ ಶಾಲೆಗಳಿಗೆ 2026–27ನೇ ಸಾಲಿಗೆ 6ನೇ ತರಗತಿಗೆ ಆಂಗ್ಲ ಮಾಧ್ಯಮದಲ್ಲಿ ವ್ಯಾಸಂಗ ಮಾಡಲು ಪ್ರತಿಭಾನ್ವಿತ ಹಿಂದುಳಿದ, ಪ.ಜಾತಿ, ಪ.ಪಂಗಡ, ವಿಶೇಷ ವರ್ಗದ ಬಡ ವಿದ್ಯಾರ್ಥಿಗಳಿಂದ ಪ್ರವೇಶ ಪರೀಕ್ಷೆಗೆ ಆನ್‌ಲೈನ್ ಮುಖಾಂತರ ಹತ್ತಿರದ ವಸತಿ ಶಾಲೆಗಳ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ಫೆಬ್ರವರಿ 7 ರಂದು ಸಂಜೆ 5 ಗಂಟೆವರೆಗೆ ವಿಸ್ತರಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಮೇಶ ಚವ್ಹಾಣ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ಕಮಲನಗರ:ಮಲ್ಲಮ್ಮ ನುಡಿ ದಿನ ಪತ್ರಿಕೆ ಹೊರ ತಂದ ವಿಶಿಷ್ಟ ಕ್ಯಾಲೆಂಡರರನ್ನು ಕಮಲನಗರ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ದೀಲಿಪ್ ಸಂತಪುರೆ ಸರ್ ಅವರಿಗೆ ಕ್ಯಾಲೆಂಡರ್ ನೀಡಿ ಹೊಸ ವರ್ಷ 2026ರ ಶುಭ ಕೋರಲಾಯಿತು. ಈ ಸಂದರ್ಭದಲ್ಲಿ ಕಮಲನಗರ ತಾಲೂಕ ವರದಿಗಾರ ಪರಮೇಶ ರಾಂಪುರೆ ಅವರು ಇದ್ದರು.**

# ಫೆ.10ರವರೆಗೆ ಅವಧಿ ವಿಸ್ತರಣೆ

- **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಅಂತಾರಾಷ್ಟ್ರೀಯ, ರಾಷ್ಟ್ರ ಮತ್ತು ರಾಜ್ಯ ಮಟ್ಟದ ತಂಡಗಳನ್ನು ಪ್ರತಿನಿಧಿಸಿ ಸರ್ಕಾರದಿಂದ ಅಂಗೀಕೃತವಾದಂತಹ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕ ವಿಜೇತರಾದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಕ್ರೀಡಾಪಟುಗಳಿಗೆ ಪ್ರೋತ್ಸಾಹ ಧನ ಸಹಾಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯ ಅವಧಿಯನ್ನು ಫೆ.10ರವರೆಗೆ ವಿಸ್ತರಣೆ ಮಾಡಲಾಗಿದೆ.

2024ನೇ ಕ್ಯಾಲೆಂಡರ್ ವರ್ಷದಲ್ಲಿ ದಿನಾಂಕ 01–01–2024 ರಿಂದ 31–12–2024ರವರೆಗೆ ಅಂತಾರಾಷ್ಟ್ರೀಯ, ರಾಷ್ಟ್ರ, ರಾಜ್ಯ ಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತ ಕ್ರೀಡಾಪಟುಗಳಿಗೆ ಪ್ರೋತ್ಸಾಹ ಧನ ಸಹಾಯ ನೀಡುವ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಅಂತಾರಾಷ್ಟ್ರೀಯ ರಾಷ್ಟ್ರ, ರಾಜ್ಯ ಮಟ್ಟದ ತಂಡಗಳನ್ನು ಪ್ರತಿನಿಧಿಸಿ ಸರ್ಕಾರದಿಂದ ಅಂಗೀಕೃತವಾದಂತಹ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕ ವಿಜೇತರಾದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಕ್ರೀಡಾಪಟುಗಳಿಗೆ ಪ್ರೋತ್ಸಾಹ ಧನಕ್ಕೆ ಅರ್ಹ ಕ್ರೀಡಾಪಟುಗಳು ಅರ್ಜಿಗಳನ್ನು ಅಧಿಕೃತ ಜಾಲತಾಣ ವಿಳಾಸ:https://sevasindhu.karnataka.gov.inನಲ್ಲಿ ಫೆ.10ರೊಳಗಾಗಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ವಿವರಗಳಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ ರಾಯಚೂರು ಇವರನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೋಂದಣಿ ಅವಧಿ ವಿಸ್ತರಣೆ

- **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಜಿಲ್ಲೆಯಲ್ಲಿ 2025–26 ನೇ ಸಾಲಿಗೆ ಮುಂಗಾರು ಹಂಗಾಮಿಗೆ ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ಮೆಕ್ಕೆಜೋಳ ಉತ್ಪನ್ನಕ್ಕೆ ರೈತರಿಗೆ ಬೆಲೆ ವ್ಯತ್ಯಾಸದ ಮೊತ್ತವನ್ನು ಪಾವತಿಸಲು ಉದ್ದೇಶಿಸಲಾಗಿದ್ದು, ಈಗಾಗಲೇ ನೋಂದಣಿಗೆ ಅವಕಾಶ ಕಲ್ಪಿಸಲಾಗಿತ್ತು.

ರಾಜ್ಯ ಸರ್ಕಾರವು ರೈತರು ನೋಂದಣಿ ಮಾಡಿಕೊಳ್ಳುವ ಅವಧಿಯನ್ನು ಫೆ.13 ರ ವರೆಗೆ ಹಾಗೂ ಏಕೀಕೃತ ಮಾರುಕಟ್ಟೆ ವ್ಯವಸ್ಥೆ ವೇದಿಕೆ ಮೂಲಕ ಕೃಷಿ ಉತ್ಪನ್ನ ಮಾರುಕಟ್ಟೆ ಮೂಲಕ ಮಾರಾಟ ಮಾಡಿಕೊಳ್ಳಲು ಫೆ.21 ಕೊನೆಯ ದಿನ ಎಂದು ಅವಧಿ ವಿಸ್ತರಿಸಿದೆ.

ರೈತರು ನಿಗಧಿತ ಅವಧಿಯಲ್ಲಿ ನೋಂದಣಿ ಮತ್ತು ಮಾರಾಟ ಪ್ರಕ್ರಿಯೆ ಪೂರ್ಣಗೊಳಿಸಬೇಕು ಎಂದು ಕೃಷಿ ಮಾರಾಟ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ನೀಡಿ: ಪಟ್ಟದ್ದೇವರು



- **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:**

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ಕಲ್ಪಿಸಿ ದೇಶದ ಉತ್ತಮ ನಾಗರಿಕರನ್ನಾಗಿಸುವ ಹೊಣೆಗಾರಿಕೆ ನಮ್ಮೆಲ್ಲರ ಮೇಲಿದೆ ಎಂದು ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ನ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದ ಅನುಭವ ಮಂಟಪದಲ್ಲಿ ಮಂಗಳವಾರ ಆಯೋಜಿಸಿದ್ದ ಚನ್ನಬಸವೇಶ್ವರ ಪಬ್ಲಿಕ್ ಶಾಲೆಯ ಪ್ರಾಥಮಿಕ ವಿಭಾಗದ ವಾರ್ಷಿಕೋತ್ಸವ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಪ್ರಾಥಮಿಕ ಹಂತದ ಶಿಕ್ಷಣ ಮಕ್ಕಳ ಮುಂದಿನ ಭವಿಷ್ಯ ನಿರ್ಧರಿಸುತ್ತದೆ. ಹಾಗಾಗಿ ಪಾಲಕರು ಮತ್ತು ಶಿಕ್ಷಕರು ಸೇರಿ ಮಕ್ಕಳಿಗೆ ಉತ್ತಮ ಸಂಸ್ಕಾರಯುತ ಶಿಕ್ಷಣ ಕೊಡಿಸುವ ಕೆಲಸ ಮಾಡಬೇಕು ಎಂದು ತಿಳಿಸಿದರು. ಸಂಸ್ಥೆಯ ಆಡಳಿತಾಧಿಕಾರಿ ಮೋಹನ ರೆಡ್ಡಿ ಸಮಾರಂಭ ಉದ್ಘಾಟಿಸಿದರು.

ಪಾರ್ವತಿ ಬಸವ ಗುರುವಿನ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಖಡಕೇಶ್ವರ ಪ್ರೌಢ ಶಾಲೆಯ ಮುಖ್ಯಗುರು ಆನಂದ ಕಲ್ಯಾಣೆ, ಸಫಿಯೋದ್ದಿನ್, ಸಂತೋಷಕುಮಾರ ತೀರ್ಥೆ, ಶೋಭಾಬಾಯಿ, ಉಮೇಶ, ರಾಘವೇಂದ್ರ, ಬಾಲಾಜಿ, ಸುಧೀರ, ಪ್ರಾಚಾರ್ಯರಾದ ಎನ್.ರಾಜು, ರಂಗಾರೆಡ್ಡಿ ಸೇರಿದಂತೆ ಹಲವರು ಇದ್ದರು. ಪ್ರಿನ್ಸಿಪಲ್ ಜಯಲಕ್ಷ್ಮಿ ನಿರೂಪಿಸಿ, ವಂದಿಸಿದರು.



**ಚಿಟಗುಪ್ಪ: ಪಟ್ಟಣದ ಫಾತ್ಮಪುರನಲ್ಲಿ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಅಶೋಕ ಸ್ವಾಮಿ ಬಿರಾದಾರ್ ಅವರ ಸಹೋದರ ಮಹಾರುದ್ರಯ್ಯ ಸ್ವಾಮಿ ಬಿರಾದಾರ್ ರವರ ಸುಪುತ್ರ ಆಕಾಶ ಸ್ವಾಮಿ ಬಿರಾದಾರ್ ಭಾಸುಣಕಿ ಕಾರ್ಯಕ್ರಮದಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲ್ ಹಾಗೂ ಡಿಸಿಸಿ ಬ್ಯಾಂಕ ಜಿಲ್ಲಾ ಉಪಾಧ್ಯಕ್ಷ ಅಭಿಷೇಕ ಆರ್. ಪಾಟೀಲ್ ಭಾಗವಹಿಸಿ ಶುಭ ಹಾರೈಸಿದರು. ಇದೇ ವೇಳೆ ಹೇಮರೆಡ್ಡಿ ಮಲ್ಲಮ್ಮ ದೇವಸ್ಥಾನಕ್ಕೆ ಭೇಟಿ ನೀಡಿ ದರ್ಶನ ಪಡೆದರು. ಈ ಸಂದರ್ಭದಲ್ಲಿ ರಾಮಣ್ಣ ಮುಡಬಿ, ದಿಲೀಪಕುಮಾರ್ ಬಗ್ದಲಕರ್, ಬಾಬಾ ಆರ್.ಸಿ.ಸಿ., ವಿಶಾಲ ಬೋರಳೆ, ಶಿವರಾಜ ಹುಲಿ, ಭಾಸ್ಕರ್, ಮಾರುತಿ ಶಾಖಾ, ಬಸವರಾಜ ಪಾಟೀಲ್, ಬಾಬುರೆಡ್ಡಿ ಮುಸ್ತರಿ, ಸುರೇಶ ಚೌದರಿ, ರಮೇಶ ಪಾರಾ, ವಿಜಯಕುಮಾರ್ ಕಲ್ಲೂರ್, ಸಂಜೀವರೆಡ್ಡಿ ಮುಡಬಿ, ರಾಜರೆಡ್ಡಿ ಮುಡಬಿ, ವಿಠಲರಾವ ಪಟ್ಟಣಕರ್, ಶಕೀಲ್ ಅಲ್ಲೂರ್, ವೆಂಕಟ ಪೂಜಾರಿ, ರಾಕೇಶ ಸ್ವಾಮಿ ಬಿರಾದಾರ್, ರವಿ ಖೇಳಗಿ ಸೇರಿದಂತೆ ಇತರರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)**

# ರಾಯಚೂರು ಉತ್ಸವಕ್ಕೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರಿಂದ ಚಾಲನೆ

- **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**



ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಫೆ.05, 06, ಹಾಗೂ 07ರಂದು ಮೂರು ದಿನಗಳ ಕಾಲ ನಡೆಯುವ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ 2026ರ ಕಾರ್ಯಕ್ರಮಕ್ಕೆ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಫೆ.5ರ ಸಂಜೆ 6 ಗಂಟೆಗೆ ಚಾಲನೆ ಸಿಗಲಿದೆ.

ಕರ್ನಾಟಕ ಸರ್ಕಾರದ ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರು ಉದ್ಘಾಟನೆ ನೆರವೇರಿಸುವರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರಾದ ಶಿವರಾಜ ಎಸ್.ತಂಗಡಗಿ, ಕೃಷಿ ಸಚಿವರಾದ ಎನ್.ಚೆಲುವರಾಯಸ್ವಾಮಿ ಅವರು ಘನ ಉಪಸ್ಥಿತಿ ವಹಿಸುವರು.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ಎಂ.ರೇವಣ್ಣ, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್.ಆರ್. ಮೆಹರೋಜ್ ಖಾನ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ವಿಧಾನ ಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ಕಿಶೋರ್ ಪಾಟೀಲ್ ಅವರು ಉಪಸ್ಥಿತರಿರುವರು. ಡಾ.ಶಾಲಿನಿ ರಜನೀಶ್, ಇಂಧನ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಕೆ.ಪಿ.ಸಿ.ಎಲ್ ವ್ಯವಸ್ಥಾಪಕ ನಿರ್ದೇಶಕರಾದ ಗೌರವ ಗುಪ್ತಾ, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕೃಷಿ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಡಾ.ಸೆಲ್ವಕುಮಾರ ಎಸ್ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸರ್ಕಾರದ ಕಾರ್ಯದರ್ಶಿ ಜೆ.ಮಂಜುನಾಥ, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರಾದ ಕೆ.ಎಂ.ಗಾಯಿತ್ರಿ, ಹಟ್ಟಿ ಚಿನ್ನದ ಗಣಿ ನಿಯಮಿತದ ವ್ಯವಸ್ಥಾಪಕರಾದ ಶಿಲ್ಪಾ ಆರ್., ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಎಂ.ಹನುಮಂತಪ್ಪ ಅವರು ಉಪಸ್ಥಿತರಿರುವರು. ಗೌರವಾನ್ವಿತ

ಆಹ್ವಾನಿತರಾಗಿ ನವೋದಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಎಸ್.ಆರ್.ರೆಡ್ಡಿ, ಆರ್.ಸಿ.ಎಮ್.ಎ ರಾಸಾಯನಿಕ ತಯಾರಿಕರ ಸಂಘದ ಅಧ್ಯಕ್ಷರಾದ ಡಾ.ರಮೇಶ, ಶಿಲ್ಪಾ ಮೆಡಿಕೇರ್ ಲಿಮಿಟೆಡ್ ಅಧ್ಯಕ್ಷರಾದ ವಿಷ್ಣುಕಾಂತ ಭುತಡ, ರೈಸ್ ಮಿಲ್ಲರನ್ಸ್ ಅಸೋಸಿಯೇಷನ್ ಅಧ್ಯಕ್ಷರಾದ ಸಾವಿತ್ರಿ ಪುರುಷೋತ್ತಮ ಸೇರಿದಂತೆ ಜಿಲ್ಲೆಯ ಎಲ್ಲಾ ಚುನಾಯಿತ ಪ್ರತಿನಿಧಿಗಳು, ಕೈಗಾರಿಕೋದ್ಯಮಿಗಳು, ಹೋಟಲ್ ಉದ್ಯುಮಿಗಳು, ವ್ಯಾಪಾರಸ್ಥರು, ಕೃಷಿ ಪರಿಕರ ಮಾರಾಟಗಾರರು, ಸಂಘ ಸಂಸ್ಥೆಯ ಪದಾಧಿಕಾರಿಗಳು, ವಿವಿಧ ಇಲಾಖೆಯ ಮತ್ತು ರಾಯಚೂರು ಜಿಲ್ಲೆಯ ಸಮಸ್ತ ನಾಗರೀಕರು ಉಪಸ್ಥಿತರಿರುವರು.

# ಶಾಲೆಯ ವಿದ್ಯಾರ್ಥಿಗಳಿಗೆ ಅಲಾರಾಂ ನೀಡಿದ ಡಾ. ಗಜಾನನ ನಾಯಕ ಅರ್ಚನಾ



- **ಮಲ್ಲಮ್ಮ ನುಡಿ ವಾರ್ತೆ** ಅಂಕೋಲಾ:

ಅಮೃತ ಮಹೋತ್ಸವವನ್ನು ಆಚರಿಸಿಕೊಂಡಿದ್ದ ತನ್ನ ಮಾತೃನೆಲದ ತಾಲ್ಲೂಕಿನ ಬೋಳೆಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಕಾರವಾರದ ವೈದ್ಯಕೀಯ ಶಿಕ್ಷಣ ಸಂಸ್ಥೆಯ ನಿಕಟಪೂರ್ವ ಜನಪ್ರಿಯ ಸುವಿಖ್ಯಾತ ವಿಶ್ರಾಂತ ನಿರ್ದೇಶಕರಾಗಿದ್ದ ಡಾ. ಗಜಾನನ ನಾಯಕರವರ ಧರ್ಮಪತ್ನಿ ಅರ್ಚನಾ ನಾಯಕರವರು ಕುಮಟಾದ ಪ್ರತಿಷ್ಠಿತ ಪ್ರವೀಣ ಟೈಮ್ಸ್‌ನ ಉಪಯುಕ್ತವಾದ ಅಲಾರಾಂಗಳನ್ನು ಕೊಡುಗೆಯಾಗಿ ನೀಡಿದರು.

ಶಾಲೆಯ "ಪರಮೇಶ್ವರಿ ಸಭಾಂಗಣ"ದಲ್ಲಿ ಆಯೋಜಿಸಿದ ಕಾರ್ಯಕ್ರಮದಲ್ಲಿ ಅರ್ಚನಾ ನಾಯಕರವರ ತೀರ್ಥರೂಪರಾದ ವಿಜಯಾ ಬ್ಯಾಂಕಿನ ವಿಶ್ರಾಂತ ಪ್ರಬಂಧಕರಾದ ರಾಮದಾಸ ನಾಯಕರವರು ತಮ್ಮ ಮಗಳ ಪರವಾಗಿ ಅಲಾರಾಂಗಳನ್ನು ವಿದ್ಯಾರ್ಥಿಗಳಿಗೆ ವಿತರಿಸಿ – ಶುಭವನ್ನು ಕೋರಿದರು.

ಶಾಲಾ ಮುಖ್ಯಾಧ್ಯಾಪಕರು ಹಾಗೂ ಅಂಕೋಲಾ ತಾಲ್ಲೂಕಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಜಗದೀಶ ಜಿ. ನಾಯಕ, ಹೊಸ್ಕೇರಿಯವರು ಅರ್ಚನಾ ನಾಯಕರವರು ತಮ್ಮ ಹುಟ್ಟೂರಿನ ಶಾಲೆಯ ಕುರಿತಂತೆ ತಳೆದ ಅಭಿಮಾನ ಹಾಗೂ ಅವರ ಪತಿ ಡಾ. ಗಜಾನನ ನಾಯಕರವರು ಸೇವಾವಧಿಯಲ್ಲಿ ಇದ್ದಾಗ ಕರೋನ ಹಾಗೂ ಇನ್ನಿತರ ಸಂದಿಗ್ಧ ಪರಿಸ್ಥಿತಿಯಲ್ಲಿ ಅವರಿವರೆನ್ನದೇ ದೀನ ದಲಿತ ದುರ್ಬಲರಿಗೆ ಸಲ್ಲಿಸಿದ ಸೇವೆಯು ಅನನ್ಯವಾಗಿದ್ದು, ಸೇವಾ ನಿವೃತ್ತಿಯ ನಂತರದಲ್ಲಿಯೂ ನಿಷ್ಕ್ರೀಯವಾಗಿರದೇ ಸಮಾಜಮುಖಿಯಾಗಿ ತೆರೆದುಕೊಂಡು ಹೊಂದಿರುವ ಸಾರ್ವಜನಿಕ ಸಂಬಂಧ ಹಾಗೂ ಸಲ್ಲಿಸಿದ ಸೇವೆಯು ಅನುಪಮವಾಗಿದೆಯೆಂದು ಶ್ಲಾಘಿಸಿದರು. ಕಾರ್ಯಕ್ರಮದಲ್ಲಿ ಶಾಲಾ ಎಸ್.ಡಿ.ಎಂ.ಸಿ. ಅಧ್ಯಕ್ಷ ಸುಭಾಷ ಗಣಪತಿ ಗುನಗಾ, ಉಪಾಧ್ಯಕ್ಷ ಪ್ರಭಾಕರ ಚುಡಾಮಣಿ ಗೌಡ, ಶಿಕ್ಷಕಿ ಸವಿತಾ ಆನಂದು ನಾಯ್ಕ ಹಾಗೂ ಅಡುಗೆ ಸಿಬ್ಬಂದಿ ಸುಮನ ನಾಗೇಶ ನಾಯ್ಕ ಮೊದಲಾದವರು ಉಪಸ್ಥಿತರಿದ್ದರು.

ಪ್ರಾಯೋಜಕರಾದ ಅರ್ಚನಾ ನಾಯಕರವರು ಸೇವೆಯಲ್ಲಿ ಭಗವಾನ್ ಶಿರಡಿ ಸಾಯಿ ಬಾಬನನ್ನು ಕಾಣಲು ಸಾಧ್ಯವಿದ್ದು, ಸರ್ಕಾರಿ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳ ಕಲಿಕೆಯನ್ನು ಬೆಂಬಲಿಸುವ ಮೂಲಕ ಕನ್ನಡ ಶಾಲೆಗಳ ಉಳಿವಿಗೆ ತಮ್ಮ ಸಂದೇಶದಲ್ಲಿ ಕ–ರೆಗೊಟ್ಟಿರುತ್ತಾರೆ.

# ವಿವಿಧೆಡೆ ದಾಳಿ ಮೂವರು ಬಾಲಕಾರ್ಮಿಕ ಮಕ್ಕಳ ರಕ್ಷಣೆ

- **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**



ಕಾರ್ಮಿಕ ಇಲಾಖೆ ಹಾಗೂ ಇತರೆ ಸಹಭಾಗೀದಾರರ ಇಲಾಖೆಯ ಸಹಯೋಗದಲ್ಲಿ ಕುರುಗೋಡು ಪಟ್ಟಣದ ವಿವಿಧೆಡೆ ದಾಳಿ ನಡೆಸಿ ಮೂವರು ಬಾಲಕಾರ್ಮಿಕ ಮಕ್ಕಳನ್ನು ರಕ್ಷಿಸಲಾಗಿದೆ ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಮೌನೇಶ್ ಅವರು ತಿಳಿಸಿದ್ದಾರೆ.

ಜಿಲ್ಲಾಧಿಕಾರಿಯವರ ನಿರ್ದೇಶನದ ಮೇರೆಗೆ ಹಾಗೂ ಪ್ಯಾನ್–ಇಂಡಿಯಾ ರಕ್ಷಣೆ ಮತ್ತು ಪುನರ್ವಸತಿ ಅಭಿಯಾನ ಅಂಗವಾಗಿ ಗ್ರೇಡ್–2 ತಹಶೀಲ್ದಾರ ಮಲ್ಲೇಶಪ್ಪ ಅಧ್ಯಕ್ಷತೆಯಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಟಾಸ್ಕ್ ಫೋರ್ಸ್ ಸಮಿತಿ ಸಭೆ ನಡೆಸಿ ಈ ದಾಳಿ ಕೈಗೊಳ್ಳಲಾಯಿತು.

ಕುರುಗೋಡು ಪಟ್ಟಣದ ಗೆಣಿಕೆಹಾಳ್ ರಸ್ತೆ, ತೇರು ಬೀದಿ, ಹಳೇ ಎಸ್.ಬಿ.ಎಂ. ರಸ್ತೆ ಹತ್ತಿರದ ವಿವಿಧ ಸ್ಥಳಗಳಲ್ಲಿರುವ ಗ್ಯಾರೇಜ್, ಮೆಕ್ಯಾನಿಕ್ ಶಾಪ್, ಬೇಕರಿ ಇತ್ಯಾದಿ ಉದ್ದಿಮೆಗಳ ಮೇಲೆ ಟಾಸ್ಕ್ ಫೋರ್ಸ್ ಸಮಿತಿ ಮುಖಾಂತರ ಭೇಟಿ ನೀಡಿದ ಸಂದರ್ಭದಲ್ಲಿ ಮಕ್ಕಳು ಕೆಲಸ ಮಾಡುತ್ತಿರುವುದನ್ನು ಗಮನಿಸಲಾಯಿತು. ತಕ್ಷಣ ಅಲ್ಲಿ ಕೆಲಸ ನಿರ್ವಹಿಸುತ್ತಿದ್ದ 03 ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳನ್ನು ವಶಕ್ಕೆ ಪಡೆದುಕೊಂಡು ಮಕ್ಕಳ ಹೇಳಿಕೆಗಳನ್ನು ಸ್ಥಳದಲ್ಲಿಯೇ ಪಡೆದುಕೊಂಡು ಅವರನ್ನು ಮುಖ್ಯವಾಹಿನಿಗೆ ತರಲು ಶಿಕ್ಷಣ ಇಲಾಖೆಗೆ ಒಪ್ಪಿಸಲಾಗಿದೆ.

ಇದೇ ಸಂದರ್ಭದಲ್ಲಿ ಎಲ್ಲಾ ಉದ್ದಿಮೆಗಳ ಮಾಲೀಕರಿಗೆ ಕರಪತ್ರ ಹಾಗೂ ಪೋಸ್ಟರ್‌ಗಳನ್ನು ನೀಡಿ ಜಾಗೃತಿ ಮೂಡಿಸಲಾಯಿತು.

ಈ ಟಾಸ್ಕ್ ಫೋರ್ಸ್ ಸಮಿತಿಯಲ್ಲಿ ಕುರುಗೋಡು ತಾಪಂ ಕಚೇರಿಯ ಶಿವರಣ ರೆಡ್ಡಿ, ಪುರಸಭೆಯ ಆರೋಗ್ಯಾಧಿಕಾರಿ ಆದಿಕೇಶವ, ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಜಡೇಶ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೇಲ್ವಿಚಾರಕಿ ಮಂಜುಳ, ಆರೋಗ್ಯ ಇಲಾಖೆಯ ಗೋವಿಂದಪ್ಪ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಸಲಹೆಗಾರ ಪ್ರಶಾಂತ್ ಕುಮಾರ್, ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿ ರವಿಕುಮಾರ್, ಮಕ್ಕಳ ಸಹಾಯವಾಣಿ ಸಿಬ್ಬಂದಿ ಕಾರ್ತಿಕ್ ಮತ್ತು ರೀಚ್ ಸಂಸ್ಥೆಯ ಸಂಯೋಜಿಕಿ ಬಸಮ್ಮ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.

# ಬೆಂಬಲ ಬೆಲೆಯಡಿ ಕಡಲೆಕಾಳು ಖರೀದಿ: ನಾಗೇಂದ್ರ ಪ್ರಸಾದ್.ಕೆ

- **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**



ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ಕಡಲೆಕಾಳು ಉತ್ಪನ್ನವನ್ನು ಖರೀದಿಸಲಾಗುವುದು ಎಂದು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ಹಿಂಗಾರು ಹಂಗಾಮಿನ ಕಡಲೆಕಾಳು ಉತ್ಪನ್ನ ಖರೀದಿಸುವ ಮತ್ತು ಖರೀದಿ ಕೇಂದ್ರಗಳನ್ನು ಆರಂಭಿಸುವ ಕುರಿತು ನಗರದ ನೂತನ ಜಿಲ್ಲಾಡಳಿತ ಭವನದ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರಸಕ್ತ 2025–26ನೇ ಸಾಲಿನ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಪ್ರತಿ ಕ್ವಿಂಟಾಲ್ ಗೆ ರೂ.5,875 ದಂತೆ ಫ್ರೂಟ್ಸ್ ತಂತ್ರಾಂಶದಲ್ಲಿ ನೊಂದಣಿಯಾಗಿರುವ ರೈತರಿಂದ ಕಡಲೆಕಾಳು ಬೆಳೆದ ವಿಸ್ತೀರ್ಣಕ್ಕೆ ಅನುಗುಣವಾಗಿ ಉತ್ಪನ್ನ ಖರೀದಿಸಲಾಗುತ್ತದೆ.

ಬೆಂಬಲ ಯೋಜನೆಯಡಿ ಖರೀದಿ ಕೇಂದ್ರಗಳನ್ನು ಸ್ಥಾಪಿಸಿ, ಫ್ರೂಟ್ಸ್ ತಂತ್ರಾಂಶದ ಆಧಾರದ ಮೇಲೆ ರೈತರಿಂದ ಖರೀದಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ಖರೀದಿ ಏಜೆನ್ಸಿಯಾಗಿದ್ದು, ಕಡಲೆಕಾಳು ಖರೀದಿಗೆ ಜಿಲ್ಲೆಯಲ್ಲಿ ಬಳ್ಳಾರಿ ಮತ್ತು ಸಿರುಗುಪ್ಪ ಪಟ್ಟಣದಲ್ಲಿ ಖರೀದಿ ಕೇಂದ್ರ ಆರಂಭಿಸಬೇಕಾಗಿದ್ದು, ಖರೀದಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಗೋದಾಮುಗಳನ್ನು ಶುದ್ಧವಾಗಿಟ್ಟುಕೊಳ್ಳಬೇಕು. ಮೂಲಭೂತ ಸೌಕರ್ಯವುಳ್ಳ ಖರೀದಿ ಕೇಂದ್ರಗಳ ಸ್ಥಾಪನೆಗೆ ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಅವರು ತೂಕ ಪ್ರಮಾಣೀಕತೆ ಸೇರಿದಂತೆ ಬೇಕಾದ ಎಲ್ಲ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ. ಗುಣಮಟ್ಟದ ಕಡಲೆಕಾಳು ಉತ್ಪನ್ನವನ್ನು ಖರೀದಿಸಲು ಈಗಾಗಲೇ ರೈತರ ನೋಂದಣಿ ಪ್ರಕ್ರಿಯೆ ಪ್ರಾರಂಭವಾಗಿದ್ದು, ಫೆ.12 ರಿಂದ ಮೇ 02 ವರೆಗೆ ಉತ್ಪನ್ನ ಖರೀದಿಸಲು ಅವಧಿಯನ್ನು ನಿಗದಿಗೊಳಿಸಲಾಗಿದೆ ಎಂದರು.

ಜಿಲ್ಲೆಯ ರೈತರು ಖರೀದಿ ಕೇಂದ್ರಗಳಲ್ಲಿ ನೋಂದಣಿ ಮಾಡಿಸುವಾಗ ಆಧಾರ್ ಕಾರ್ಡ್, ಪಹಣಿ ಪ್ರತಿ, ಆಧಾರ್ ಲಿಂಕ್ ಆಗಿರುವ ರಾಷ್ಟ್ರೀಕೃತ ಬ್ಯಾಂಕಿನ ಪಾಸ್‌ಬುಕ್ ಜೆರಾಕ್ಸ್ ಪ್ರತಿ ಸಲ್ಲಿಸಬೇಕು. ಖರೀದಿ ಕೇಂದ್ರಗಳಲ್ಲಿ ಪಿ.ಓ.ಎಸ್. ಯಂತ್ರದ ಮೂಲಕ ರೈತರ ನೋಂದಣಿ ಹಾಗೂ ಖರೀದಿ ಪ್ರಕ್ರಿಯೆಯಲ್ಲಿ ಆಧಾರ್ ಬಯೋ ಮೆಟ್ರಿಕ್ ಪಡೆಯುವುದು ಕಡ್ಡಾಯವಾಗಿದ್ದು, ರೈತರು ಇದಕ್ಕೆ ಸಹಕರಿಸಬೇಕು ಎಂದರು.

ಅದೇರೀತಿಯಾಗಿ ರೈತರು ಫ್ರೂಟ್ಸ್ ಐ.ಡಿ ಯೊಂದಿಗೆ ತಮ್ಮ ಹತ್ತಿರದ ಖರೀದಿ ಕೇಂದ್ರಗಳಲ್ಲಿ ನೋಂದಾಯಿಸಿಕೊಳ್ಳುವ ಕುರಿತು ಸಹ ಅಗತ್ಯ ಮಾಹಿತಿ ರೈತರಿಗೆ ಒದಗಿಸುವಂತೆಯೂ ಸೂಚಿಸಿದರು.

ರೈತರ ಹೆಸರಿನ ಆಧಾರ ಸಂಖ್ಯೆ ಜೋಡಣೆಗೊಂಡ ಬ್ಯಾಂಕ್ ಖಾತೆಗೆ ಮಾತ್ರ ಡಿಬಿಟಿ ಮೂಲಕ ಹಣ ಜಮೆ ಆಗಲಿದ್ದು, ರೈತರು ಕಡ್ಡಾಯವಾಗಿ ಎಫ್‌ಐಡಿ ಮತ್ತು ಬ್ಯಾಂಕ್ ಖಾತೆಗೆ ಆಧಾರ್ ಜೋಡಣೆ ಮಾಡಿಕೊಳ್ಳುವಂತೆ ತಿಳಿಸಬೇಕು ಎಂದರು.

ಸಭೆಯಲ್ಲಿ ಕೃಷಿ ಮಾರಾಟ ಇಲಾಖೆಯ ಉಪನಿರ್ದೇಶಕ ಓಂಕಾರಯ್ಯ, ಕೃಷಿ ಜಂಟಿ ನಿರ್ದೇಶಕ ಸೋಮಸುಂದರ್, ಸಹಕಾರ ಇಲಾಖೆಯ ಉಪನಿಬಂಧಕ ವೀರಭದ್ರಯ್ಯ, ಕಾನೂನು ಮಾಪನ ಶಾಸ್ತ್ರ ಇಲಾಖೆಯ ನಿರೀಕ್ಷಕ ಮನೋಜ್ ಕುಮಾರ್ ಸೇರಿದಂತೆ ಇತರರು ಇದ್ದರು.

## ಅಲೆಮಾರಿ ಮಹಿಳೆಯರ ಭೂ ಒಡೆತನ ಯೋಜನೆಗೆ ವಿಳಂಬ
# ಭೂ ದರ ನಿಗದಿ ಸಮಿತಿ ಸಭೆ ಕರೆಯದ ಜಿಲ್ಲಾಡಳಿತ ವಿರುದ್ಧ ಧರಣಿ ಎಚ್ಚರಿಕೆ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಅಲೆಮಾರಿ ಜನಾಂಗದ ಮಹಿಳೆಯರಿಗೆ ಸರ್ಕಾರದ ಭೂ ಒಡೆತನ ಯೋಜನೆ ಸೌಲಭ್ಯ ಕಲ್ಪಿಸುವ ಸಂಬಂಧ ಭೂ ದರ ನಿಗದಿ ಸಮಿತಿ ಸಭೆಯನ್ನು ಕರೆಯದೆ ನಿರ್ಲಕ್ಷ್ಯ ವಹಿಸಿರುವ ಮಾನ್ಯ ಜಿಲ್ಲಾಡಳಿತದ ವಿರುದ್ಧ ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ಕರ್ನಾಟಕ ರಾಜ್ಯ ಎಸ್‌ಸಿ/ಎಸ್‌ಟಿ ಅಲೆಮಾರಿ ಬುಡಕಟ್ಟು ಮಹಾಸಭಾ (ರಿ) ಮಹಿಳಾ ಘಟಕ ಎಚ್ಚರಿಕೆ ನೀಡಿದೆ.

ಈ ಕುರಿತು ಬಳ್ಳಾರಿ ನಗರದ ಹೃದಯಭಾಗದ ಮೋತಿ ವೃತ್ತದ ಬಳಿಯ ಬುಡಾ ಕಾಂಪ್ಲೆಕ್ಸ್‌ನಲ್ಲಿ ಇರುವ ಕರ್ನಾಟಕ ರಾಜ್ಯ ಎಸ್‌ಸಿ/ಎಸ್‌ಟಿ ಅಲೆಮಾರಿ ಬುಡಕಟ್ಟು ಮಹಾಸಭಾ ಜಿಲ್ಲಾ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅಲೆಮಾರಿ ಸಮುದಾಯದ ಮಹಿಳಾ ಜಿಲ್ಲಾ ಅಧ್ಯಕ್ಷೆ ತುಳಸಿ ಅವರು, "ಕಳೆದ ಎರಡು ತಿಂಗಳಿಂದ ಭೂ ದರ ನಿಗದಿ ಸಮಿತಿ ಸಭೆ ಕರೆಯುವಂತೆ ಜಿಲ್ಲಾಡಳಿತಕ್ಕೆ ನಿರಂತರವಾಗಿ ಅರ್ಜಿಗಳ ಮೂಲಕ ಮನವಿ ಸಲ್ಲಿಸುತ್ತಿದ್ದರೂ ಯಾವುದೇ ಸ್ಪಂದನೆ ದೊರಕಿಲ್ಲ. ಜಿಲ್ಲಾಧಿಕಾರಿಗಳು ತನಿಖಾ ವರದಿ ತರಿಸಿಕೊಳ್ಳುವಂತೆ ಆದೇಶಿಸಿದರೂ ಸಂಬಂಧಪಟ್ಟ ಅಧಿಕಾರಿಗಳು ಫಲಾನುಭವಿಗಳ ನೈಜ ವರದಿಯನ್ನು ಸಲ್ಲಿಸದೆ ವಿಳಂಬ ಹಾಗೂ ನಿರ್ಲಕ್ಷ್ಯ ಧೋರಣೆ ಅನುಸರಿಸುತ್ತಿದ್ದಾರೆ" ಎಂದು ಆರೋಪಿಸಿದರು.

ಭೂ ಒಡೆತನ ಯೋಜನೆಗೆ ಸರ್ಕಾರ ನಿಗದಿಪಡಿಸಿದ ದರಕ್ಕೆ ಜಮೀನು ನೀಡಲು ಸಿದ್ಧರಾಗಿದ್ದ ರೈತಾಪಿ ವರ್ಗದವರು, ಆಡಳಿತಾತ್ಮಕ ವಿಳಂಬದಿಂದ ಬೇಸತ್ತು ಇದೀಗ ತಮ್ಮ ಜಮೀನುಗಳನ್ನು ಇತರರಿಗೆ ಮಾರಾಟ ಮಾಡಲು ಮುಂದಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಇದರ ಪರಿಣಾಮವಾಗಿ ಅಲೆಮಾರಿ ಮಹಿಳಾ ಫಲಾನುಭವಿಗಳಿಗೆ ಮೀಸಲಾದ 2025–26ನೇ ಸಾಲಿನ ಭೂ ಒಡೆತನ ಯೋಜನೆ ಸೌಲಭ್ಯ ಸರ್ಕಾರಕ್ಕೆ ವಾಪಸ್ಸಾಗುವ ಭೀತಿ ಎದುರಾಗಿದೆ ಎಂದು ಅವರು ಹೇಳಿದರು.

"ಅಲೆಮಾರಿ ಮಹಿಳೆಯರು ಜಾತಕ ಪಕ್ಷಿಯಂತೆ ದಿನಗಳನ್ನು ಕಳೆಯುತ್ತಾ ಸೌಲಭ್ಯಕ್ಕಾಗಿ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಅಲೆಮಾರಿ ಅನುಷ್ಠಾನ ಸಮಿತಿಯ ಅಧ್ಯಕ್ಷರಾಗಿರುವ ಜಿಲ್ಲಾಧಿಕಾರಿಗಳು ನಮ್ಮ ಸಮಸ್ಯೆಗಳ ಬಗ್ಗೆ ಅಗತ್ಯ ಕಾಳಜಿ ವಹಿಸುತ್ತಿಲ್ಲ. ಬದಲಾಗಿ ಮೂರನೇ ವ್ಯಕ್ತಿಗಳು ನಿಮ್ಮ ಸೌಲಭ್ಯಗಳನ್ನು ಪಡೆದುಕೊಳ್ಳುತ್ತಿದ್ದಾರೆ ಎಂದು ನಮ್ಮ ಸಮುದಾಯದವರನ್ನೇ ಪ್ರಶ್ನಿಸಲಾಗುತ್ತಿದೆ. ನಮ್ಮ ಸಮುದಾಯಕ್ಕೆ ಸಂಬಂಧವಿಲ್ಲದ ಮೂರನೇ ವ್ಯಕ್ತಿಗಳ ಅರ್ಜಿಗಳನ್ನು ಆಧಾರ ಮಾಡಿಕೊಂಡು ಜಿಲ್ಲಾಡಳಿತ ಹಾಗೂ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ನಮ್ಮನ್ನು ತಪ್ಪು ದಾರಿಗೆಳೆಯಲು ಮುಂದಾಗಿದ್ದಾರೆ" ಎಂದು ತುಳಸಿ ಅಸಮಾಧಾನ ವ್ಯಕ್ತಪಡಿಸಿದರು.

ಇದರಿಂದ ಅಲೆಮಾರಿ ಸಮುದಾಯಕ್ಕೆ ತೀವ್ರ ಅನ್ಯಾಯವಾಗುತ್ತಿದೆ ಎಂದು ಆರೋಪಿಸಿದ ಅವರು, "ನಮ್ಮ ಸಮುದಾಯದವರು ಭಿಕ್ಷಾಟನೆ ಮಾಡುತ್ತಿದ್ದರೆ ಬಂಧಿಸಲಾಗುತ್ತಿದೆ. ನಮ್ಮ ಪಾರಂಪರಿಕ ವೃತ್ತಿಯಾದ ಬೇಟೆ ಹಾಗೂ ಕೂಲಿ ಕೆಲಸಕ್ಕೂ ಅವಕಾಶಗಳಿಲ್ಲ. ಇತ್ತೀಚಿನ ದುಬಾರಿ ದರಗಳಲ್ಲಿ ದಿನನಿತ್ಯ ಜೀವನ ನಡೆಸುವುದು ಕಷ್ಟಕರವಾಗಿದೆ. ನಾವು ಗೂಡಾರಗಳು ಹಾಗೂ ಟೆಂಟ್‌ಗಳಲ್ಲಿ ವಾಸಿಸುವಂತಹ ದಾರುಣ ಪರಿಸ್ಥಿತಿಯಲ್ಲಿ ಇದ್ದೇವೆ" ಎಂದು ಹೇಳಿದರು.

ಬೇಡಿಕೆಗಳಿಗೆ ತಕ್ಷಣ ಸ್ಪಂದಿಸಿ ಭೂ ದರ ನಿಗದಿ ಸಮಿತಿ ಸಭೆಯನ್ನು ಕರೆಯುವಂತೆ ಉಪನಿರ್ದೇಶಕರು, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ತಕ್ಷಣ ನಿರ್ದೇಶನ ನೀಡಬೇಕು ಎಂದು ಒತ್ತಾಯಿಸಿದರು. ಇಲ್ಲದಿದ್ದಲ್ಲಿ ಮುಂದಿನ ಮೂರು ದಿನಗಳೊಳಗೆ ಪತ್ರಿಕಾಗೋಷ್ಠಿ ನಡೆಸಿ ಜಿಲ್ಲಾಧಿಕಾರಿ ಕಚೇರಿ ಎದುರು ಜಿಲ್ಲೆಯಾದ್ಯಂತ ಅಲೆಮಾರಿ ಜನಾಂಗದವರೊಂದಿಗೆ ಉಗ್ರ ಧರಣಿ ಹೋರಾಟ ನಡೆಸಲಾಗುವುದು ಎಂದು ಮಹಿಳಾ ಘಟಕ ಎಚ್ಚರಿಕೆ ನೀಡಿದೆ.

# ಡೊಳ್ಳು ತರಬೇತಿ ಕಾರ್ಯಾಗಾರ



• **ಮಲ್ಲಮ್ಮ ನುಡಿ ವಾರ್ತೆ ಸಂಡೂರು:**

ತಾಲೂಕಿನ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಎಂ.ಬಸಾಪುರ ಗ್ರಾಮದಲ್ಲಿ ರಂಗನೇಸರ ಸಾಂಸ್ಕೃತಿಕ ಕಲಾ ಸಂಘ ರಮ(ರಿ) ಎಂ .ಬಸಾಪುರ ಡೊಳ್ಳು ಕುಣಿತ ತರಬೇತಿ ಕಾರ್ಯಗಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಇಂದಿನ ದಿನಗಳಲ್ಲಿ ಜನಪದ ಕಲೆಗಳು ನಶಿಸಿ ಮೂಲೆಗುಂಪಾಗಿರುವುರುವುದು ನಾವು ಪ್ರಸ್ತುತ ದಿನಗಳಲ್ಲಿ ಕಾಣುತ್ತಿದೀವಿ ಅಂತಹ ಕಲೆಗಳನ್ನು ಗ್ರಾಮೀಣ ಭಾಗದಲ್ಲಿ ಮಕ್ಕಳಿಗೆ ತರಬೇತಿ ನೀಡುತ್ತಾ ಮತ್ತೆ ಜನಪದ ಕಲೆಗಳನ್ನು ಬೆಳೆಸುವಂತಹ ಕೆಲಸ ರಂಗಭೂಮಿಯಲ್ಲಿ ನಿರಂತರವಾಗಿ ಕೆಲಸ ಮಾಡುತ್ತಾ ನಮ್ಮ ಗ್ರಾಮದ ಚಂದ್ರಶೇಖರ ಮಾಡುತ್ತಿದ್ದಾರೆ ಎಂದು ಡೊಳ್ಳು ಬಾರಿಸುತ್ತಾ ಉದ್ಘಾಟನಾ ಕಾರ್ಯಕ್ರಮ ನೇರವೇರಿಸಿದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಗುರುಗಳಾದ ಶ್ರೀ. ಶಿವಲಿಂಗಪ್ಪ ಮಾತಾನಾಡಿದರು.

ಹಿಂದಿನ ಕಾಲದಲ್ಲಿ ಮನೆಗೊಬ್ಬರೂ ಕಲಾವಿದರನ್ನು ನಾವು ಕಾಣುತ್ತೀದ್ದೀವಿ ಈಗ ಕಲೆಗಳು ಬಗ್ಗೆ ಆಸಕ್ತಿ ಇಲ್ಲದಂತೆ ಇರುವುದು ಕಾಣುತ್ತೇವೆ.ಬಯಲಾಟ ಗ್ರಾಮೀಣ ಭಾಗದಲ್ಲಿ ಆಡುವುದು ಕಾಣುತ್ತಿದ್ದೀವಿ ಈಗೀನ ಸಂದರ್ಭದಲ್ಲಿ ಬಯಲಾಟ ಕಲಾವಿದರು ಕಣ್ಣಿಗೆ ಕಾಣದಂತೆ ಆಗಿದೆ ಜನಪದ ಗೀತೆಗಳು, ಲಾವಣಿಗಳು, ನಾಟಕಗಳು, ನೃತ್ಯಗಳು ,ಪುರಾಣ ಕಥೆಗಳು ಮತ್ತೆ ಗ್ರಾಮೀಣ ಕಲೆಗಳನ್ನು ಬೆಳೆಸಲು ಈಗೀನ ಯುವಕರು ಮುಂದಾಗಬೇಕು ಅಂತಹ ಕಾರ್ಯಗಳನ್ನು ರಂಗನೇಸರ ಸಾಂಸ್ಕೃತಿಕ ಕಲಾ ಸಂಘದವರು ಮಾಡುತ್ತಿದ್ದಾರೆ ಎಂದು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಸ್ ಡಿಎಂಸಿ ಅಧ್ಯಕ್ಷ ಶ್ರೀ.ಎನ್.ಯಲ್ಲಪ್ಪ ಮಾತಾಡಿದರು.

ಕಾರ್ಯಕ್ರಮದಲ್ಲಿ:– ರಂಗನೇಸರ ಸಾಂಸ್ಕೃತಿಕ ಕಲಾ ಸಂಘದ ಉಪಾಧ್ಯಕ್ಷರಾದ ಮುರುಣ್ಣೆ ಶಿಲಪ್ಪ ಕಾರ್ಯದರ್ಶಿ ಚಂದ್ರಶೇಖರ . ಸರಕಾರಿ ಹಿರಿಯ ಪ್ರಾಥಮಿಕ ಶಾಲಾ ಶಿಕ್ಷಕರಾದ ಶ್ರೀ ಶಿವಣ್ಣ,ಶ್ರೀ. ದೇವರಾಜ,ಡೊಳ್ಳು ಕಲಾವಿದರು ಶ್ರೀ ಹನುಮಂತ ರೆಡ್ಡಿ, ಪ್ರವೀಣ್ ಕುಮಾರ್, ಮತ್ತು ಸಂಧ್ಯಾ ಶ್ವೇತಾ ಮತ್ತು ತಂಡದಿಂದ ಪ್ರಾರ್ಥನೆ, ಪುರುಷೋತ್ತಮ. ಇ ಸ್ವಾಗತಿಸಿದರು. ನಿರೂಪಣೆಯನ್ನ ರಾಜಶೇಖರ್ ಡಿ. ಬಿ (ಶಿಕ್ಷಕರು) ನಿರ್ವಹಿಸಿದರು.

# ವಿದ್ಯಾನಗರದ ರಸ್ತೆ ಕಾಮಗಾರಿಯನ್ನು ಪರಿಶೀಲಿಸಿದ ಶಾಸಕ ಭರತ್ ರೆಡ್ಡಿ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ನಗರದವಿದ್ಯಾನಗರದಲ್ಲಿ ನಡೆಯುತ್ತಿರುವ ರಸ್ತೆ ಕಾಮಗಾರಿಯ ಪ್ರಗತಿ ಪರಿಶೀಲನೆಯನ್ನು ನಗರ ಶಾಸಕ ನಾರಾ ಭರತ್‌ರೆಡ್ಡಿ ನಡೆಸಿದರು.

ನಂತರ ಮಾತನಾಡಿದ ಅವರು, ಕಾಮಗಾರಿಯು ಗುಣಮಟ್ಟದಿಂದ ಕೂಡಿರಬೇಕು ಅಲ್ಲದೇ, ನಿಗದಿತ ಅವಧಿಯೊಳಗೆ ಕಾಮಗಾರಿ ಮುಗಿಸಿ ಸಾರ್ವಜನಿಕ–ರಿಗೆ ಅನುಕೂಲ ಮಾಡಿಕೊಡುವಂತೆ ಅಧಿಕಾರಿಗಳಿಗೆ ಸೂಚನೆಯನ್ನು ನೀಡಿದರು.

ಆಲಿಸಿದ ಸ್ಥಳೀಯರ ಕುಂದುಕೊರತೆಗಳನ್ನು ಶಾಸಕ ಭರತ್ ರೆಡ್ಡಿಯವರು ಸ್ಥಳದಲ್ಲಿದ್ದ ಅಧಿಕಾ–ರಿಗಳಿಗೆ ಪರಿಹರಿಸುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಸುಬ್ಬಾರಾಯುಡು, ಮಾಜಿ ಮೇಯರ್ ರಾಜೇಶ್ವರಿ, ಪಾಲಿಕೆಯ ಸದಸ್ಯರಾದ ಕುಬೇರ,

ಶ್ರೀನಿವಾಸ ಮಿಂಚು, ಮುಖಂಡರಾದ ಚಾನಾಳ್ ಶೇಖರ್, ವಾರ್ಡ್‌ನ ನಿವಾಸಿಗಳು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಫೆ.12ರಂದು ಮುಷ್ಕರಕ್ಕೆ ಕರೆ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:**



ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಜಾರಿಗೊಳಿಸಿರುವ ನಾಲ್ಕು ಕಾರ್ಮಿಕ ಸಂಹಿತೆಗಳು (ಲೇಬರ್ ಕೋಡ್‌ಗಳು) ಕಾರ್ಮಿಕರ ಹಕ್ಕುಗಳನ್ನು ಕಸಿದುಕೊಳ್ಳುವ, ಸಂಘಟಿತ ಕಾರ್ಮಿಕ ಚಳುವಳಿಯನ್ನು ದುರ್ಬಲಗೊಳಿಸುವ ಮತ್ತು ಕಾರ್ಪೊರೇಟ್ ಪರ ನೀತಿಗಳನ್ನು ಜಾರಿಗೊಳಿಸುವ ಉದ್ದೇಶ ಹೊಂದಿವೆ ಎಂದು ಸಿಐಟಿಯು ರಾಜ್ಯ ಉಪಾಧ್ಯಕ್ಷರಾದ ಸತ್ಯಬಾಬು ಅವರು ಆರೋಪಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕೆಭವನದಲ್ಲಿ ಸೋಮವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಈ ಕಾರ್ಮಿಕ ವಿರೋಧಿ ನೀತಿಗಳ ವಿರುದ್ಧ ಫೆಬ್ರವರಿ 12, 2026ರಂದು ದೇಶದಾದ್ಯಂತ ಅಖಿಲ ಭಾರತ ಸಾರ್ವತ್ರಿಕ ಮುಷ್ಕರಕ್ಕೆ ಕೇಂದ್ರೀಯ ಕಾರ್ಮಿಕ ಸಂಘಟನೆಗಳು ಕರೆ ನೀಡಿವೆ ಎಂದು ತಿಳಿಸಿದರು. ರಾಷ್ಟಮಟ್ಟದಲ್ಲಿ ಸಂಯುಕ್ತ ಕಿಸಾನ್ ಮೋರ್ಚಾ ಹಾಗೂ ಕರ್ನಾಟಕದಲ್ಲಿ ಸಂಯುಕ್ತ ಹೋರಾಟ ಕರ್ನಾಟಕ ಈ ಮುಷ್ಕರಕ್ಕೆ ಸಂಪೂರ್ಣ ಬೆಂಬಲ ಸೂಚಿಸಿವೆ ಎಂದರು.

ಮುಷ್ಕರದ ಅಂಗವಾಗಿ ಬಳ್ಳಾರಿಯಲ್ಲಿ ಗಾಂಧಿ ಭವನದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಬೃಹತ್ ಮೆರವಣಿಗೆ ಹಮ್ಮಿಕೊಳ್ಳಲಾಗಿದ್ದು, ನಂತರ ಜಿಲ್ಲಾಧಿಕಾರಿ ಕಚೇರಿ ಮುಂಭಾಗದಲ್ಲಿ ಬೃಹತ್ ಸಭೆ ನಡೆಯಲಿದೆ. ವಿವಿಧ ಕ್ಷೇತ್ರಗಳಿಗೆ ಸೇರಿದ ಸಾವಿರಾರು ಕಾರ್ಮಿಕರು ಈ ಹೋರಾಟದಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಲೇಬರ್ ಕೋಡ್‌ಗಳಿಂದ ಕಾರ್ಮಿಕರ ಬದುಕು ಸುಧಾರಣೆಯಾಗುತ್ತದೆ ಎಂಬುದು ಸರ್ಕಾರದ ಸುಳ್ಳು ಪ್ರಚಾರ ಮಾತ್ರ ಎಂದು ಟೀಕಿಸಿದ ಸತ್ಯಬಾಬು, ಮುಷ್ಕರದ ಹಕ್ಕು ಕಸಿದುಕೊಳ್ಳುವುದು, ಸಾಮೂಹಿಕ ಚೌಕಾಸಿ ಹಕ್ಕನ್ನು ಮೊಟಕುಗೊಳಿಸುವುದು, ಗುತ್ತಿಗೆ ಪದ್ಧತಿಯನ್ನು ಕಾನೂನುಬದ್ಧಗೊಳಿಸುವುದು, ದಿನಕ್ಕೆ 12 ಗಂಟೆಗಳ ಕೆಲಸದ ಅವಧಿ ವಿಧಿಸುವುದು ಹಾಗೂ ಮಹಿಳಾ ಕಾರ್ಮಿಕರನ್ನು ರಾತ್ರಿಪಾಳಿಯಲ್ಲಿ ಕೆಲಸ ಮಾಡಿಸಲು ಅವಕಾಶ ನೀಡಿರುವುದು ಕಾರ್ಮಿಕರ ಆರೋಗ್ಯ ಮತ್ತು ಭದ್ರತೆಗೆ ಅಪಾಯಕಾರಿಯಾಗಿದೆ ಎಂದರು.

"ವ್ಯಾಪಾರ ಸುಗಮತೆ" ಹೆಸರಿನಲ್ಲಿ ಮಾಲೀಕರ ಲಾಭಕ್ಕಾಗಿ ಕಾರ್ಮಿಕರ ಕಷ್ಟಪಟ್ಟು ಗಳಿಸಿದ ಹಕ್ಕುಗಳನ್ನು ಕಿತ್ತುಕೊಳ್ಳಲಾಗುತ್ತಿದೆ. ಕಾಂಗ್ರೆಸ್ ಸರ್ಕಾರ ಆರಂಭಿಸಿದ್ದ ತಿದ್ದುಪಡಿ ಪ್ರಕ್ರಿಯೆಯನ್ನೇ ಇಂದಿನ ಬಿಜೆಪಿ ಸರ್ಕಾರ ಸಂಹಿತೀಕರಣದ ರೂಪದಲ್ಲಿ ಜಾರಿಗೊಳಿಸುತ್ತಿದೆ. ಇದಕ್ಕೂ ಮಿಕ್ಕಾಗಿ ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರವೂ ಕಾರ್ಮಿಕ ಸಂಹಿತೆಗಳನ್ನು ಜಾರಿಗೊಳಿಸಲು ನಿಯಮ ರೂಪಿಸಲು ಮುಂದಾಗಿರುವುದು ಅತ್ಯಂತ ಖಂಡನೀಯ. ಯಾವುದೇ ಕಾರಣಕ್ಕೂ ಲೇಬರ್ ಕೋಡ್‌ಗಳನ್ನು ಕರ್ನಾಟಕದಲ್ಲಿ ಜಾರಿಗೊಳಿಸಬಾರದು ಎಂದು ಜೆಸಿಟಿಯು ಆಗ್ರಹಿಸುತ್ತದೆ ಎಂದು ಹೇಳಿದರು.

ಸರ್ಕಾರ ರೈಲ್ವೆ, ಬಂದರು, ಕಲ್ಲಿದ್ದಲು ಗಣಿಗಳು, ತೈಲ, ಉಕ್ಕು, ರಕ್ಷಣಾ, ರಸ್ತೆಮಾರ್ಗ, ವಿಮಾನ ನಿಲ್ದಾಣ, ಬ್ಯಾಂಕು, ವಿಮೆ, ದೂರಸಂಪರ್ಕ, ಅಂಚೆ, ಪರಮಾಣುಶಕ್ತಿ, ವಿದ್ಯುತ್ ಉತ್ಪಾದನೆ ಮತ್ತು ಪೂರೈಕೆ ಸೇರಿದಂತೆ ಎಲ್ಲಾ ಸಾರ್ವಜನಿಕ ವಲಯದ ಉದ್ಯಮಗಳನ್ನು ಖಾಸಗೀಕರಿಸಿ ದೇಶಿ–ವಿದೇಶಿ ಕಾರ್ಪೊರೇಟ್ ಕಂಪನಿಗಳಿಗೆ ಮಾರಾಟ ಮಾಡುತ್ತಿದೆ ಎಂದು ಆರೋಪಿಸಿದರು. ಇದರಿಂದ ಸ್ಥಳೀಯ ಕೈಗಾರಿಕೆ, ಸ್ವಾವಲಂಬಿ ಆರ್ಥಿಕತೆಗೆ ಭಾರೀ ಅಪಾಯ ಎದುರಾಗಿದೆ ಎಂದರು.

65 ಲಕ್ಷಕ್ಕೂ ಅಧಿಕ ಖಾಲಿ ಹುದ್ದೆಗಳ ಭರ್ತಿ, ಗುತ್ತಿಗೆ ಮತ್ತು ಹೊರಗುತ್ತಿಗೆ ಕಾರ್ಮಿಕರ ಖಾಯಂಗೊಳಿಸುವಿಕೆ, ಹೊಸ ಹುದ್ದೆಗಳ ಸೃಷ್ಟಿಯ ಮೇಲಿನ ನಿಷೇಧ ತೆರವುಗೊಳಿಸುವ ಬೇಡಿಕೆಗಳನ್ನು ಸರ್ಕಾರ ಸಂಪೂರ್ಣ ನಿರ್ಲಕ್ಷಿಸಿದೆ. ಅಗತ್ಯ ವಸ್ತುಗಳ ಬೆಲೆ ಏರಿಕೆ, ಶಿಕ್ಷಣ–ಆರೋಗ್ಯ ಕ್ಷೇತ್ರಗಳ ಖಾಸಗೀಕರಣ, ಆರ್ಥಿಕ ಅಸಮಾನತೆಗಳಿಂದ ಜನಸಾಮಾನ್ಯರು ತೀವ್ರ ಸಂಕಷ್ಟಕ್ಕೆ ತಳ್ಳಲ್ಪಟ್ಟಿದ್ದಾರೆ ಎಂದು ಹೇಳಿದರು.

ಮನರೆಗಾ ಯೋಜನೆಯನ್ನು ಎಬಿಜಿರಾಮ್ ಎಂದು ಬದಲಿಸಿ ಉದ್ಯೋಗ ಖಾತ್ರಿ ಹಕ್ಕನ್ನೇ ಕಸಿದುಕೊಂಡಿರುವುದು, ವಿದ್ಯುತ್ ಮಸೂದೆ 2025 ಮೂಲಕ ವಿದ್ಯುತ್ ಕ್ಷೇತ್ರ ಖಾಸಗೀಕರಣ, ವಿಮಾ ಕ್ಷೇತ್ರವನ್ನು ಶೇ.100 ರಷ್ಟು ವಿದೇಶಿ ಬಂಡವಾಳಕ್ಕೆ ತೆರೆದಿರುವುದು ಜನ ವಿರೋಧಿ ನೀತಿಗಳೆಂದು ಆಕ್ರೋಶ ವ್ಯಕ್ತಪಡಿಸಿದರು. ಅಂಗನವಾಡಿ, ಬಿಸಿಯೂಟ ಕಾರ್ಯಕರ್ತೆಯರು, ನಿರ್ಮಾಣ, ಬೀಡಿ, ಗೃಹ, ಗಿಗ್ ಮತ್ತು ಪ್ಲಾಟ್‌ಫಾರ್ಮ್ ಕಾರ್ಮಿಕರಿಗೆ ಕಾರ್ಮಿಕ ಸ್ಥಾನಮಾನ, ಕನಿಷ್ಠ ವೇತನ, ಪಿಎಫ್, ಇಎಸ್‌ಐ ಸೌಲಭ್ಯ ನೀಡದೇ ಶೋಷಣೆ ಮುಂದುವರೆದಿದೆ ಎಂದು ದೂರಿದರು.

ಈ ನೀತಿಗಳು ಯಾವುದೇ ಒಂದು ಪಕ್ಷದವಲ್ಲ, ಶೋಷಕ ಬಂಡವಾಳಶಾಹಿ ವ್ಯವಸ್ಥೆಯ ವರ್ಗನೀತಿಗಳೆಂದು ಹೇಳಿದ ಅವರು, ಈ ದಾಳಿಯ ವಿರುದ್ಧ ಐಕ್ಯ ಹಾಗೂ ರಾಜಿ ರಹಿತ ಹೋರಾಟ ಅಗತ್ಯವಿದೆ ಎಂದರು. ಆದ್ದರಿಂದ ಕಾರ್ಮಿಕರ ಹಕ್ಕುಗಳು, ಸಾರ್ವಜನಿಕ ಉದ್ಯಮಗಳು ಮತ್ತು ರೈತರ ನ್ಯಾಯಬದ್ಧ ಬೇಡಿಕೆಗಳನ್ನು ಉಳಿಸಲು ಫೆ.12ರ ಸಾರ್ವತ್ರಿಕ ಮುಷ್ಕರವನ್ನು ಯಶಸ್ವಿಗೊಳಿಸಬೇಕೆಂದು ಜೆಸಿಟಿಯು ಎಲ್ಲಾ ದುಡಿಯುವ ಜನತೆಗೆ ಕರೆ ನೀಡುತ್ತದೆ ಎಂದು ಸತ್ಯಬಾಬು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಎ.ದೇವದಾಸ್, ಮಾಧವ್ ರೆಡ್ಡಿ, ಸಂಗಣಕಲ್ ಕೃಷ್ಣ, ಸೋಮಶೇಖರ್ ಗೌಡ, ಡಾ. ಪ್ರಮೋದ್, ಗೋವಿಂದ್, ಕಿರಣ್ ಕುಮಾರ್, ಶಾಂತ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಶಾಸಕರಿಂದ ವಿವಿಧ ಕಾಮಗಾರಿಗಳ ಪರಿಶೀಲನೆ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,:**

ನಗರ ಶಾಸಕ ನಾರಾ ಭರತ್ ರೆಡ್ಡಿಯವರು ನಿನ್ನೆ ನಗರ ಸಂಚಾರ ಮಾಡಿ ನಗರದಲ್ಲಿ ನಡೆಯುತ್ತಿರುವ ವಿವಿಧ ಕಾಮಗಾರಿಗಳ ಪ್ರಗತಿ ಪರಿಶೀಲನೆಯನ್ನು ನಡೆಸಿದರು.

ನಗರದ ಮೋತಿ ಸರ್ಕಲ್ ನಿಂದ ಎಪಿ–ಎಂಸಿವರೆಗಿನ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಪರಿಶೀಲಿಸಿ ರಸ್ತೆ ಮಧ್ಯೆಯ ಡಿವೈಡರ್ ಮಧ್ಯದಲ್ಲಿನ ಮಣ್ಣನ್ನು ಬದಲಿಸಿ ಗುಣಮಟ್ಟದ ಮಣ್ಣು ಹಾಕಿ ಸಸಿ ನೆಡಲು ಅಧಿಕಾರಿಗಳಿಗೆ ಸೂಚಿಸಿದರಲ್ಲದೆ ರಸ್ತೆಯ ಕಾಮಗಾರಿ ಗುಣಮಟ್ಟವನ್ನು ಕಾಪಾಡುವಂತೆ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಬಳಿಕ ಎಪಿಎಂಸಿ ಮಾರುಕಟ್ಟೆ ಪ್ರದೇಶಕ್ಕೆ ಭೇಟಿ ನೀಡಿದ ಶಾಸಕ ನಾರಾ ಭರತ್ ರೆಡ್ಡಿಯವರು ಸ್ಥಳೀಯರು, ವ್ಯಾಪಾರಿಗಳನ್ನು ಮಾತನಾಡಿಸಿ ಅವರ ಕುಂದುಕೊರತೆಗಳನ್ನು ಆಲಿಸಿದರು.

ಈ ಸಂದರ್ಭದಲ್ಲಿ ಮಹಾನಗರಪಾಲಿಕೆಯ ಮಹಾಪೌರರಾದ ಪೂಜಾರಿ ಗಾದೆಪ್ಪ, ಮಹಾನಗರ ಪಾಲಿಕೆಯ ಸದಸ್ಯರಾದ ಶ್ರೀನಿವಾಸ ಮಿಂಚು, ಮುಂಡೂರು ಪ್ರಭಂಜನ್, ಪೇರಂ ವಿವೇಕ್(ವಿಕ್ಕಿ), ಕಾಂಗ್ರೆಸ್ ಮುಖಂಡರಾದ ಕಮೇಲಾಸೂರಿ, ಸುಬ್ಬಾರಾಯುಡು, ಚಾನಾಳ್ ಶೇಖರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಬೀದಿನಾಟಕ ಮೂಲಕ ಸರ್ಕಾರದ ಯೋಜನೆಗಳ ಜಾಗೃತಿ




• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ತಾಲ್ಲೂಕಿನ ಕೊಳಗಲ್ಲು ಗ್ರಾಮದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಕ್ಷೇತ್ರ ಪ್ರಚಾರ ಕಾರ್ಯಕ್ರಮದಡಿ ಸೋಮವಾರ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಹಾಗೂ ವಿವಿಧ ಯೋಜನೆಗಳ ಕುರಿತು ಬೀದಿನಾಟಕ ಹಾಗೂ ಜಾನಪದ ಸಂಗೀತ ಕಲಾತಂಡಗಳಿಂದ ಜಾಗೃತಿ ಮೂಡಿಸಲಾಯಿತು.

ಕಾರ್ಯಕ್ರಮಕ್ಕೆ ಗ್ರಾಮದ ಹಿರಿಯರಾದ ತಿಮ್ಮಪ್ಪ ಅವರು ತಮಟೆ ಬಾರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಇಬ್ರಾಹಿಂಪುರ ಚಿಗುರು ಕಲಾತಂಡ ಸರ್ಕಾರದ ಗ್ಯಾರಂಟಿ ಯೋಜನೆಗಳು ಮತ್ತು ಸರ್ಕಾರದ ವಿವಿಧ ಜನಪರ ಯೋಜನೆಗಳ ಕುರಿತು ಬೀದಿ ನಾಟಕದ ಮೂಲಕ ಹಾಡುಗಳು ಪ್ರಸ್ತುತಪಡಿಸುವ ಮೂಲಕ ಜನರಿಗೆ ಜಾಗೃತಿ ಮೂಡಿಸಿದರು. ಈ ಸಂದರ್ಭದಲ್ಲಿ ಗ್ರಾಮದ ಈರಣ್ಣ, ತಿಪ್ಪಯ್ಯ, ಭಾಷಾ ಸಾಬ್, ದುರ್ಗಪ್ಪ, ಸಿದ್ದಪ್ಪ, ನಾಗಪ್ಪ, ಕಲಾವಿದರಾದ ಹುಲುಗಪ್ಪ ಎಸ್.ಎಂ., ಹೆಚ್. ರಮೇಶ್, ಹೆಚ್.ಎರ್ರಿಸ್ವಾಮಿ, ನವೀನ್, ವೆಂಕಟೇಶ್, ಗಂಗಮ್ಮ, ರುತಮ್ಮ, ರಾಜು ಸೇರಿದಂತೆ ಸಾರ್ವಜನಿಕರು ಇದ್ದರು.

# ಕೇಂದ್ರ ಬಜೆಟ್ನಲ್ಲಿ ಹೈದರಾಬಾದ್ ಕರ್ನಾಟಕ ಕಡೆಗಣನೆ: ಹುಡೆದ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ:**



ಈ ಬಾರಿಯ ಕೇಂದ್ರ ಬಜೆಟ್ ನಲ್ಲಿ ಹೈದರಾಬಾದ್ ಕರ್ನಾಟಕ ಪ್ರದೇಶವನ್ನು ಸಂಪೂರ್ಣವಾಗಿ ಕಡೆಗಣಿಸಿದ್ದು ಜೊತೆಗೆ ಯುವಕರು ಮತ್ತು ಮಹಿಳಾ ಸಬಲೀಕರಣಕ್ಕೆ ಹೆಚ್ಚು ಒತ್ತು ನೀಡದೆ ಇರುವುದು ನಿರಾಶದಾಯಕ ಬಜೆಟ್ ಎಂದು ಹೇಳಬಹುದಾಗಿದೆ ಎಂದು ಕೊಪ್ಪಳ ಬ್ಲಾಕ್ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಸೋಮಲಿಂಗಪ್ಪ ಹುಡೆದ ಹೇಳಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಸೋಮಲಿಂಗಪ್ಪ ಮಾತನಾಡುತ್ತಾ ಈ ಬಾರಿಯ ಕೇಂದ್ರ ಬಜೆಟ್ ಕುರಿತಂತೆ ಜನತೆ ಬಾರಿ ನಿರೀಕ್ಷೆಯನ್ನು ಹೊಂದಿದ್ದರು ಆದರೆ ಕೇಂದ್ರ ಸಚಿವೆ ಮಂಡಿಸಿದ ಬಜೆಟ್ ಸಂಪೂರ್ಣ ನಿರಾಶದಾಯಕವಾಗಿದ್ದು ರಾಜ್ಯಕ್ಕೆ ಯಾವುದೇ ರೈಲು ಸೇರಿದಂತೆ ಹೊಸ ಯೋಜನೆ ನೀಡದೆ ಇರುವುದು ಹಾಗೂ ಬಜೆಟ್ ನಲ್ಲಿ ಮಹಿಳೆಯರು ಮತ್ತು ಯುವಕರಿಗೆ ಹೆಚ್ಚಿನ ಆದ್ಯತೆ ನೀಡದೆ ಇರುವುದರಿಂದ ಇದೊಂದು ಶ್ರೀಮಂತರ, ಕಾರ್ಪೊರೇಟ್ ಬಜೆಟ್ ಎಂದು ಮೇಲ್ನೋಟಕ್ಕೆ ಕಾಣಿಸುತ್ತಿದ್ದು ಮಧ್ಯಮ ವರ್ಗದವರನ್ನು ಸಂಪೂರ್ಣವಾಗಿ ನಿರ್ಲಕ್ಷಿಸಲಾಗಿದೆ ಹಾಗೂ ಬೆಲೆ ಏರಿಕೆಗೆ ಯಾವುದೇ ನಿಯಂತ್ರಣ ಕ್ರಮವನ್ನು ಕೈಗೊಳ್ಳದೆ ಇರುವುದು ಬೇಸರದ ಸಂಗತಿ ಆಗಿದೆ ಎಂದು ಹೇಳಿದರು.

# ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ 2.0' 90 ದಿನಗಳ ವಿಶೇಷ ಮಧ್ಯಸ್ಥಿಕೆ ಅಭಿಯಾನ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಭಾರತದ ಸರ್ವೋಚ್ಚ ನ್ಯಾಯಾಲಯದ ಮಧ್ಯಸ್ಥಿಕೆ ಮತ್ತು ರಾಜಿ ಯೋಜನೆ ಸಮಿತಿ ನಿರ್ದೇಶನದಂತೆ, ಜಿಲ್ಲಾ ನ್ಯಾಯಾಲಯದಲ್ಲಿ 'ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ 2.0' ಎಂಬ 90 ದಿನಗಳ ಬೃಹತ್ ಮಧ್ಯಸ್ಥಿಕೆ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರು ತಿಳಿಸಿದ್ದಾರೆ.

ಈ ಅಭಿಯಾನವು ಜನವರಿ–2, 2026 ರಿಂದ ಪ್ರಾರಂಭವಾಗಿದ್ದು, ಏಪ್ರಿಲ್ ತಿಂಗಳವರೆಗೆ ನಡೆಯಲಿದೆ. ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಸೌಹಾರ್ದಯುತವಾಗಿ, ಶೀಘ್ರವಾಗಿ ಮತ್ತು ಖರ್ಚಿಲ್ಲದೆ ಇತ್ಯರ್ಥಪಡಿಸಿಕೊಳ್ಳಲು ಸಾರ್ವಜನಿಕರಿಗೆ ಇದು ಸುವರ್ಣಾವಕಾಶವಾಗಿದೆ ಎಂದು ತಿಳಿಸಿದ್ದಾರೆ.

ಮಧ್ಯಸ್ಥಿಕೆಯ ಉಪಯೋಗಗಳು:

ಮಧ್ಯಸ್ಥಿಕೆ ಎಂಬುದು ಎರಡು ಅಥವಾ ಹೆಚ್ಚು ಕಕ್ಷಿದಾರರ ನಡುವಿನ ವಿವಾದಗಳನ್ನು ಬಗೆಹರಿಸಲು ಬಳಸುವ ಒಂದು ಪರ್ಯಾಯ ವಿವಾದ ಇತ್ಯರ್ಥ ವಿಧಾನವಾಗಿದೆ. ಈ ಪ್ರಕ್ರಿಯೆಯಲ್ಲಿ ಒಬ್ಬ ತಟಸ್ಥ ಮೂರನೇ ವ್ಯಕ್ತಿ, ಅಂದರೆ 'ಮಧ್ಯಸ್ಥಗಾರ', ವಿವಾದದಲ್ಲಿರುವ ಕಕ್ಷಿದಾರರು ತಮ್ಮ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಲು ಸಹಾಯ ಮಾಡುತ್ತಾರೆ. ಮಧ್ಯಸ್ಥಗಾರರು ಯಾವುದೇ ನಿರ್ಧಾರವನ್ನು ಹೇರುವುದಿಲ್ಲ, ಬದಲಾಗಿ, ಅವರು ಸಂವಹನ ಮತ್ತು ಮಾತುಕತೆಯ ಮೂಲಕ ಪರಸ್ಪರ ಒಪ್ಪಿಗೆಯ ಪರಿಹಾರವನ್ನು ಕಂಡುಕೊಳ್ಳಲು ಸಹಾಯ ಮಾಡುತ್ತಾರೆ.



ಮಧ್ಯಸ್ಥಿಕೆಯ ಪ್ರಮುಖ ಅಂಶ:

ಸಮಯ ಮತ್ತು ಹಣ ಉಳಿತಾಯ: ನ್ಯಾಯಾಲಯದ ಮೊಕದ್ದಮೆಗಳಿಗೆ ಹೋಲಿಸಿದರೆ, ಮಧ್ಯಸ್ಥಿಕೆಯ ಪ್ರಕ್ರಿಯೆಯು ಕಡಿಮೆ ಸಮಯ ತೆಗೆದುಕೊಳ್ಳುತ್ತದೆ ಮತ್ತು ಕಡಿಮೆ ವೆಚ್ಚದಲ್ಲಿರುತ್ತದೆ. ಇದರಿಂದ ಕಕ್ಷಿದಾರರಿಗೆ ಸಮಯ ಮತ್ತು ಹಣದ ಉಳಿತಾಯವಾಗುತ್ತದೆ.

ಸೌಹಾರ್ದಯುತ ಇತ್ಯರ್ಥ: ನ್ಯಾಯಾಲಯದ ಹೋರಾಟದಲ್ಲಿ ಸಾಮಾನ್ಯವಾಗಿ ಒಂದು ಪಕ್ಷ ಗೆಲ್ಲುತ್ತದೆ ಮತ್ತು ಇನ್ನೊಂದು ಪಕ್ಷ ಸೋಲುತ್ತದೆ, ಇದು ದ್ವೇಷ ಮತ್ತು ಅಸೂಯೆಗೆ ಕಾರಣವಾಗಬಹುದು. ಆದರೆ ಮಧ್ಯಸ್ಥಿಕೆಯಲ್ಲಿ, ಎರಡೂ ಪಕ್ಷಗಳ ಒಪ್ಪಿಗೆಯ ಮೂಲಕ ಪರಿಹಾರ ಕಂಡುಕೊಳ್ಳುವುದರಿಂದ ಸೌಹಾರ್ದಯುತ ಸಂಬಂಧಗಳು ಉಳಿಯುತ್ತವಲ್ಲದೇ ಎರಡೂ ಪಕ್ಷಗಾರರು ಗೆಲುವಿನ ನಗೆ ಬೀರುತ್ತಾರೆ.

ಗೌಪ್ಯತೆ: ಮಧ್ಯಸ್ಥಿಕೆ ಪ್ರಕ್ರಿಯೆಯು ಗೌಪ್ಯವಾಗಿರುತ್ತದೆ. ನ್ಯಾಯಾಲಯದಲ್ಲಿರುವಂತೆ ಸಾರ್ವಜನಿಕವಾಗಿ ವಿಚಾರಣೆ ನಡೆಯುವುದಿಲ್ಲ. ಇದರಿಂದ ಪಕ್ಷಗಳ ವೈಯಕ್ತಿಕ ಮತ್ತು ಸೂಕ್ಷ್ಮ ವಿಷಯಗಳು ಗೌಪ್ಯವಾಗಿ ಉಳಿಯುತ್ತವೆ.

ಕಕ್ಷಿದಾರರ ನಿಯಂತ್ರಣ: ಮಧ್ಯಸ್ಥಿಕೆಯಲ್ಲಿ, ವಿವಾದವನ್ನು ಹೇಗೆ ಪರಿಹರಿಸಬೇಕು ಎಂಬ ನಿರ್ಧಾರವನ್ನು ಸ್ವತಃ ಕಕ್ಷಿದಾರರೇ ತೆಗೆದುಕೊಳ್ಳುತ್ತಾರೆ. ಇದರಿಂದ, ಕಕ್ಷಿದಾರರು ತಮಗೆ ಸೂಕ್ತವೆನಿಸಿದ ಒಪ್ಪಂದಕ್ಕೆ ಬರಬಹುದು.

ವ್ಯಾಪಕ ಬಳಕೆ (ವಿವಿಧ ರೀತಿಯ ಪ್ರಕರಣಗಳಿಗೆ ಸೂಕ್ತವಾಗಿದೆ): ಮಧ್ಯಸ್ಥಿಕೆಯು ಅನೇಕ ವಿಧದ ಪ್ರಕರಣಗಳಿಗೆ ಸೂಕ್ತವಾಗಿದೆ. ಅದರಲ್ಲಿ ಕುಟುಂಬ ವಿವಾದಗಳು, ಆಸ್ತಿ ವಿವಾದಗಳು, ವಾಣಿಜ್ಯ ವಿವಾದಗಳು, ಸೇವೆ ಸಂಬಂಧಿತ ಪ್ರಕರಣಗಳು, ವಾಹನ ಅಪಘಾತ ವಿಮೆ ಪ್ರಕರಣಗಳು, ಚೆಕ್ ಬೌನ್ಸ್ ಪ್ರಕರಣಗಳು ಸೇರಿದಂತೆ ಅನೇಕ ಬಗೆಯ ಪ್ರಕರಣಗಳು ಒಳಗೊಂಡಿರುತ್ತವೆ.

ಕಳೆದ 2025 ರ ಜುಲೈ 1 ರಿಂದ ಅಕ್ಟೋಬರ್ ರವರೆಗೆ ನಡೆದ ಮೊದಲ ಹಂತದ ಅಭಿಯಾನವು ಬಳ್ಳಾರಿ ಜಿಲ್ಲೆಯಲ್ಲಿ ಯಶಸ್ಸು ಕಂಡಿದೆ.

ಅದರಲ್ಲಿ ಮಧ್ಯಸ್ಥಿಕೆಗೆ ಶಿಫಾರಸುಗೊಂಡ ಪ್ರಕರಣಗಳು–1,468, ಮಧ್ಯಸ್ಥಿಕೆ ನಡೆದ ಪ್ರಕರಣಗಳು–851, ಯಶಸ್ವಿಯಾಗಿ ಇತ್ಯರ್ಥಗೊಂಡ ಪ್ರಕರಣಗಳು– 117, ವೈವಾಹಿಕ/ಕೌಟುಂಬಿಕ ವ್ಯಾಜ್ಯಗಳ ಇತ್ಯರ್ಥ–41, ಚೆಕ್ ಅಮಾನ್ಯ ಪ್ರಕರಣಗಳು–32, ಆಸ್ತಿ ವಿಭಜನೆ–23, ಇತರೆ ಪ್ರಕರಣಗಳು–21 ಇತ್ಯರ್ಥಗೊಂಡಿವೆ. ಒಟ್ಟು 68 ನುರಿತ ಸಂಧಾನಕಾರರು ಭಾಗವಹಿಸಿದ್ದರು.

ಪ್ರಕರಣದ ಉಭಯ ಪಕ್ಷಗಾರರು ಒಪ್ಪಿದಲ್ಲಿ, ಸಂಬಂಧಪಟ್ಟ ನ್ಯಾಯಾಲಯಕ್ಕೆ ಮನವಿ ಸಲ್ಲಿಸಿ ತಮ್ಮ ಪ್ರಕರಣವನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಮಧ್ಯಸ್ಥಿಕೆ ಕೇಂದ್ರಕ್ಕೆ ವರ್ಗಾಯಿಸಿಕೊಳ್ಳಬಹುದು. ಇಲ್ಲಿ ಅನುಭವಿ ಸಂಧಾನಕಾರರು ಗೌಪ್ಯವಾಗಿ ಮತ್ತು ಸೌಹಾರ್ದಯುತವಾಗಿ ವ್ಯಾಜ್ಯವನ್ನು ಬಗೆಹರಿಸಿಕೊಡುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ಮತ್ತು ಉಚಿತ ಕಾನೂನು ನೆರವಿಗಾಗಿ ರಾಷ್ಟ್ರೀಯ ಸಹಾಯವಾಣಿ ಸಂಖ್ಯೆ 15100 ಕ್ಕೆ ಕರೆ ಮಾಡಬಹುದು ಅಥವಾ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವನ್ನು ಸಂಪರ್ಕಿಸಬಹುದು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರು ತಿಳಿಸಿದ್ದಾರೆ.

# ಪಂಚ ಗ್ಯಾರಂಟಿಗಳು ಬಡವರ ಆಶಾಕಿರಣ




• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ರಾಜ್ಯಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಬಡವರು, ಮಧ್ಯಮ ವರ್ಗದ ಕುಟುಂಬಗಳಿಗೆ ಆಶಾಕಿರಣವಾಗಿವೆ ಎಂದು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಎನ್.ರಾಂಪುರ ಹೇಳಿದರು. ತಾಲ್ಲೂಕಿನ ಬೆನಕಟ್ಟಿ ಗ್ರಾಮದಲ್ಲಿ ಸೋಮವಾರ ಜರುಗಿದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಇಲಾಖೆಗಳ ಗ್ರಾಮ ಪಂಚಾಯಿತಿ ಮಟ್ಟದ ಶಿಬಿರ ಉದ್ಘಾಟಿಸಿ ಅವರು ವ ಾತನಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಚುನಾವಣೆ ಸಂದರ್ಭದಲ್ಲಿ ಘೋಷಿಸಿದ ಗ್ಯಾರಂಟಿ ಭರವಸೆಯನ್ನು ಈಡೇರಿಸುವ ಮೂಲಕ ನುಡಿದಂತೆ ನಡೆದುಕೊಂಡಿದೆ ಎಂದ ರಾಂಪುರ, ಗ್ಯಾರಂಟಿ ಯೋಜನೆಗಳ ಮೂಲಕ ತಮಗೆ ಅನುಕೂಲ ಕಲ್ಪಿಸಿರುವುದಕ್ಕೆ ಗ್ರಾಮೀಣ ಭಾಗದ ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳು ಸರ್ಕಾರ ಹಾಗೂ ಮುಖ್ಯಮಂತ್ರಿಗಳನ್ನು ಸ್ಮರಿಸುತ್ತಿದ್ದಾರೆ ಎಂದು ಹೇಳಿದರು. ಗ್ರಾಪಂ ಆಡಳಿತಾಧಿಕಾರಿ ಪಿ.ನಾಗರಾಜ್ ಮಾತನಾಡಿ, ಪಂಚ ಗ್ಯಾರಂಟಿ ಯೋಜನೆ ಬಹು ಉಪಯುಕ್ತ ಯೋಜನೆಯಾಗಿದ್ದು ಫಲಾನುಭವಿಗಳು ಕಾರ್ಯಕ್ರಮಗಳ ಪ್ರಯೋಜನ ಪಡೆದುಕೊಳ್ಳಬೇಕು ಎಂದರು. ಮುಖ್ಯ ಅತಿಥಿ ಮಲ್ಲಿಕಾರ್ಜುನ ಮೇಟಿ ಮಾತನಾಡಿ, ಗ್ಯಾರಂಟಿ ಯೋಜನೆಗಳು ಜನಸಾಮಾನ್ಯರು ಅದರಲ್ಲೂ ಗ್ರಾಮೀಣ ಜನರ ಬದುಕನ್ನು ಶ್ರೀಮಂತಗೊಳಿಸಿವೆ ಎಂದು ಹೇಳಿ,

ಈ ಯೋಜನೆಗಳ ಮೂಲಕ ಮುಖ್ಯಮಂತ್ರಿ ಸಿದ್ಧರಾಮಯ್ಯ ಬಡವರು ಹಾಗೂ ಮಧ್ಯಮ ವರ್ಗದ ಜನರಿಗೆ ಅನುಕೂಲತೆ ಕಲ್ಪಿಸಿದ್ದಾರೆ ಎಂದು ಹೇಳಿದರು. ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಸದಸ್ಯರಾದ ಅಮಿನಸಾಬ ಹವಾಲ್ದಾರ್, ರವಿ ಅನವಾಲ ಮಾತ ನಾಡಿದರು.

ಹೆಸ್ಕಾಂ ಬೇವೂರ ವಲಯ ಅಧಿಕಾರಿ ನಾಮದೇವ ರಾಠೋಡ, ಸಾರಿಗೆ ಸಂಸ್ಥೆಯ ಎಚ್.ಆರ್.ಗೌಡರ, ಆಹಾರ ಇಲಾಖೆಯ ಬಂಗಾರಗುಂಡ, ಮಹಿಳಾ ಮತ್ತು ಮಕ್ಕಳ ಇಲಾಖೆಯ ಜಯಶ್ರೀ ಕಟಗಿ ಸಂಬಂಧಿತ ಯೋಜನೆಗಳ ಮಾಹಿತಿ ನೀಡಿದರು.

ಪಿಕೆಪಿಎಸ್ ಅಧ್ಯಕ್ಷ ವೇಮನ ಯಡಹಳ್ಳಿ, ಗ್ರಾಪಂ ಮಾಜಿ ಅಧ್ಯಕ್ಷರಾದ ಪಾರ್ವತಿ ಮಾದರ, ಬಾಲವ್ವ ಮಾದರ, ಬಿ.ಆರ್.ಯಡಹಳ್ಳಿ, ಶಿವನಗೌಡ ಪಾಟೀಲ, ಗ್ರಾಪಂ ಅಭಿವೃದ್ಧಿ ಅಧಿಕಾರಿ ಜ್ಯೋತಿ ಪಾಟೀಲ, ಶಿಕ್ಷಕ ಪಾಂಡು ಸನ್ನಪ್ಪನವರ ಅತಿಥಿಗಳಾಗಿದ್ದರು.

# ಕಾಮಗಾರಿಯಲ್ಲಿ ಲೋಪ ಕಂಡಲ್ಲಿ ಕ್ರಮ: ಸಿಇಓ



ಇಳಕಲ್ಲ ತಾಲೂಕಿನ ಚಿಕ್ಕ ಕೊಡಗಲಿ ಗ್ರಾಮದಲ್ಲಿ ಆಸ್ತಿ ಕರ ಸಂಗ್ರಹಣೆ ಬಗ್ಗೆ ಜಾಗೃತಿ ಮೂಡಿಸಲಾಯಿತು.

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಗ್ರಾಮ ಪಂಚಾಯತ್ ಆದಾಯ ವೃದ್ಧಿಗಾಗಿ ತೆರಿಗೆ ಸಂಗ್ರಹಣೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ನಿಟ್ಟಿನಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಇಳಕಲ್ಲ ತಾಲೂಕಿನ ಚಿಕ್ಕ ಕೊಡಗಲಿ ಗ್ರಾಮದ ಮನೆಗಳಿಗೆ ಭೇಟಿ ನೀಡಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಮುಂದಾದರು.

ಮಂಗಳವಾರ ಹುನಗುಂದ, ಇಳಕಲ್ಲ ಹಾಗೂ ಮುಧೋಳ ತಾಲೂಕಿನಲ್ಲಿ ಕೈಗೊಂಡ ವಿವಿಧ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆಗಾಗಿ ಪ್ರವಾಸ ಕೈಗೊಂಡು ಪರಿಶೀಲನಾ ಕಾರ್ಯ ನಡೆಸಿದರು. ಹೂವಿನಹಳ್ಳಿ ಗ್ರಾಮದ ರಸ್ತೆ ಅಭಿವೃದ್ಧಿ ಕಾಮಗಾರಿ, ಮುಲ್ಲೂರು ಗ್ರಾಮದ ರಸ್ತೆ ಕಾಮಗಾರಿ, ಕ್ಯಾದಿಗೇರಿ ಗ್ರಾಮದಿಂದ ಕುಣಬೆಂಚಿ ಗ್ರಾಮದವರೆಗೆ ನಿರ್ಮಾಣಗೊಳ್ಳುತ್ತಿರುವ ರಸ್ತೆ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕಾಮಗಾರಿಯಲ್ಲಿ ಗುಣಮಟ್ಟಕ್ಕೆ ಆದ್ಯತೆ ನೀಡಿ, ತಾಂತ್ರಿಕ ಮಾನದಂಡಗಳಂತೆ ಗುಣಮಟ್ಟ ಕಾಯ್ದುಕೊಂಡು ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸಲು ಸೂಚಿಸಿದರು.

ಐಹೊಳೆಯ ಗ್ರಾಮ ಪಂಚಾಯಿತಿಯ ಪಶು ವೈದ್ಯಕೀಯ ಆಸ್ಪತ್ರೆಗೆ ಭೇಟಿ ನೀಡಿ ರೈತರು ಮತ್ತು ಪಶುಪಾಲಕರಿಗೆ ಸಮರ್ಪಕ ಸೇವೆ ದೊರಕುವಂತೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಬಲಪಡಿಸಲು ತಿಳಿಸಿದರು.

ಯರನಕೇರಿ ಗ್ರಾಮದ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ ಸಿಇಓ ಅವರು ಮಕ್ಕಳಿಗೆ,

ಗರ್ಭಿಣಿ ಹಾಗೂ ಬಾಣಂತಿಯರಿಗೆ ಒದಗಿಸಲಾಗುತ್ತಿರುವ ಸೌಲಭ್ಯಗಳು, ಪೌಷ್ಟಿಕ ಆಹಾರ ಮತ್ತು ದಾಖಲೆಗಳ ಪರಿಶೀಲನೆ ನಡೆಸಿದರು. ಬೇವಿನಮಟ್ಟಿ ಗ್ರಾಮದ ಡಿ. ದೇವರಾಜ ಅರಸು ವಸತಿ ನಿಲಯಕ್ಕೆ ಭೇಟಿ ನೀಡಿ ವಸತಿ ನಿಲಯದ ಸೌಲಭ್ಯಗಳು ಹಾಗೂ ಆವರಣ ಗೋಡೆ ನಿರ್ಮಾಣ ಕಾಮಗಾರಿ ಹಾಗೂ ವಿದ್ಯಾರ್ಥಿಗಳ ಸುರಕ್ಷತೆ, ಸ್ವಚ್ಛತೆಗೆ ಕ್ರಮ ಕೈಗೊಳ್ಳಲು ಸೂಚಿಸಿದರು.

ಮುಧೋಳ ತಾಲೂಕಿನ ಉತ್ತೂರು ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ, ಅಲ್ಲಿನ ಔಷದ ಸಂಗ್ರಹವನ್ನು ಪರಿಶೀಲಿಸಿದರು. ಅಗತ್ಯ ಔಷಧಗಳು ಲಭ್ಯವಿರುವಂತೆ ನೋಡಿಕೊಳ್ಳಲು ತಿಳಿಸಿ, ಗ್ರಾಮೀಣ ಪ್ರದೇಶದ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸಲು ವೈದ್ಯಾಧಿಕಾರಿಗಳು ಮುಂದಾಗಬೇಕಿದೆ ಎಂದರು. ನಂತರ ಮುದೋಳ ಎ.ಪಿ.ಎಂ.ಸಿ ಶೆಡ್ ನಿರ್ಮಾಣ ಕಾಮಗಾರಿಯನ್ನು ಪರಿಶೀಲಿಸಿ, ಕಾಮಗಾರಿಯ ಪ್ರಗತಿ ಕುರಿತು ಮಾಹಿತಿ ಪಡೆದು, ರೈತರಿಗೆ ಅನುಕೂಲವಾಗುವಂತೆ ಕಾಮಗಾರಿ ಪೂರ್ಣಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಭೇಟಿ ಸಂದರ್ಭದಲ್ಲಿ ಜಿ.ಪಂ ಮುಖ್ಯಲೆಕ್ಕಾಧಿಕಾರಿ ಸಿದ್ಧರಾಮೇಶ್ವರ ಉಕ್ಕಲಿ,

ಹುನಗುಂದ & ಇಲಕಲ್ಲ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮುರಳೀದರ ದೇಶಪಾಂಡೆ ಮುಧೋಳ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಎಂ.ಐ.ಅಂಬಿಗೇರ ಹಾಗೂ ಆಯಾ ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# 10 ಸಾವಿರ ಜನರಿಗೆ ರುದ್ರಾಕ್ಷಿ ವಿಭೂತಿ ವಿತರಣೆ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಬಳ್ಳಾರಿಯ ಐತಿಹಾಸಿಕ ಶ್ರೀ ಕೋಟೆ ಮಲ್ಲೇಶ್ವರ ಸ್ವಾಮಿಯ ರಥೋತ್ಸವ ಅಂಗವಾಗಿ ಫೆ.01 ಮತ್ತು 02 ರಂದು ನಗರದಲ್ಲಿ ಶಾಸಕ ನಾರಾ ಭರತ್ ರೆಡ್ಡಿಯವರು ರಥೋತ್ಸವಕ್ಕೆ ಆಗಮಿಸಿದ ಭಕ್ತ ಸಮೂಹಕ್ಕೆ10 ಸಾವಿರ ವಿಭೂತಿ ಹಾಗೂ ರುದ್ರಾಕ್ಷಿಗಳನ್ನು ವಿತರಿಸಿದರು.

ಪ್ರತಿ ವರ್ಷ ಸಾಮಾನ್ಯವಾಗಿ ಮಹಾ ಶಿವರಾತ್ರಿ ಸಂದರ್ಭದಲ್ಲಿ ರುದ್ರಾಕ್ಷಿ ವಿಭೂತಿ ವಿತರಿಸಲಾಗುತ್ತಿತ್ತು. ಕಳೆದ ಎರಡು ವರ್ಷಗಳಿಂದ ಶ್ರೀ ಕೋಟೆ ಮಲ್ಲೇಶ್ವರ ಸ್ವಾಮಿಯ ರಥೋತ್ಸವ ಸಂದರ್ಭದಲ್ಲಿ ಲಡ್ಡು ಪ್ರಸಾದ ಹಾಗೂ ನೀರಿನ ಬಾಟಲಿ ವಿತರಿಸಲಾಗಿತ್ತು. ಈ ಸಲ ರಥೋತ್ಸವದಲ್ಲಿ ಭಾಗಿಯಾಗುವ ಭಕ್ತರಿಗೆ ರುದ್ರಾಕ್ಷಿ ಹಾಗೂ ವಿಭೂತಿ ವಿತರಿಸಲಾಯಿತು.

# ನವೋದಯ ವಿದ್ಯಾಲಯ ಪ್ರವೇಶ ಪರೀಕ್ಷೆ




• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ :**

ಜವಾಹರ ನವೋದಯ ವಿದ್ಯಾಲಯದಲ್ಲಿ 2026-27ನೇ ಸಾಲಿನಲ್ಲಿ 9ನೇ ಮತ್ತು 11ನೇ ತರಗತಿಯ ಪ್ರವೇಶಕ್ಕಾಗಿ ಫೆಬ್ರವರಿ 7 ರಂದು ಈಗಾಗಲೇ ನಿಗದಿಪಡಿಸಿದ ಪರೀಕ್ಷಾ ಕೇಂದ್ರಗಳಲ್ಲಿ ಪ್ರವೇಶ ಪರೀಕ್ಷೆ ನಡೆಯಲಿದೆ.

9ನೇ ತರಗತಿ ಪ್ರವೇಶಕ್ಕಾಗಿ ರೂಲ್ ನಂಬರ್ 159219 ನಿಂದ 159732 ರವರೆಗೆ ಕುಕನೂರಿನ ಪಿ.ಎಮ್. ಶ್ರೀ ಜವಾಹರ ನವೋದಯ ವಿದ್ಯಾಲಯದಲ್ಲಿ ಪ್ರವೇಶ ಪರೀಕ್ಷೆ ನಡೆಯಲಿದೆ. 11ನೇ ತರಗತಿ ಪ್ರವೇಶಕ್ಕಾಗಿ ರೂಲ್ ನಂಬರ್ 146981 ನಿಂದ 147268 ರವರೆಗೆ ಕುಕನೂರಿನ ಎಸ್.ಎಫ್.ಎಸ್. ಹೈಸ್ಕೂಲಿನಲ್ಲಿ ಹಾಗೂ ರೂಲ್ ನಂಬರ್ 147269 ನಿಂದ 147483 ರವರೆಗೆ ಕುಕನೂರಿನ ವಿದ್ಯಾನಂದ ಗುರುಕುಲ (ಹೈಸ್ಕೂಲು ಸೆಕ್ಷನ್) ದಲ್ಲಿ ಪ್ರವೇಶ ಪರೀಕ್ಷೆ ನಡೆಯಲಿದೆ.

ಈಗಾಗಲೇ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಿದ ವಿದ್ಯಾರ್ಥಿಗಳು ಹಾಲ್ ಟಿಕೆಟ್ ಡೌನ್‌ಲೋಡ್ ಮಾಡಿಕೊಂಡು ಫೆಬ್ರವರಿ 7 ರಂದು ನಿಗದಿಪಡಿಸಿದ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಬರೆಯಬೇಕೆಂದು ವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೈಲಾರ ಲಿಂಗೇಶ್ವರ ಜಾತ್ರೆ ಕಾರ್ಣಿಕೋತ್ಸವ ಸಂಚಾರ ಮಾರ್ಗ ಬದಲಾವಣೆ

• **ಮಲ್ಲಮ್ಮ ನುಡಿ ವಾರ್ತೆ**



ವಿಜಯನಗರ (ಹೊಸಪೇಟೆ): ಹೂವಿನಹಡಗಲಿ ತಾಲ್ಲೂಕಿನ ಮೈಲಾರ ಗ್ರಾಮದಲ್ಲಿ ಇದೇ ಫೆಬ್ರವರಿ 4 ರಂದು ಶ್ರೀ ಮೈಲಾರ ಲಿಂಗೇಶ್ವರ ಜಾತ್ರೆ ಹಾಗೂ ಕಾರ್ಣಿಕೋತ್ಸವ ಕಾರ್ಯಕ್ರಮ ನಡೆಯಲಿದೆ. ಈ ಸಂಬಂಧ ಕಾರ್ಣಿಕೋತ್ಸವ ನಡೆಯಲಿರುವ ಸ್ಥಳದ ಸುತ್ತಮುತ್ತಲಿನ ರಸ್ತೆಗಳಲ್ಲಿ ವಾಹನ ಸಂಚಾರ ದಟ್ಟಣೆ ಹೆಚ್ಚಾಗಿ ಗಣ್ಯರು, ಸಾರ್ವಜನಿಕರ ಸುಗಮ ಸಂಚಾರಕ್ಕೆ ಅಡಚಣೆ ಉಂಟಾಗುವ ಸಾಧ್ಯತೆ ಇದೆ.

ಆದ್ದರಿಂದ ವಾಹನಗಳ ಸುಗಮ ಸಂಚಾರದ ಹಿತದೃಷ್ಟಿಯಿಂದ ಫೆಬ್ರವರಿ 3 ರಿಂದ ಫೆಬ್ರವರಿ 5 ರವರೆಗೆ ಆಯ್ದ ರಸ್ತೆಗಳಲ್ಲಿ ವಾಹನ ಸಂಚಾರ ಮತ್ತು ನಿಲುಗಡೆ ನಿರ್ಬಂಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಆದೇಶಿಸಿದ್ದಾರೆ.

ಫೆಬ್ರವರಿ 3 ರ ಸಂಜೆ 4 ಗಂಟೆಯಿಂದ ಫೆಬ್ರವರಿ 5 ರ ಬೆಳಗ್ಗೆ 10 ರವರೆಗೆ ಮೈಲಾರ ಗ್ರಾಮಕ್ಕೆ ಬರುವ ಮೈಲಾರ-ಗುತ್ತಲ, ಮೈಲಾರ -ಹೊಳಲು ಹಾಗೂ ಕುರುವತ್ತಿ ಮಾರ್ಗಗಳಲ್ಲಿ ಭಕ್ತಾಧಿಗಳು ಬರುವ ಹೊರತುಪಡಿಸಿ, ಸರಕು ಸಾಗಾಣೆ ಹಾಗೂ ಭಾರಿ ವಾಹನಗಳ ಸಂಚಾರ ಮತ್ತು ರಸ್ತೆಯ ಎರಡೂ ಬದಿಗಳಲ್ಲಿ ವಾಹನ ನಿಲುಗಡೆ ನಿರ್ಭಂದಿಸಲಾಗಿದೆ.

ಪಾರ್ಕಿಂಗ್ ವ್ಯವಸ್ಥೆ: ನೀಲಗುಂದ, ಕಂಚೂರು, ಹಲುವಾಗಲು, ಹರವಿ, ಸಿದ್ದಾಪುರ, ಲಿಂಗನಾಯಕನಹಳ್ಳಿ ಹಾಗೂ ಕುರುವತ್ತಿ ಮಾರ್ಗವಾಗಿ ಬರುವ ಕೆಎಸ್‌ಆರ್‌ಟಿಸಿ ವಾಹನಗಳಿಗೆ ಕುರುವತ್ತಿ ರಸ್ತೆಯಲ್ಲಿನ ಚನ್ನಬಸಪ್ಪ ಮಹಾದೇವಪ್ಪ ಜಮೀನು, ಲಘುವಾಹನಗಳಿಗೆ ತೋಟದಸ್ವಾಮಿ, ಕೆ.ನೀಲಪ್ಪ ಮತ್ತು ಮಲ್ಲಿಕಾರ್ಜುನ್‌ರವರ ಜಮೀನಿನಲ್ಲಿ, ದ್ವಿಚಕ್ರ ವಾಹನಗಳಿಗೆ ಉದ್ದಗಟ್ಟಿ ಶೇಖರಪ್ಪನವರ ಜಮೀನಿನಲ್ಲಿ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಲಾಗಿದೆ.

ಹಡಗಲಿ, ಹಿರೇಹಡಗಲಿ, ಹೊಳಲು, ಹರಪನಹಳ್ಳಿ, ಹುಲಿಕಟ್ಟೆ, ಹಾರಕನಾಳು, ಹ್ಯಾರಾಡ ಕಡೆಯಿಂದ ಆಗಮಿಸುವ ಕೆಎಸ್‌ಆರ್‌ಟಿಸಿ ಬಸ್‌ಗಳಿಗೆ ಹೊಳಲು ರಸ್ತೆಯಲ್ಲಿನ ದೇವರಾಜ್‌ರವರ ಜಮೀನಿನಲ್ಲಿ, ಲಘುವಾಹನಗಳಿಗೆ ಅಳ್ಳಿಹಾಳ ಪೂರಪ್ಪ, ಗುರುಪ್ರಸಾದ್ ದೇವಗುರು ಮತ್ತು ಹೊಳಲು ಮೀರತ್ ಮಠ. ದ್ವಿಚಕ್ರ ವಾಹನಗಳಿಗೆ ಹೊಳಲು ರಸ್ತೆಯ ಬದಿಯಲ್ಲಿ ಹಾಗೂ ಗುತ್ತಲ, ಹಡಗಲಿ ಮತ್ತು ಹರಪನಹಳ್ಳಿ ತಾಲ್ಲೂಕಿನ ಸುತ್ತಮುತ್ತಲಿನ ಹಳ್ಳಿಗಳಿಂದ ಆಗಮಿಸುವ ವಾಹನಗಳಿಗೆ ಗುತ್ತಲ ರಸ್ತೆ ಬದಿ ಮತ್ತು ದೊಂಬ್ರಳ್ಳಿ ಕ್ರಾಸ್ ಬಳಿ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದ್ದಾರೆ.

# ಕೇಂದ್ರ ಬಜೆಟ್: 2026 ಆರ್ಥಿಕ ಅಡಿಪಾಯ

ವಿಜಯನಗರ (ಹೊಸಪೇಟೆ) ಕೇಂದ್ರ ಸೀತಾರಾಮನ್ ಬಜೆಟ್ 2026 ಬಲವಾದ ಸ್ಥೂಲ ಆರ್ಥಿಕ ಅಡಿಪಾಯ, ಮತ್ತು ಖಾಸಗಿ ವಲಯದ ಹೂಡಿಕೆಗೆ ಪುನರುಜ್ಜೀವನಗೊಂಡ ಒತ್ತು, ಸ್ಥಿತಿಸ್ಥಾಪಕ, ಅಂತರ್ಗತ ಬಜೆಟ್ ಮತ್ತು ಆರ್ಥಿಕ ಬೆಳವಣಿಗೆ, ಒಖಒಇ ಗಳು ಮತ್ತು ವೃದ್ಧರ ವೈದ್ಯಕೀಯ ಪ್ರಯೋಜನಗಳ ಕಲ್ಯಾಣದ ಮೇಲೆ ದೀರ್ಘಕಾಲೀನ ಪರಿಣಾಮ. ಡಾ.ಶೇಷಗಿರಿ ಬಿ ಅರ್ಥಶಾಸ್ತ್ರದ ಸಹಾಯಕ ಪ್ರಾಧ್ಯಾಪಕ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ "ಜಾಗತಿಕ ವ್ಯವಹಾರ ಮತ್ತು ಹೂಡಿಕೆಯನ್ನು ಆಕರ್ಷಿಸುವುದು. ನಿರ್ಣಾಯಕ ಮೂಲಸೌಕರ್ಯವನ್ನು ಸಕ್ರಿಯಗೊಳಿಸುವ ಮತ್ತು ಡೇಟಾ ಕೇಂದ್ರಗಳಲ್ಲಿ ಹೂಡಿಕೆಯನ್ನು ಹೆಚ್ಚಿಸುವ ಅಗತ್ಯವನ್ನು ಗುರುತಿಸುವುದು. ಭಾರತದ ಡೇಟಾ ಸೆಂಟರ್ ಸೇವೆಗಳನ್ನು ಬಳಸಿಕೊಂಡು ಜಾಗತಿಕವಾಗಿ ಗ್ರಾಹಕರಿಗೆ ಕ್ಲೌಡ್ ಸೇವೆಗಳನ್ನು ಒದಗಿಸುವ ಯಾವುದೇ ವಿದೇಶಿ ಕಂಪನಿಗೆ 2047 ರವರೆಗೆ ತೆರಿಗೆ ರಜೆ ನೀಡಲು ಮೋದಿ ಸರ್ಕಾರ ಪ್ರಸ್ತಾಪಿಸಿದೆ. ಆದಾಗ್ಯೂ, ಇದು ಭಾರತೀಯ ಮರುಮಾರಾಟಗಾರರ ಘಟಕದ ಮೂಲಕ ಭಾರತೀಯ ಗ್ರಾಹಕರಿಗೆ ಸೇವೆಗಳನ್ನು ಒದಗಿಸಬೇಕಾಗುತ್ತದೆ. ಭಾರತದಿಂದ ಡೇಟಾ ಸೆಂಟರ್ ಸೇವೆಗಳನ್ನು ಒದಗಿಸುವ ಕಂಪನಿಯು ಸಂಬಂಧಿತ ಘಟಕವಾಗಿದ್ದರೆ ವೆಚ್ಚದ ಮೇಲೆ 15% ಸುರಕ್ಷಿತ ಬಂದರನ್ನು ಒದಗಿಸಲು ಮೇಡಂ ಪ್ರಸ್ತಾಪಿಸಿದ್ದಾರೆ. ಎಲೆಕ್ಟ್ರಾನಿಕ್ ಉತ್ಪಾದನೆಗೆ ಸರಿಯಾದ ಸಮಯಕ್ಕೆ ಲಾಜಿಸ್ಟಿಕ್ಸ್‌ನ ದಕ್ಷತೆಯನ್ನು ಬಳಸಿಕೊಳ್ಳಿ. ಮೋದಿ 3.0 ಬಜೆಟ್ ಇನ್‌ವಾಯ್ಸ್ ಮೌಲ್ಯದ 2% ಲಾಭಾಂಶದಲ್ಲಿ ಬಾಂಡೆಡ್ ಗೋದಾಮಿನಲ್ಲಿ ಘಟಕ ಗೋದಾಮಿಗಾಗಿ ಅನಿವಾಸಿಗಳಿಗೆ ಸುರಕ್ಷಿತ ಬಂದರನ್ನು ಹೆಚ್ಚಿಸುತ್ತದೆ," ಎಂದು ಅವರು ಹೇಳಿದರು.

# ನೂಕ್ ಅನುಷ್ಠಾನಕ್ಕೆ ಮಾರ್ಚ್ 30 ಗಡುವು

• **ಮಲ್ಲಮ್ಮ ನುಡಿ ವಾರ್ತೆ ವಿಜಯನಗರ (ಹೊಸಪೇಟೆ) :**

ಕೇಂದ್ರ ಪುರಸ್ಕೃತ ಸ್ವದೇಶಿ ದರ್ಶನ್ 2 ರಡಿ ವಿಶ್ವಪಾರಂಪರಿಕ ಹಂಪಿಗೆ ಬರುವ ಪ್ರವಾಸಿಗರನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸ್ಮಾರಕಗಳು ಮತ್ತು ಪ್ರವಾಸಿ ತಾಣಗಳ ಬಳಿ ಪ್ರಯಾಣಿಕರ ಸುರಕ್ಷತೆಯ ತಂಗುದಾಣ ಅನುಷ್ಠಾನಗೊಳಿಸಲು ಸಿದ್ದತೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಾಕೀತು ಮಾಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಟ್ರಾವೆಲ್ಲರ್ ನೂಕ್ ಅನುಷ್ಠಾನಗೊಳಿಸುತ್ತಿರುವ ಕಾಮಗಾರಿಗಳ ಕುರಿತು ಆಯೋಜಿಸಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯದ ಸ್ವದೇಶಿ ದರ್ಶನ್ 2.0 ಯೋಜನೆಯಡಿ ಹಂಪಿ ಆಯ್ಕೆಯಾಗಿದ್ದು, ಈ ಯೋಜನೆಯಡಿ ಯುನೆಸ್ಕೋ ವಿಶ್ವ ಪರಂಪರೆಯ ತಾಣವಾದ ಹಂಪಿಗೆ ಬರುವ ಪ್ರವಾಸಿಗರಿಗೆ ಮೂಲಭೂತ ಸೌಕರ್ಯಗಳನ್ನು ಒಂದೇ ಸೂರಿನಡಿ ಕುಡಿಯುವ ನೀರು, ಸ್ವಚ್ಛವಾದ ಶೌಚಾಲಯ ಮತ್ತು ವಿಶ್ರಾಂತಿ ಪಡೆಯಲು ನೆರಳಿನ ವ್ಯವಸ್ಥೆ ಹೊಂದಿರುವ 'ಟ್ರಾವೆಲ್ಲರ್ ನೂಕ್'ಗಳನ್ನು ನಿರ್ಮಿಸಲಾಗುತ್ತಿದೆ. ಇವು ಪ್ರವಾಸಿಗರಿಗೆ ಕಡಿಮೆ ದರದಲ್ಲಿ ಅಗತ್ಯ ಮೂಲಭೂತ ಸೌಕರ್ಯಗನ್ನೊಳಗೊಂಡಿರುತ್ತದೆ. ಆದ್ದರಿಂದ ಪ್ರವಾಸಿಗರಿಗೆ ಸುರಕ್ಷಿತವಾಗಿ ಉಳಿದುಕೊಳ್ಳಲು ಮತ್ತು ಸ್ಥಳೀಯ ಸಂಸ್ಕೃತಿಯನ್ನು ಹತ್ತಿರದಿಂದ ತಿಳಿಯಲು ಸಹಾಯ ಮಾಡುತ್ತವೆ.

ಆದ್ದರಿಂದ ಸ್ವದೇಶಿ ದರ್ಶನ್ 2.0 ಯೋಜನೆಯಡಿ ಹಂಪಿಯ ಮಯೂರ ಭುವನೇಶ್ವರಿ ಹೋಟೆಲ್ ಹತ್ತಿರ, ಚಂದ್ರಕೇಶ್ವರ ದೇವಸ್ಥಾನ, ವಿಜಯ ವಿಠ್ಠಲ ದೇವಸ್ಥಾನ, ವಿರಪಾಕ್ಷ ದೇವಸ್ಥಾನ ಸೇರಿದಂತೆ ವಿವಿಧ ಸ್ಮಾರಕಗಳು ಮತ್ತು ಪ್ರವಾಸಿ ತಾಣಗಳ ಒಟ್ಟು 20 ಸ್ಥಳಗಳಲ್ಲಿ 'ಟ್ರಾವೆಲ್ಲರ್ ನೂಕ್' ಸ್ಥಾಪಿಸಬೇಕು. ಅನುಷ್ಠಾನಗೊಳಿಸಲು ಯಾವುದೇ ರೀತಿಯ ಸ್ಥಳದ ಅಭಾವ ಅಥವಾ ಇನ್ನಿತರೆ ಅಡೆತಡೆ ಉಂಟಾದಲ್ಲಿ ತ್ವರಿತವಾಗಿ ಪರಿಹಾರ ಕಂಡು-ಕೊಂಡು ನಿಗಧಿತ ಅವಧಿಯೊಳಗೆ ಪೂರ್ಣಗೊಳಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿಇಓ ನೋಂಗ್ಜಾಯ್ ಮಹ್ಮದ್ ಅಲಿ ಅಕ್ರಂ ಷಾ, ಹೆಚ್ಚುವರಿ ಪೋಲಿಸ್ ವರಿಷ್ಠಾಧಿಕಾರಿ ಮಂಜುನಾಥ, ನಗರಸಭೆ ಪೌರಾಯುಕ್ತ ಶಿವಕುಮಾರ್, ಹಂಪಿಯ ಪುರಾತತ್ವ ಇಲಾಖೆ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ವಾಹನ ಚಾಲಕರು ರಸ್ತೆ ಸುರಕ್ಷತೆಗೆ ಮೊದಲ ಆದ್ಯತೆ ನೀಡಿ: ನ್ಯಾ. ಮಹಾಂತೇಶ ದರಗದ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ:**



ವಾಹನಗಳ ವೇಗದ ಮಿತಿ, ಚಾಲನೆಯ ಇತಿಮಿತಿಗಳನ್ನು ಅರ್ಥ ಮಾಡಿಕೊಂಡು ಎಲ್ಲಾ ವಾಹನ ಚಾಲಕರು ರಸ್ತೆ ಸುರಕ್ಷತೆಗೆ ಮೊದಲ ಆದ್ಯತೆ ನೀಡಬೇಕೆಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕೊಪ್ಪಳ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ಎಸ್. ದರಗದ ಹೇಳಿದರು.

ಅವರು ಮಂಗಳವಾರ ಕೊಪ್ಪಳ ನಗರದ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪ್ರಾದೇಶಿಕ ಸಾರಿಗೆ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ ಕೊಪ್ಪಳ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 37ನೇ ರಾಷ್ಟ್ರೀಯ ರಸ್ತೆ ಸುರಕ್ಷಿತಾ ಮಾಸಾಚರಣೆ-2026ರ ಸಮಾರೋಪ ಸಮಾರಂಭ ನೆರವೇರಿಸಿ ಮಾತನಾಡಿದರು.

ಪ್ರತಿಯೊಬ್ಬರು ಸಾರಿಗೆ, ಸಂಚಾರ ನಿಯಮಗಳನ್ನು ಅರಿತುಕೊಂಡು ಅವುಗಳನ್ನು ಅಳವಡಿಸಿಕೊಂಡು, ಕಟ್ಟು ನಿಟ್ಟಾಗಿ ಪಾಲಿಸಿದರೆ ರಸ್ತೆ ಸುರಕ್ಷತೆಯನ್ನು ಪರಿಣಾಮಕಾರಿಗೊಳಿಸಲು ಸಾಧ್ಯವಾಗಿದೆ. ಹಾಗಾಗಿ ವಾಹನ ಸವಾರರು ವೇಗದ ಮಿತಿ ಹಾಗೂ ಚಾಲನೆಯ ಇತಿಮಿತಿಗಳನ್ನು ತಿಳಿದುಕೊಳ್ಳಬೇಕು. ದ್ವಿಚಕ್ರ ವಾಹನ ಚಲಾಯಿಸುವಾಗ ಕಡ್ಡಾಯವಾಗಿ ಹೆಲ್ಮೆಟ್ ಧರಿಸುವುದು ಮತ್ತು ಕಾರು ಚಲಾಯಿಸುವಾಗ ಕಡ್ಡಾಯವಾಗಿ ಸೀಟ್ ಬೆಲ್ಟ್ ಧರಿಸಬೇಕು. ಇದರ ಜೊತೆಗೆ ವಾಹನ ಚಲಾಯಿಸುವಾಗ ಮೊಬೈಲ್ ಬಳಕೆ ಮಾಡದಿರುವುದು ಹಾಗೂ ಇತರೆ ಸುರಕ್ಷತಾ ಕ್ರಮಗಳ ಪಾಲನೆಯೊಂದಿಗೆ ಅನೇಕ ಅಪಘಾತಗಳನ್ನು ತಪ್ಪಿಸಬಹುದು ಎಂದರು.

ಕಾನೂನುಗಳು ಇರುವುದು ನಮ್ಮ ಸುರಕ್ಷತೆಗೆ. ನಾವೆಲ್ಲರೂ ಅವುಗಳನ್ನು ಪಾಲನೆ ಮಾಡಬೇಕು. 18 ವರ್ಷದೊಳಗಿನ ಮಕ್ಕಳಿಗೆ ದ್ವಿಚಕ್ರ ಸೇರಿದಂತೆ ಇತರೆ ಯಾವುದೇ ವಾಹನಗಳ ಚಾಲನೆಗೆ ಕೊಡಬಾರದು. ವಾಹನಗಳ ಮಾರಾಟ ಮಾಡಿದ ತಕ್ಷಣ ಅದನ್ನು ವಾಹನ ಖರೀದಿಸಿದವರ ಹೆಸರಿಗೆ ವರ್ಗಾಯಿಸಬೇಕು. ವಾಹನಗಳ ಸುಸ್ಥಿತಿ ಮತ್ತು ಅವುಗಳ ಮಾಲಿನ್ಯ ತಪಾಸಣೆಯಂತಹ ಕ್ರಮಗಳನ್ನು ಅನುಸರಿಸಬೇಕು. ರಸ್ತೆ ನಿಯಮಗಳನ್ನು ಪಾಲನೆ ಮಾಡುವುದರ ಮೂಲಕ ಅಪಘಾತಗಳನ್ನು ತಡೆಗಟ್ಟಬೇಕೆಂದು ಹೇಳಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಅನುಷ್ಠಾನಾಧಿಕಾರಿ ಡಾ.ರವೀಂದ್ರನಾಥ ಎಂ.ಎಚ್ ಅವರು ಮಾತನಾಡಿ, ವಾಹನ ಚಾಲಕರು ಸಂಚಾರ ನಿಯಮಗಳನ್ನು ಪಾಲಿಸುವುದು ಅತ್ಯವಶ್ಯಕವಾಗಿದೆ. ತೆರಳಬೇಕಾದ ಸ್ಥಳಕ್ಕೆ ನಿಗದಿತ ಅವಧಿಯೊಳಗೆ ತಲುಪಬೇಕೆಂಬ ಕಾರಣಕ್ಕೆ ಅತೀ ವೇಗವಾಗಿ ವಾಹನ ಚಾಲನೆ ಮಾಡಬಾರದು. ವಾಹನಗಳನ್ನು ನಿಧಾನವಾಗಿ ಜಾಗರೂಕತೆಯಿಂದ ಚಾಲನೆ ಮಾಡಬೇಕು. ನಿರ್ದಿಷ್ಟ ಸಮಯಕ್ಕೆ ತಲುಪಲು ಸ್ವಲ್ಪ ಮುಂಚಿತವಾಗಿ ಹೊರಡುವ ಮನೋಭಾವ ರೂಢಿಸಿಕೊಳ್ಳಬೇಕು. ರಸ್ತೆ ಸುರಕ್ಷತೆ ಬಗ್ಗೆ ವಾಹನಗಳ ಸುಸ್ಥಿತಿ, ವಾಹನ ಚಾಲನೆವೇಳೆ ಮದ್ಯಪಾನದ ಸೇವನೆ ಮಾಡದಿರುವುದು, ಮೊಬೈಲ್ ಬಳಕೆ ಮಾಡದಿರುವುದು ಮತ್ತು ಸರಿಯಾದ ಕ್ರಮದಲ್ಲಿ ವಾಹನಗಳ ಪಾರ್ಕಿಂಗ್ ಸೇರಿದಂತೆ ಇತರೆ ಸಂಚಾರಿ ನಿಯಗಳ ಬಗ್ಗೆ ಹೆಚ್ಚು ಜಾಗೃತಿ ಮೂಡಿಸಬೇಕು ಎಂದರು.

ಪ್ರಾದೇಶಿಕ ಸಾರಿಗೆ ಅಧಿಕಾರಿ ಪ್ರಭುಸ್ವಾಮಿ ಹಿರೇಮಠ ಅವರು ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವು ಸಹ ಕೊಪ್ಪಳ ಜಿಲ್ಲೆಯಾದ್ಯಂತ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆಯನ್ನು ಹಮ್ಮಿಕೊಂಡು ರಸ್ತೆ ನಿಯಮಗಳ ಪಾಲನೆ ಮತ್ತು ಸುರಕ್ಷಿತ ವಾಹನಗಳ ಚಾಲನೆ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಗಿದೆ. ರಸ್ತೆ ಅಫಘಾತಗಳನ್ನು ಸಾಧ್ಯವಾದಷ್ಟು ಕಡಿಮೆ ಮಾಡುವುದು ಹಾಗೂ ಸುರಕ್ಷಿತ ಚಾಲನೆ ಮೂಲಕ ವಾಹನಗಳ ಮತ್ತು ಅವುಗಳ ದಾಖಲೆಗಳನ್ನು ಸುಸ್ಥಿತಿಯಲ್ಲಿಟ್ಟುಕೊಳ್ಳುವಂತೆ ಜನರಿಗೆ ಅರಿವು ಮೂಡಿಸುವುದು ಈ ಮಾಸಾಚರಣೆಯ ಮುಖ್ಯ ಉದ್ದೇಶವಾಗಿದೆ. ರಸ್ತೆ ಸುರಕ್ಷತಾ ನಿಯಮಗಳು ಇರುವುದು ನಮಗಾಗಿ, ಅವುಗಳನ್ನು ನಾವೆಲ್ಲರೂ ಪಾಲನೆ ಮಾಡಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಶಾಲಾ ಶಿಕ್ಷಣ ಇಲಾಖೆಯ ಎಪಿಸಿಓ ದುಂಡಪ್ಪಗೌಡ ಪಾಟೀಲ, ಪ್ರಾದೇಶಿಕ ಸಾರಿಗೆ ಇಲಾಖೆಯ ಹಿರಿಯ ಮೋಟಾರ ವಾಹನ ನಿರೀಕ್ಷಕರಾದ ಜಿ.ಎಂ ಸುರೇಶ್, ಪ್ರಭಾಕರ್ ಹಾಗೂ ವಿನಾಯಕ ನಾಯಕ, ಮೋಟಾರು ವಾಹನ ನಿರೀಕ್ಷಕರಾದ ವಿಜೇಂದ್ರ ಡವಳಗಿ, ಪಿ.ಮಂಜುನಾಥನ & ಆರ್.ಪ್ರದೀಪ್ ಕುಮಾರ್ ಸೇರಿದಂತೆ ಸಾರಿಗೆ ಇಲಾಖೆಯ ಇತರೆ ಅಧಿಕಾರಿ ಮತ್ತು ಸಿಬ್ಬಂದಿಗಳು, ಕೊಪ್ಪಳ ಜಿಲ್ಲೆಯ ಲಾರಿ, ಬಸ್, ಮ್ಯಾಕ್ಸಿ, ಕ್ಯಾಬ್, ಟ್ಯಾಕ್ಸಿ, ಆಟೋಗಳ ಚಾಲಕರು & ಮಾಲಕರ ಸಂಘದ ಪ್ರತಿನಿಧಿಗಳು, ವಾಹನ ತರಬೇತಿ ಶಾಲೆಯ ಮುಖ್ಯಸ್ಥರು, ಸಿಬ್ಬಂದಿ ಹಾಗೂ ವಿವಿಧ ವಾಹನಗಳ ಮಾರಾಟ ಸಂಸ್ಥೆಯ ಮತ್ತು ಇತರೆ ಸಂಸ್ಥೆಗಳ ಪ್ರತಿನಿಧಿಗಳು, ಸಾರ್ವಜನಿಕರು ಮತ್ತಿತರರು ಉಪಸ್ಥಿತರಿದ್ದರು.

## ನರಸಿಂಹರಾವ್‌ರಿಂದ ಕುಂದುಕೊರತೆ ವಿಚಾರಣೆ

• ಮಲ್ಲಮ್ಮ ನುಡಿ ವಾರ್ತೆ ಪೀಣ್ಯ ದಾಸರಹಳ್ಳಿ

ನಾಲ್ವಡಿ ಕೃಷ್ಣರಾಜ ಒಡೆಯರ್ ವಾರ್ಡ್ ಜಿಬಿಎ ಆಕಾಂಕ್ಷಿ ಕಾಂಗ್ರೆಸ್ ಪ್ರಭಾವಿ ಯುವ ಮುಖಂಡ ನರಸಿಂಹರಾವ್ (ರಾಹುಲ್), 'ಹಲವಾರು ವರ್ಷಗಳಿಂದ ಕಾಂಗ್ರೆಸ್ ಪಕ್ಷದ ಶಿಸ್ತಿನ ಸಿಪಾಯಿಯಾಗಿ ಕಾರ್ಯನಿರ್ವಹಿಸುತ್ತಾ ಪಕ್ಷವಹಿಸಿದ ಎಲ್ಲ ಜವಾಬ್ದಾರಿಗಳನ್ನು ಶ್ರದ್ಧೆಯಿಂದ ಮಾಡಿ, ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸುತ್ತಾ ಬಂದಿದ್ದೇನೆ. ನಾನು ಕೂಡ ನಾಲ್ವಡಿ ಕೃಷ್ಣರಾಜ ಒಡೆಯರ್ ವಾರ್ಡ್ ನ ಕಾಂಗ್ರೆಸ್ ಆಕಾಂಕ್ಷಿಯಾಗಿದ್ದು ನಿಮ್ಮೆಲ್ಲರ ಆಶೀರ್ವಾದ ದೊರೆತಲ್ಲಿ ನಿಮ್ಮೆಲ್ಲರ ಸೇವೆ ಮಾಡಲು ಅವಕಾಶ ಸಿಗುತ್ತದೆ. ಹಾಗೂ ಈ ಬಾರಿ ಚುನಾವಣೆಯಲ್ಲಿ ಸ್ಪರ್ಧಿಸುವುದು ಖಚಿತ', ಎಂದು ಹೇಳಿದರು.

ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ನಾಲ್ವಡಿ ಕೃಷ್ಣರಾಜ ಒಡೆಯರ್ ವಾರ್ಡ್ ನ ಕಾಂಗ್ರೆಸ್ ಪಕ್ಷದ ಜಿಬಿಎ ಪ್ರಬಲ ಆಕಾಂಕ್ಷಿ ನರಸಿಂಹರಾವ್ ( ರಾಹುಲ್) ಅವರ ನೇತೃತ್ವದಲ್ಲಿ ಶ್ರೀ ಮಹಾಶಕ್ತಿ ಮಾರಿಯಮ್ಮ ದೇವಿಯ ಪೂಜಾ ಕಾರ್ಯಕ್ರಮ ಹಾಗೂ ಗಜಾನನ ನಗರ ನಿವಾಸಿಗಳ ಕುಂದು-ಕೊರತೆ ಆಲಿಸಿದರು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ



ಮಾಜಿ ಬಿಬಿಎಂಪಿ ಸದಸ್ಯರು ಹಾಗೂ ಮಾಜಿ ಬಿಬಿಎಂಪಿ ಸದಸ್ಯ ಎಂ.ಕೇಶವಮೂರ್ತಿ, ಆಡಳಿತ ಪಕ್ಷದ ನಾಯಕರು ಹಾಗೂ ತೆರಿಗೆ ಮತ್ತು ಆರ್ಥಿಕ ಸಮಿತಿ ಅಧ್ಯಕ್ಷರಾದ ಎಂ.ಶಿವರಾಜ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಮಹಾಲಕ್ಷ್ಮಿಪುರ ಹಾಗೂ ಮಾಧ್ಯಮ ವಿಭಾಗದ ಅಧ್ಯಕ್ಷರಾದ ಎಂ.ಜಿ. ಸುಧೀಂದ್ರ, ಕಾಂಗ್ರೆಸ್ ಮುಖಂಡರು ಹಾಗೂ ಡಾ.ಪುನೀತ್ ರಾಜಕುಮಾರ್ ವಾರ್ಡ್ ಎಂ.ಕುಮಾರ್ ಗೌಡ್ರು, ಮುಂತಾದವರು ಆಗಮಿಸಿ ಮಹಾ ಶಕ್ತಿ ಮಾರಿಯಮ್ಮ ದೇವಿಗೆ ಪೂಜೆ ಸಲ್ಲಿಸಿದರು.

ನಾಲ್ವಡಿ ಕೃಷ್ಣರಾಜ ಒಡೆಯರ್ ವಾರ್ಡಿಗೆ ನರಸಿಂಹ ರಾವ್ (ರಾಹುಲ್) ಅವರು ಕೂಡ ಆಕಾಂಕ್ಷಿಯಾಗಿದ್ದು ಪಕ್ಷ ಸೇವೆಯನ್ನು ಗುರುತಿಸಿ ಜಿಬಿಎ ಚುನಾವಣೆಯಲ್ಲಿ ಸ್ಪರ್ಧಿಸಲು ಅವಕಾಶ ನೀಡಿದ್ದಲ್ಲಿ ನಾವು ಅವರಿಗೆ ಬೆಂಬಲ ಸೂಚಿಸುತ್ತೇವೆ ಎಂದು ಆಡಳಿತ ಪಕ್ಷದ ನಾಯಕರು ಹಾಗೂ ತೆರಿಗೆ ಮತ್ತು ಆರ್ಥಿಕ ಸಮಿತಿ ಅಧ್ಯಕ್ಷರಾದ ಎಂ. ಶಿವರಾಜ್ ಹೇಳಿದರು.

ಪೆಂಚಲಮ್ಮ ಚಿನ್ನ ನರಸಯ್ಯ, ಮಕ್ಕಳು, ಮೊಮ್ಮಕ್ಕಳು ಹಾಗೂ ಕುಟುಂಬದ ವರ್ಗದವರಿಂದ ಮಹಾಲಕ್ಮೀ ಲೇಔಟ್ ವಿಧಾನಸಭಾ ಕ್ಷೇತ್ರದ ನಾಲ್ವಡಿ ಕೃಷ್ಣರಾಜ ಒಡೆಯರ್ ವಾರ್ಡ್ ಗಜಾನನ ನಗರದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ವಾರ್ಡ್ ಜಿಬಿಎ ಆಕಾಂಕ್ಷಿ ಹಾಗೂ ಕಾಂಗ್ರೆಸ್ ನ ಪ್ರಭಾವಿ ಯುವ ಮುಖಂಡ ನರಸಿಂಹರಾವ್ (ರಾಹುಲ್) ನೇತೃತ್ವದಲ್ಲಿ ಹಮ್ಮಿಕೊಂಡಿದ್ದ ಶ್ರೀ ಮಹಾಶಕ್ತಿ ಮಾರಿಯಮ್ಮ ಪೂಜಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಪೂಜಾ ಕಾರ್ಯಕ್ರಮದ ಪ್ರಯುಕ್ತ ಭಕ್ತಾದಿಗಳಿಗೆ ಅನ್ನ ಸಂತರ್ಪಣೆ ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ವಾರ್ಡ್ ಅಧ್ಯಕ್ಷ ಶಿವಶಂಕರ್, ಮಹಾಲಕ್ಷ್ಮೀ ಲೇಔಟ್ ಯುವ ಕಾಂಗ್ರೆಸ್ ಅಧ್ಯಕ್ಷ ಸ್ಯಾಮುಯಲ್ ಎಸ್, ಡಾ. ಪುನೀತ್ ರಾಜ್ ಕುಮಾರ್ ವಾರ್ಡ್ ಅಧ್ಯಕ್ಷ ಕೆ ಕೆ ಶೇಖರ್, ನಾಗಪುರ ವಾರ್ಡ್ ಅಧ್ಯಕ್ಷ ಪುರುಷೋತ್ತಮ್, ಮಹಿಳಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷೆ ಸುನಿತ ಬಾಯಿ, ನಾಲ್ವಡಿ ಕೃಷ್ಣ ರಾಜ ಒಡೆಯರ್ ವಾರ್ಡ್ ಮಹಿಳಾ ಅಧ್ಯಕ್ಷೆ ಶಾರದ ಹಾಗೂ ಸ್ಥಳೀಯ ಮುಖಂಡರಾದ ನರಸಯ್ಯ ಸೇರಿದಂತೆ ಹಲವಾರು ಮುಖಂಡರು, ಸ್ಥಳೀಯರು ಉಪಸ್ಥಿತರಿದ್ದರು.

## ಹಿರಿಯ ಪತ್ರಕರ್ತರಿಂದ ಶುಭಾಶಯ



**ಗುರುಮಠಕಲ್:** ತಾಲೂಕಿನ ಮೊದಲ ಪತ್ರಕರ್ತರು ಹಾಗೂ ನಿವೃತ್ತ ಶಿಕ್ಷಕರಾದ ಶ್ರೀ ಬಸವರಾಜಪ್ಪ ಬೂದಿ ಅವರು ಮಲ್ಲಮ್ಮ ನುಡಿ ಪತ್ರಿಕೆಯ ಹೊಸ ವರ್ಷದ ಕ್ಯಾಲೆಂಡರ್ ಸ್ವೀಕರಿಸಿ ಮಲ್ಲಮ್ಮ ನುಡಿ ಪತ್ರಿಕೆ ಕೇಂದ್ರ ಮತ್ತು ರಾಜ್ಯ ರಾಜಕೀಯ, ಸ್ಥಳೀಯ ಸುದ್ದಿ, ಸಂಸ್ಕೃತಿ ಮತ್ತು ಸಮುದಾಯ ಚಟುವಟಿಕೆಗಳನ್ನು ಶಕ್ತಿಯುತವಾಗಿ ಪ್ರಕಟಿಸುತ್ತಿದ್ದು, ಏಕಕಾಲದಲ್ಲಿ ಎಲ್ಲೆಡೆ ಪ್ರಾದೇಶಿಕ ಸುದ್ದಿಗಳನ್ನು ತಲುಪಿಸುತ್ತಿರುವದು ವಿಶೇಷವಾಗಿದೆ ಎಂದು ಹೇಳಿ ಶುಭ ಕೋರಿದರು.

ಈ ಸಂದರ್ಭದಲ್ಲಿ ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷರಾದ ಶಿವಾನಂದ ಬೂದಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ತಾಲೂಕ ಅಧ್ಯಕ್ಷ ರವಿ ಬುರನೊಳ, ಗುರುಮಠಕಲ್ ತಾಲೂಕ ವರದಿಗಾರ ಜಗದೀಶ್ ಕುಮಾರ್ ಭೂಮಾ, ಶಿವಕುಮಾರ ಗದ್ವಾಲ್ ಹಾಜರಿದ್ದರು.

## ಎಚ್‌ಐವಿ ಸುತ್ತ ಸಾಗುವ ಭಾವನಾತ್ಮಕ ಸಿನಿಮಾ ದಿ ಟ್ಯಾಬ್ಲೆಟ್




**ಬೆಂಗಳೂರು:** 17ನೇ ಬೆಂಗಳೂರು ಅಂತರರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ತಮಿಳು ಚಲನಚಿತ್ರ ನಿರ್ದೇಶಕ ಅರವಿಂದ್ ಶಿವ ತಮ್ಮ ನಿರ್ದೇಶನದ 'ದಿ ಟ್ಯಾಬ್ಲೆಟ್' (The Tablet) ಚಿತ್ರದ ಚಿತ್ರೋತ್ಸವದಲ್ಲಿ ಪ್ರದರ್ಶನಗೊಳ್ಳುತ್ತಿರುವ ಈ ಸಿನಿಮಾದ ನಿರ್ಮಾಣದ ಹಂತಗಳು, ಪ್ರೇಕ್ಷಕರಿಂದ ವ್ಯಕ್ತವಾದ ಪ್ರತಿಕ್ರಿಯೆ ಮತ್ತು ಈ ಕಥೆಯನ್ನು ಸೃಷ್ಟಿಸಲು ತಮಗಿದ್ದ ವೈಯಕ್ತಿಕ ಪ್ರೇರಣೆಗಳ ಬಗ್ಗೆ ಅವರು ಹಲವು ವಿಚಾರಗಳನ್ನು ಹಂಚಿಕೊಂಡರು.

ಕೊರೊನಾ ಲಾಕ್‌ಡೌನ್ ಅವಧಿಯಲ್ಲಿ ಎಚ್‌ಐವಿ (HIV) ಸೇರಿದಂತೆ ಗಂಭೀರ ಕಾಯಿಲೆಗಳಿಂದ ಪೀಡಿತರಾದ ಮಕ್ಕಳೊಂದಿಗೆ ಸ್ವಯಂಸೇವಕರಾಗಿ ಕೆಲಸ ಮಾಡುತ್ತಿದ್ದಾಗ ಈ ಚಿತ್ರದ ಕಥೆಯ ಕಿಡಿ ಮೂಡಿತು ಎಂದು ಅರವಿಂದ್ ಶಿವ ವಿವರಿಸಿದರು. ಈ ಅನುಭವದ ಮೂಲಕ ಸಮಾಜದಲ್ಲಿ ಎಚ್‌ಐವಿ ಕುರಿತಾದ ಆಳವಾದ ಕಳಂಕ ಮತ್ತು ಭಯದ ಬಗ್ಗೆ ಅವರಿಗೆ ಅರಿವಾಯಿತು. ಈ ಚಿತ್ರದ ನಿರ್ಮಾಣ ಪ್ರಕ್ರಿಯೆಯು ವೈಯಕ್ತಿಕವಾಗಿ ತಮ್ಮಲ್ಲಿ ಬದಲಾವಣೆ ತಂದಿತು ಮತ್ತು ಸಿನಿಮಾವು ಸತ್ಯ ಹಾಗೂ ಸಂವೇದನಾಶೀಲತೆಯಿಂದ ಕೂಡಿರಲು ಈ ಅನುಭವಗಳು ಸಹಕಾರಿಯಾದವು ಎಂದು ಅವರು ಹೇಳಿದರು. ಆ ಸಮಯದಲ್ಲಿ ಕಂಡುಕೊಂಡ ನೈಜ ಸಂಗತಿಗಳೇ ದಿ ಟ್ಯಾಬ್ಲೆಟ್ ಚಿತ್ರದ ನಿರೂಪಣೆ ಮತ್ತು ಭಾವನಾತ್ಮಕ ಧ್ವನಿಯನ್ನು ರೂಪಿಸಿವೆ ಎಂದರು.

ಚಿತ್ರದ ಛಾಯಾಗ್ರಾಹಕ ವಿನೋಜ್ ಕಾವೇರಿ ಅವರು ತಮ್ಮ ಅನುಭವವನ್ನು ಹಂಚಿಕೊಂಡಿದ್ದು, ಬೆಂಗಳೂರು ಅಂತರರಾಷ್ಟ್ರೀಯ ಚಲನಚಿತ್ರೋತ್ಸವದ ಪ್ರೇಕ್ಷಕರು ತಮ್ಮ ದೃಶ್ಯ ವೈಭವದ ಕೆಲಸವನ್ನು ಗುರುತಿಸಿ ಮೆಚ್ಚುತ್ತಿರುವುದು ಸಂತಸ ತಂದಿದೆ ಎಂದರು. ಚಿತ್ರೀಕರಣದ ಸಮಯದಲ್ಲಿ ತೆಗೆದುಕೊಂಡ ಸೃಜನಾತ್ಮಕ ಸವಾಲುಗಳು ಮತ್ತು ಪ್ರಯೋಗಗಳಿಗೆ ಇಂದು ಸಾರ್ಥಕತೆ ಸಿಕ್ಕಿದೆ ಎಂದು ಅವರು ತಿಳಿಸಿದರು.

## ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ನೀಡಿ





**ಭಾಲ್ಕಿ:** ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ಕಲ್ಪಿಸಿ ದೇಶದ ಉತ್ತಮ ನಾಗರಿಕರನ್ನಾಗಿಸುವ ಹೊಣೆಗಾರಿಕೆ ನಮ್ಮೆಲ್ಲರ ಮೇಲಿದೆ ಎಂದು ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ನ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದ ಅನುಭವ ಮಂಟಪದಲ್ಲಿ ಮಂಗಳವಾರ ಆಯೋಜಿಸಿದ್ದ ಚನ್ನಬಸವೇಶ್ವರ ಪಬ್ಲಿಕ್ ಶಾಲೆಯ ಪ್ರಾಥಮಿಕ ವಿಭಾಗದ ವಾರ್ಷಿಕೋತ್ಸವ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಪ್ರಾಥಮಿಕ ಹಂತದ ಶಿಕ್ಷಣ ಮಕ್ಕಳ ಮುಂದಿನ ಭವಿಷ್ಯ ನಿರ್ಧರಿಸುತ್ತದೆ. ಹಾಗಾಗಿ ಪಾಲಕರು ಮತ್ತು ಶಿಕ್ಷಕರು ಸೇರಿ ಮಕ್ಕಳಿಗೆ ಉತ್ತಮ ಸಂಸ್ಕಾರಯುತ ಶಿಕ್ಷಣ ಕೊಡಿಸುವ ಕೆಲಸ ಮಾಡಬೇಕು ಎಂದು ತಿಳಿಸಿದರು.

ಸಂಸ್ಥೆಯ ಆಡಳಿತಾಧಿಕಾರಿ ಮೋಹನ ರೆಡ್ಡಿ ಸಮಾರಂಭ ಉದ್ಘಾಟಿಸಿದರು. ಪಾರ್ವತಿ ಬಸವ ಗುರುವಿನ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಖಡಕೇಶ್ವರ ಪ್ರೌಢ ಶಾಲೆಯ ಮುಖ್ಯಗುರು ಆನಂದ ಕಲ್ಯಾಣೆ, ಸಫಿಯೋದ್ದಿನ್, ಸಂತೋಷಕುಮಾರ ತೀರ್ಥೆ, ಶೋಭಾಬಾಯಿ, ಉಮೇಶ, ರಾಘವೇಂದ್ರ, ಬಾಲಾಜಿ, ಸುಧೀರ, ಪ್ರಾಚಾರ್ಯರಾದ ಎನ್.ರಾಜು, ರಂಗಾರೆಡ್ಡಿ ಸೇರಿದಂತೆ ಹಲವರು ಇದ್ದರು. ಪ್ರಿನ್ಸಿಪಲ್ ಜಯಲಕ್ಷ್ಮಿ ನಿರೂಪಿಸಿ, ವಂದಿಸಿದರು.

## ರೈತರ, ಬಡವರ, ದಲಿತರ ವಿರೋಧಿ ಬಜೆಟ್



• ಮಲ್ಲಮ್ಮ ನುಡಿ ವಾರ್ತೆ ಬೀದರ್

2026-27ನೇ ಸಾಲಿನ ಕೇಂದ್ರ ಬಜೆಟ್ ರೈತರು, ಬಡವರು, ಕಾರ್ಮಿಕರು, ಹಿಂದುಳಿದವರು ಹಾಗೂ ದಲಿತರ ಹಿತಾಸಕ್ತಿಗೆ ವಿರುದ್ಧವಾಗಿದ್ದು, ಶ್ರೀಮಂತರು ಮತ್ತು ಕಾರ್ಪೊರೇಟ್ ಉದ್ಯಮಿಗಳ ಪರವಾಗಿದೆ ಎಂದು ಬಹುಜನ ಸಮಾಜ ಪಾರ್ಟಿ (ಬಿಎಸ್ಪಿ) ರಾಜ್ಯಾಧ್ಯಕ್ಷ ಎಂ. ಕೃಷ್ಣಮೂರ್ತಿ ಆರೋಪಿಸಿದ್ದಾರೆ.

ನಗರದ ಬರೀದಶಾಹಿ ಸಭಾಂಗಣದಲ್ಲಿ ಆಯೋಜಿಸಿದ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು ಕೃಷಿ, ಶಿಕ್ಷಣ, ಆರೋಗ್ಯ ಹಾಗೂ ಸಮಾಜ ಕಲ್ಯಾಣ ಕ್ಷೇತ್ರಗಳಿಗೆ ಕಡಿಮೆ ಅನುದಾನ ನೀಡಿರುವುದರಿಂದ ಜನಸಾಮಾನ್ಯರಿಗೆ ಅನ್ಯಾಯವಾಗಿದೆ. ನಿರುದ್ಯೋಗ ನಿವಾರಣೆ, ಬೆಲೆ ಇಳಿಕೆ ಹಾಗೂ ಬಡವರ ವಸತಿ ಕುರಿತು ಯಾವುದೇ ಸ್ಪಷ್ಟ ಯೋಜನೆಗಳಿಲ್ಲ. ಈ ಬಜೆಟ್ ಶ್ರೀಮಂತರನ್ನು ಮತ್ತಷ್ಟು ಶ್ರೀಮಂತರನ್ನಾಗಿಸಿ, ಬಡ ಹಾಗೂ ಹಿಂದುಳಿದ ವರ್ಗಗಳನ್ನು ಮತ್ತಷ್ಟು ಸಂಕಷ್ಟಕ್ಕೆ ತಳ್ಳಲಿದೆ ಎಂದು ಅವರು ಹೇಳಿದ್ದಾರೆ.

ಈ ಸಂದರ್ಭದಲ್ಲಿ ವಲಯ ಉಸ್ತುವಾರಿ ಎಲ್. ಆರ್. ಭೋಸ್ಲೆ, ರಾಜ್ಯ ಪದಾಧಿಕಾರಿಗಳಾದ ಅಶೋಕ, ರಾಜ್ಯ ಕಾರ್ಯದರ್ಶಿ ಜ್ಞಾನೇಶ್ವರ ಸಿಂಗಾರೆ, ಜಿಲ್ಲಾ ಅಧ್ಯಕ್ಷ ಕಪಿಲ ಗೊಡಬೋಲೆ, ಜಿಲ್ಲಾ ಸಂಯೋಜಕ ರಾಜಕುಮಾರ ಮೂಲಭಾರತಿ, ಅಂಬಾದಾಸ್ ಚಕ್ರವರ್ತಿ, ಬೀದರ್ ಉತ್ತರ ವಿಧಾನಸಭಾ ಅಧ್ಯಕ್ಷ ಮಹೇಶ್ ಭೋಲಾ, ಜಿಲ್ಲಾ ಖಜಾಂಚಿ ಸುರೇಶ್ ಜೋಜನಾಕರ್, ಸಚಿನ್ ಗಿರಿ, ಜಿಲ್ಲಾ ಸಂಯೋಜಕ ಜಾಫರ್ ಖುರೇಷಿ, ಬಸವಕಲ್ಯಾಣ ಅಧ್ಯಕ್ಷ ಶಂಕರ್ ಫುಲೇ, ಔರಾದ್ ಅಧ್ಯಕ್ಷ ಮಲ್ಲಿಕಾರ್ಜುನ ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಶ್ರೀಕರಿಯಮ್ಮ ದೇವಿ ಮೂರ್ತಿ ಪ್ರಾಣ ಪ್ರತಿಷ್ಠಾಪನೆ

• ಮಲ್ಲಮ್ಮ ನುಡಿ ವಾರ್ತೆ ಕುಕನೂರ

ತಾಲೂಕಿನ ಬಟಪ್ಪನಹಳ್ಳಿ ಗ್ರಾಮದಲ್ಲಿ ಶ್ರೀಕರಿಯಮ್ಮ ದೇವಿ ದೇವಾಲಯದ ಉದ್ಘಾಟನೆ ಮತ್ತು ಮೂರ್ತಿ ಪ್ರತಿಷ್ಠಾಪನೆ ಹಾಗೂ ಜಾತ್ರಾ ಮಹೋತ್ಸವ ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನೆರವೇರಿಸಲಾಯಿತು.

ಗ್ರಾಮದಲ್ಲಿ ಸೋಮವಾರ ಬೆಳಗಿನ ಜಾವ ಗಂಗಾ ಸ್ಥಳದಿಂದ ಬಾಜಾ ಭಜಂತ್ರಿ ಮೆರವಣಿಗೆಯೊಂದಿಗೆ ಪುರ ಪ್ರವೇಶ ನಂತರ ಮಧ್ಯಾಹ್ನ ಅನ್ನ ಸಂತರ್ಪಣೆ ಕಾರ್ಯಕ್ರಮ ನೆರವೇರಿಸಿ. ಸಾಯಂಕಾಲ 6:30 ರಿಂದ ದೇವಿ ಮೂರ್ತಿಯ ಜಲಾಧೀವಾಸ, ಕ್ಷೀರಾಧಿವಾಸ, ಧಾನ್ಯಾದಿವಾಸ, ಶಯನದಿವಾಸ ನೆರವೇರಿಸಿ ನಂತರ ಮಂಗಳವಾರ ಪ್ರತಾಹಕಾಲ ಅಮೃತಗಳಿಗೆ ಪ್ರಾಣ ಪ್ರತಿಷ್ಠಾಪನೆ, ನೇತ್ರೋಮಿಲನ, ಶ್ರೀ ದುರ್ಗಾ ಹೋಮ, ನವಗ್ರಹ ಪೂರ್ಣಾವತಿ, ಶ್ರೀ ಮಹಾಗಣಪತಿ ಪೂಜೆಯೊಂದಿಗೆ ಮಹಾಮಂಗಳಾರತಿ, ತೀರ್ಥ ಪ್ರಸಾದ ವಿತರಣೆ ನಂತರ ಅನ್ನ ಸಂತರ್ಪಣೆಯನ್ನು ಆಯೋಜಿಸಲಾಯಿತು ಎಂದು ಧಾರ್ಮಿಕ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ವಹಿಸಿದ್ದ ಗಿಣಿಗೇರ ಗ್ರಾಮದ ಶ್ರೀಮದಾನೆಗುಂದಿ ಸರಸ್ವತಿ ಪೀಠದ ಪೂಜ್ಯರಾದ ನಾಗಲಿಂಗ ಮಹಾಸ್ವಾಮಿಗಳು ಹೇಳಿದರು.

ಬಟಪ್ಪನಹಳ್ಳಿ ಗ್ರಾಮಸ್ಥರು ವಿಶೇಷವಾಗಿ



ಯುವಕರು ಧಾರ್ಮಿಕ ಕಾರ್ಯಕ್ರಮದಲ್ಲಿ ಅನನ್ಯ ಆಸಕ್ತಿಯನ್ನು ಹೊಂದಿದ್ದು ಜೊತೆಗೆ ಅವರ ಒಗ್ಗಟ್ಟಿನ ಫಲವಾಗಿ ಗ್ರಾಮದಲ್ಲಿ ಹಲವಾರು ಧಾರ್ಮಿಕ ಕಾರ್ಯಕ್ರಮಗಳು ಜರುಗುತ್ತಿದ್ದು ಆ ಭಗವಂತ ಸಕಲ ಸಂಪತ್ತು, ಆರೋಗ್ಯ, ಐಶ್ವರ್ಯಗಳನ್ನು ಸಕಲರಿಗೆ ಕರುಣಿಸಲಿ ಎಂದು ಹೇಳಿದರು.

ಈ ವೇಳೆಯಲ್ಲಿ ಗ್ರಾಮದ ಪ್ರಮುಖರಾದ ವೀರಯ್ಯ ಬದ್ರಾಪುರ, ಹೆಚ್ ಡಿ ಪಾಟೀಲ, ಶರಣಪ್ಪ ಹಾದಿಮನಿ, ಮಲ್ಲಪ್ಪ ಗುಡಿಹಿಂದಲ, ಹಂಚಾಳಪ್ಪ ಕಲಗೋಡಿ, ಚೆನ್ನಪ್ಪ,ಗಂಗಾಧರ ಬಡಿಗೇರ, ಮಹೇಶ ಹುರಿಗಜ್ಜೆ, ಶರಣಪ್ಪ ತಳವಾರ, ಮಹೇಶ್ ದೊಡ್ಮನಿ, ಚೆನ್ನಪ್ಪ ತಳವಾರ್, ಶ್ರೀಧರ ಹೊಸಮನಿ, ಪರಸಪ್ಪ ಹೊಸಮನಿ, ಪಕೀರಪ್ಪ ಪೊತುಂಡಿ, ನಾಗಪ್ಪ ಗುರಿಕಾರ, ಎಲ್ಲಪ್ಪ ಪೋತುಂಡಿ, ಶರಣಪ್ಪ ದೊಡ್ಮನಿ, ಕೆಂಚಪ್ಪ ನಡಲವಾಣಿ ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

## ಅಕ್ಕಮಹಾದೇವಿ ಬಹುಭಾಷಾ ರಾಷ್ಟ್ರೀಯ ವಿಚಾರ ಸಂಕಿರಣ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಜಿಲ್ಲೆಯ ಹೆಮ್ಮೆಯ ಕುವರಿ ಮಹಾ ತಪಸ್ವಿ ಪೂಜ್ಯಶ್ರೀ ಕರುಣದೇವಿ ಮಾತಾವರ ತಪೋಸಾಧನೆಯ ಮತ್ತು ಕನ್ನಡಿಗರ ಹೆಮ್ಮೆಯ ಪ್ರತೀಕವಾಗಿರುವ ಶ್ರೀ ಅಕ್ಕ ಮಹಾದೇವಿ ಚೈತನ್ಯ ಪೀಠದಲ್ಲಿ ರಾಜ್ಯ ಸರ್ಕಾರದ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸಹ ಯೋಗದಲ್ಲಿ ಇದೇ ತಿಂಗಳ 6 ಮತ್ತು 7ರಂದು ಎರಡು ದಿನಗಳ ಕಾಲ ಶ್ರೀ ಅಕ್ಕಮಹಾದೇವಿ ಬಹುಭಾಷಾ ರಾಷ್ಟ್ರೀಯ ವಿಚಾರ ಸಂಕಿರಣ ಸಾಂಸ್ಕೃತಿಕ ಭವನ ಉದ್ಘಾಟನೆ ಗ್ರಂಥಗಳ ಬಿಡುಗಡೆ ಶ್ರೀ ಅಕ್ಕಮಹಾದೇವಿ ರಾಷ್ಟ್ರೀಯ ಪ್ರಶಸ್ತಿ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ಹಮ್ಮಿಕೊಳ್ಳಲಾಗಿದೆ.

ಚೈತನ್ಯ ಪೀಠದ ಅಧಿಪತಿಗಳಾದ ಮಹಾಯೋಗಿನಿ ಪೂಜ್ಯಶ್ರೀ ಕರುಣಾದೇವಿ ಮಾತಾವರು ದಿವ್ಯ ಸಾನಿಧ್ಯದಲ್ಲಿ ನಡೆಯಲಿರುವ ಈ ಕಾರ್ಯಕ್ರಮವನ್ನು ರಾಜ್ಯ ಅರಣ್ಯ ಪರಿಸರ ಜೀವಿ ಶಾಸ್ತ್ರ ಮತ್ತು ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾಗಿರುವ ಶ್ರೀಈಶ್ವರ್ ಖಂಡ್ರೆ ಅವರು ವಿಚಾರ ಸಂಕಿರಣ ವನ್ನು ಉದ್ಘಾಟಿಸುವರು. ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅನುದಾನದಡಿಯಲ್ಲಿ ನಿರ್ಮಾಣವಾಗಿರುವ ಶ್ರೀ ಅಕ್ಕಮಹಾದೇವಿ ಸಾಂಸ್ಕೃತಿಕ ಭವನದ ಲೋಕಾರ್ಪಣೆಯನ್ನು ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀ



ಸೋಮಣ್ಣ ಬೇವಿನ ಮರದ ನೆರವೇರಿಸುವರು. ವಿಚಾರ ಸಂಕಿರಣದ ಅಂಗವಾಗಿ ಶ್ರೀ ಡಾ : ರಾಜಶೇಖರ್ ಶಿವಾಚಾರ್ಯರ ಸಂಪಾದಕತ್ವದ ಅಕ್ಕಮಹಾದೇವಿಯವರ ಸಮಗ್ರ ಸಾಹಿತ್ಯದ ಶಿವ ಚೈತನ್ಯ, (ಕನ್ನಡ), ಪೂಜ್ಯಶ್ರೀ ಕರುಣಾ ದೇವಿ ಮಾತಾ ಅವರ ಪ್ರಧಾನ ಸಂಪಾದಕತ್ವದ ಮತ್ತು ಬಸವರಾಜ ಇಬ್ರಾಹಿಂಪುರ್ ಅವರ ಸಂಪಾದಕತ್ವದ ಅಕ್ಕಮಹಾದೇವಿ ವಚನಾಲು ಶಿವ ದಿವ್ಯ ಪ್ರಭಾ (ತೆಲುಗು)ಮತ್ತು ಸೊಲ್ಲಾಪುರದ ಡಾ: ಶೃತಿಶ್ರೀ ವಡಗಬಾಳಕರ ಅವರ ಅಕ್ಕಮಹಾದೇ ವಿಂಚೇ ವಚನೇ(ಮರಾಠಿ) ಮೂರು ಗ್ರಂಥಗಳು ಶ್ರೀ ಅಕ್ಕಮಹಾದೇವಿ ಕನ್ನಡ ತೆಲುಗು ಸಂಶೋಧನಾ ಕೇಂದ್ರ ಮುಖಾಂತರವಾಗಿ ಬಿಡುಗಡೆ ಗೊಳ್ಳಲಿವೆ.

ಬೀದರ್ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ: ಬಿ. ಎಸ್. ಬಿರಾದಾರ್ ಆಶಯ ಭಾಷಣ ಮಾಡುವವರು. ಚಿಕ್ಕಮಗಳೂರಿನ ಪರಿಸರ ತಜ್ಞ ಚಿಂತಕ ಡಾ:ಕೆ. ಸಿ. ಶಂಕರ( ಇಂಗ್ಲೀಷ) ನ್ಯಾಯವಾದಿಗಳಾದ ಶ್ರೀಮತಿ ಶಕುಂತಲಾ ತಂಬಾಕೆ, ಸೊಲ್ಲಾಪುರದ ಪ್ರೊ. ರಾಜೇಶ್ವರಿ ಲೋಕಪುರೆ, ಡಾ: ರಾಮಚಂದ್ರ ಗಣಾಪುರ( ಕನ್ನಡ), ಪ್ರೊ, ವಿದ್ಯುಲ್ಲತಾ ಹೈದ್ರಾಬಾದ್, ಗೊಗ್ಗಿ ಬಲರಾಮಚಾರ( ತೆಲುಗು) ಡಾ: ಶ್ರುತಿ ಶ್ರೀ ವಡಗಬಾಳಕರ್ ಮರಾಠಿಯಲ್ಲಿ ಪ್ರಬಂಧಗಳನ್ನು ಮಂಡಿಸುವರು.

ಇದೇ ಸಂದರ್ಭದಲ್ಲಿ ಚೈತನ್ಯ ಪೀಠದಿಂದ ಕೊಡ ಮಾಡುವ ಶ್ರೀ ಅಕ್ಕಮಹಾದೇವಿ ರಾಷ್ಟ್ರೀಯ ಪುರಸ್ಕಾರವನ್ನು ಈ ವರ್ಷ ಅಕ್ಕನ ಬಳಗ ( ಸ್ಥಾಪನೆ -1938) ಧಾರವಾಡ , ಹೈದರಾಬಾದಿನ ಶ್ರೀ ನೇತಿ ಮಹೇಶ್ವರ್ ಹಾಗೂ ತೆಲುಗು ಬಸವ ಕೃಪಾ ಪತ್ರಿಕೆಯ ಸಂಸ್ಥಾಪಕರಾದ ಶ್ರೀ ಕಲ್ವ ಮಲ್ಲಿಕಾರ್ಜುನಪ್ಪ ಇವರುಗಳಿಗೆ ಪ್ರದಾನ ಮಾಡಲಾಗುವುದು.

ಬೀದರ್ ದಕ್ಷಿಣದ ಜನಪ್ರಿಯ ಶಾಸಕರಾದ :ಡಾ. ಶೈಲೇಂದ್ರ ಬೆಲ್ದಾಳೆ. ಶ್ರೀ ಸೂರ್ಯಕಾಂತ ನಾಗಮಾರಪಳ್ಳಿ , ಶ್ರೀಶೈಲ್ ದೇವಸ್ಥಾನ ಟ್ರಸ್ಟ್ ಬೋರ್ಡಿನ ಅಧ್ಯಕ್ಷರಾದ ಪಿ.ರಮೇಶ ನಾಯ್ಡು, ಕಾರ್ಯನಿರ್ವಾಹಕ ಅಧಿಕಾರಿಗಳಾದ ಎಂ ಶ್ರೀನಿವಾಸರಾವ್, ರಾಜ್ಯ ಗಡಿಯ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳಾದ ಶ್ರೀ ಪ್ರಕಾಶ್ ಮತ್ತಿಹಳ್ಳಿ ಸದಸ್ಯರಾದ ಸಂಜು ಕುಮಾರ್ ಅತಿವಾಳೆ ಎನ್ಎಸ್ಎಸ್‌ಕೆ, ಸದಸ್ಯ ಕುಶಾಲ್ ರಾವ ಯಾಬಾ, ಸೊಲ್ಲಾಪುರದ ವಾಗ್ಮಿಗಳಾದ ಸಿಂಧೂತಾಯಿ ಕಾಡಾದಿ ಜಯಶ್ರೀ ರೇವಣಸಿದ್ಧ ಚಡಚಣಕರ್ ಹೈದರಾಬಾದಿನ ವೀರಶೈವ ಲಿಂಗಾಯತ ಸಂಕ್ಷೇಮ ಸಮಿತಿಯ ಅಧ್ಯಕ್ಷೇ ರುದ್ರಮಾದೇವಿ ಶ್ರೀಶೈಲ ತೆಲುಗು ವಿಶ್ವವಿದ್ಯಾಲಯ ಅಧ್ಯಯನ ಪೀಠದ ಡೀನ್ ಎಂ ಶ್ರೀನಿವಾಸ ರಾವ್, ಡಾ: ಸುಭಾಷ್ ಪಾಟೀಲ್, ಡಾ: ಓಂಕಾರ ಸ್ವಾಮಿ ಮುಂತಾದವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ರಾಜ್ಯ ದಿಶಾ ಕಮಿಟಿ ಸದಸ್ಯರಾದ ಶಿವಯ್ಯ ಸ್ವಾಮಿ ಕಮಠಾಣ ನಾಂದಿ ನುಡಿಯನ್ನು ಹೇಳುವರು. ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ನಾಡಿನ ಪ್ರಸಿದ್ಧ ಕಲಾವಿದರು ಭಾಗವಹಿಸುವರು.

ಈ ಪ್ರಯುಕ್ತ ಜಿಲ್ಲೆಯ ಭಕ್ತರು ಅಭಿಮಾನಿಗಳು ಈ ಐತಿಹಾಸಿಕ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸಮಾರಂಭವನ್ನು ಯಶಸ್ವಿಗೊಳಿಸಬೇಕೆಂದು ಚೈತನ್ಯ ಪೀಠದ ಸಂಚಾಲಕರು ಮತ್ತು ಅಕ್ಕಮಹಾದೇವಿ ಕನ್ನಡ ತೆಲುಗು ಸಂಶೋಧನಾ ಕೇಂದ್ರದ ನಿರ್ದೇಶಕರಾದ ಶ್ರೀಡಾ: ರಾಜಶೇಖರ ಶಿವಾಚಾರ್ಯ ಸ್ವಾಮಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂತರ್ ಕಾಲೇಜು ಕ್ರೀಡಾ ಸ್ಪರ್ಧೆಗಳ ಯಶಸ್ವಿ ಆಯೋಜನೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರದ ಮಾರ್ಗದರ್ಶನದಲ್ಲಿ ವಿ.ವಿ. ಸಂಘ ಸಂಸ್ಥೆಗೆ ಸೇರಿದ ಎಸ್.ಎ.ಎಸ್. ಎಂ ಮಹಿಳಾ ಕಾಲೇಜು, ಬಳ್ಳಾರಿಯಲ್ಲಿ ಅಂತರ್ ಕಾಲೇಜು ತ್ರೋಬಾಲ್ ಮತ್ತು ಕ್ರಾಸ್ ಕಂಟ್ರಿ ರನ್ (10 ಕಿ.ಮೀ.) ಕ್ರೀಡಾ ಸ್ಪರ್ಧೆಗಳು ಫೆಬ್ರವರಿ 3 ಮತ್ತು 4ರಂದು ಭವ್ಯವಾಗಿ ನಡೆದವು.

ಕಾರ್ಯಕ್ರಮಕ್ಕೆ ಕಾಲೇಜು ಗವರ್ನಿಂಗ್ ಕೌನ್ಸಿಲ್ ಅಧ್ಯಕ್ಷೆ ಶ್ರೀಮತಿ ಕತ್ಯಾಯನಿ ಎಂ. ಮಾರಿದೇವಯ್ಯ ಅಧ್ಯಕ್ಷತೆ ವಹಿಸಿದ್ದರು. ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ದೈಹಿಕ ಶಿಕ್ಷಣ ನಿರ್ದೇಶಕ ಡಾ. ಶಶಿಧರ್ ಕೆಲ್ಲೂರು ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು.

ವಿ.ವಿ. ಸಂಘ ನಿರ್ವಹಣಾ ಮಂಡಳಿ ಸದಸ್ಯರಾದ ಶ್ರೀ ಕೋರಿ ವಿರೂಪಾಕ್ಷಪ್ಪ, ಶ್ರೀ ಪಾರ್ವತೀಶ, ಕಾಲೇಜು ಪ್ರಾಂಶುಪಾಲ ಡಾ.



ದೂಪಂ ಸತೀಶ್, ಐಕ್ಯೂಎಸಿ ಸಂಯೋಜಕ ಡಾ. ಸಯ್ಯದಾ ಕೆ. ತನ್ವೀರ್, ಸಹ ಸಂಯೋಜಕ ಡಾ. ಭೀಮಾನಗೌಡ ಪಾಟೀಲ, ದೈಹಿಕ ಶಿಕ್ಷಣ ನಿರ್ದೇಶಕ ಶ್ರೀ ಅಶೋಕ್ ಜಿ., ವಿಭಾಗ ಕಾರ್ಯದರ್ಶಿ ಮಿಸ್ ಪ್ರತೂಷಾ, ಸಂಯುಕ್ತ ಕಾರ್ಯದರ್ಶಿ ಮಿಸ್ ಮಲ್ಲೇಶ್ವರಿ ಸೇರಿದಂತೆ ಅನೇಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ದೀಪಪ್ರಜ್ವಲನದ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಪ್ರಾಂಶುಪಾಲ ಡಾ. ದೂಪಂ ಸತೀಶ್ ದೈಹಿಕ ಶಿಕ್ಷಣ ವಿಭಾಗದ ಸಾಧನೆಗಳು ಮತ್ತು ಚಟುವಟಿಕೆಗಳ ಬಗ್ಗೆ ವಿವರಿಸಿದರು. ಮುಖ್ಯ ಅತಿಥಿ ಡಾ. ಶಶಿಧರ್ ಕೆಲ್ಲೂರು ಕ್ರೀಡೆಗಳ ಮಹತ್ವವನ್ನು ವಿವರಿಸಿ, ವಿದ್ಯಾರ್ಥಿಗಳು ಕ್ರೀಡಾಕ್ಷೇತ್ರದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವುದರಿಂದ ಅವರ ಭವಿಷ್ಯ ಉಜ್ವಲವಾಗುತ್ತದೆ ಎಂದು ಹೇಳಿದರು.

ಅಧ್ಯಕ್ಷೆ ಶ್ರೀಮತಿ ಕತ್ಯಾಯನಿ ಎಂ. ಮಾರಿದೇವಯ್ಯ ಕ್ರೀಡಾ ಸ್ಪರ್ಧೆಗಳ ಯಶಸ್ವಿ ಆಯೋಜನೆಗೆ ಸಂತೋಷ ವ್ಯಕ್ತಪಡಿಸಿ, ದೈಹಿಕ ಶಿಕ್ಷಣ ನಿರ್ದೇಶಕ ಶ್ರೀ ಅಶೋಕ್ ಗೋಳ್ಳ ಅವರ ಪರಿಶ್ರಮವನ್ನು ಪ್ರಶಂಸಿಸಿದರು.

ಕನ್ನಡ ವಿಭಾಗದ ಮುಖ್ಯಸ್ಥೆ ಡಾ. ಡಿ. ಸುವರ್ಣಮ್ಮ ಕಾರ್ಯಕ್ರಮ ನಿರ್ವಹಿಸಿದರು. ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ. ಪಿ.ಜೆ. ಬಿಂದು ಅತಿಥಿಗಳನ್ನು ಸ್ವಾಗತಿಸಿದರು. ಬಿಸಿಎ ದ್ವಿತೀಯ ಸೆಮಿಸ್ಟರ್ ವಿದ್ಯಾರ್ಥಿನಿ ಬಿಂದು ದೇಸಾಯಿ ಪ್ರಾರ್ಥನೆ ಸಲ್ಲಿಸಿದರು. ದೀಪ್ತಿ, ತನೂಜ, ಅಮೃತ, ಚೈತನ್ಯ ನಾದಗೀತೆಯನ್ನು ಹಾಡಿದರು. ಡಾ. ಮಂಗಳ ಬೋಜಾ ಧನ್ಯವಾದ ಅರ್ಪಿಸಿದರು.

ರಾಜ್ಯದ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು, ಅಧ್ಯಾಪಕರು ಹಾಗೂ ವಿಶೇಷ ಆಹ್ವಾನಿತರು ಕಾರ್ಯಕ್ರಮದಲ್ಲಿ ಭಾಗವಹಿಸಿ ಕ್ರೀಡಾ ಸ್ಪರ್ಧೆಗಳನ್ನು ವೀಕ್ಷಿಸಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)